ಸಂಪುಟ: 05 ಸಂಚಿಕೆ: 118 ಪುಟಗಳು: 08 ಶುಕ್ರವಾರ 11 ಜುಲೈ 2025
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಿಮ್ಮ ಅಹಂಕಾರ ನಿಮ್ಮೆದುರಿಗೆ ಮುರಿದು ಬೀಳುವಾಗ ಆಗುವ ಸಂಕಟ ಹೇಳಿ ಮುಗಿಯುವುದಲ್ಲ. ಅದಕ್ಕೇ ಅಧಿಕಾರವಿದ್ದಾಗ ತಗ್ಗಿ-ಬಗ್ಗಿ ನಡೆಯುವುದು ಒಳ್ಳೆಯದು!

# 5 ವರ್ಷ ನಾನೇ ಸಿಎಂ ಸಿದ್ದು...ಗುದ್ದು...!

- ಸಿದ್ದರಾಮಯ್ಯ ನೀನಿಲ್ಲದೆ ಮತ್ಯಾರು ಇಲ್ಲವಯ್ಯ
- ಸಿಎಂ ಕುರ್ಚಿ ಖಾಲಿ ಇಲ್ಲ ಪಕ್ಷದಲ್ಲಿ ಅದರ ಚರ್ಚೆಯೇ ಇಲ್ಲ ಸಿದ್ದರಾಮಯ್ಯ ಸ್ಪಷ್ಟನೆ
- ಇತ್ತ ಆಪ್ತ ಬಣದಿಂದಲೂ ಹೈಕಮಾಂಡ್‌ಗೆ ಪರೋಕ್ಷ ಸಂದೇಶ !
- ಅಲ್ಲೋಲ ಕಲ್ಲೋಲ ಸೃಷ್ಟಿ
- ಹೈಕಮಾಂಡ್ ತೀರ್ಮಾನಕ್ಕೆ ಬದ್ಧ

• ಉದಯವಾಹಿನಿ, ನವದೆಹಲಿ

ರಾಜ್ಯದಲ್ಲಿ ಸಿಎಂ ಹುದ್ದೆ ಖಾಲಿ ಇಲ್ಲ. ಪಕ್ಷದಲ್ಲಿ ಮುಖ್ಯಮಂತ್ರಿ ಬದಲಾವಣೆ ಚರ್ಚೆಯೇ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಅವರು ಸ್ಪಷ್ಟಪಡಿಸಿದ್ದಾರೆ. ದೆಹಲಿ ಭೇಟಿಯಲ್ಲಿರುವ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿ, ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ ಎಂದು ಉಪಮುಖ್ಯಮಂತ್ರಿ ಡಿಕೆಶಿವಕುಮಾರ್ ಅವರೇ ಹೇಳಿದ್ದಾರೆ. ಹೀಗಾಗಿ, ಈ ಕುರಿತ ಚರ್ಚೆಯೇ ಇಲ್ಲ. ಹೈಕಮಾಂಡ್ ಯಾವುದೇ ನಿರ್ಧಾರ ತೆಗೆದುಕೊಂಡರೂ, ನಾವಿಬ್ಬರೂ ಅದನ್ನು

1. ಐದು ವರ್ಷ ನಾನೇ ಸಿಎಂ ಎಂದ ಸಿದ್ದರಾಮಯ್ಯ
2. ಸಿದ್ದರಾಮಯ್ಯ ಮಾತಿಗೆ ಆಪ್ತರ ಪೂರ್ಣ ಬೆಂಬಲ
3. ಪರೋಕ್ಷವಾಗಿ ಹೈಕಮಾಂಡ್‌ಗೂ ಸಂದೇಶ

ಪಾಲಿಸುತ್ತೇವೆ. ಬದ್ಧರಾಗಿದ್ದೇವೆ ಎಂದು ನಾಯಕತ್ವ ಬದಲಾವಣೆಯನ್ನು ನಿರಾಕರಿಸಿದರು. ಕರ್ನಾಟಕದ ಎಐಸಿಸಿ ಉಸ್ತುವಾರಿ ರಣದೀಪ್ ಸುರ್ಜೇವಾಲಾ ಅವರು ಶಾಸಕರೊಂದಿಗೆ ಸರಣಿ ಮಾತುಕತೆ ನಡೆಸುವುದರ ಉದ್ದೇಶವೇನು ಎಂಬ ಪ್ರಶ್ನೆಗೆ, ಇದನ್ನು ಅವರಿಗೇ (ಸುರ್ಜೇವಾಲಾ) ಕೇಳಿ. ನಾಯಕತ್ವ ಬದಲಾವಣೆಯ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ

**ಹೈಕಮಾಂಡ್ ತೀರ್ಮಾನಕ್ಕೆ ಬದ್ಧ**



**ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ. ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಮುಂದುವರಿಯುತ್ತಾರೆ. ಒಬಿಸಿ ಸಲಹಾ ಮಂಡಳಿಯಲ್ಲಿ ಹಲವು ಮಂದಿ ಇದ್ದಾರೆ. ಸಿದ್ದರಾಮಯ್ಯ ಹಾಲಿ ಮುಖ್ಯಮಂತ್ರಿ ಆಗಿರುವ ಕಾರಣ ಅವರನ್ನೂ ಸೇರಿಸಿಕೊಂಡು ಜವಾಬ್ದಾರಿ ಕೊಟ್ಟಿದ್ದಾರೆ ಎಂದರು. ಅದರಲ್ಲಿ ಯಾವುದೇ ತಪ್ಪು ಇಲ್ಲ. ಆದರೆ, ಈಗ ಮುಖ್ಯಮಂತ್ರಿ ಹುದ್ದೆ ಖಾಲಿ ಇಲ್ಲ ಎಂದರು. ಸೆಪ್ಟೆಂಬರ್ ಕ್ರಾಂತಿ ಬಗ್ಗೆ ಸಚಿವ ಕೆ.ಎನ್.ರಾಜಣ್ಣ ಅವರನ್ನೇ ಕೇಳಿ ಎಂದು ನುಡಿದರು.**

**-ಕೆ.ಎಚ್.ಮುನಿಯಪ್ಪ, ಆಹಾರ ಸಚಿವ**



**ರಾಜ್ಯದಲ್ಲಿ ಯಾವುದೇ ನಾಯಕತ್ವ ಬದಲಾವಣೆ ಇಲ್ಲ. ಸದ್ಯ ಸಿಎಂ ಹುದ್ದೆ ಖಾಲಿ ಇಲ್ಲ. ಸಿದ್ದರಾಮಯ್ಯ ಅವರೇ 5 ವರ್ಷ ಸಿಎಂ. ನಾನು ಅವರಿಗೆ ಬೆಂಬಲ ನೀಡಲೇಬೇಕು. ಪಕ್ಷದಲ್ಲಿ ನನಗೆ ಯಾರ ಬೆಂಬಲವೂ ಬೇಡ. ಶಾಸಕರು ಮುಂದಿನ ವಿಧಾನಸಭಾ ಚುನಾವಣೆಗಳಲ್ಲಿ ಮತ್ತೆ ಗೆಲುವು ಸಾಧಿಸುವಂತೆ ನೋಡಿಕೊಳ್ಳುವುದು ನನ್ನ ಆದ್ಯತೆ.**


**– ಡಿಕೆಶಿ, ಉಪ ಮುಖ್ಯಮಂತ್ರಿ**

ಎಂದು ಸುರ್ಜೇವಾಲಾ ಅವರೇ ಸ್ಪಷ್ಟವಾಗಿ ಹೇಳಿದ್ದಾರೆ. ಇದರಲ್ಲಿ ಯಾವುದೇ ಊಹಾಪೋಹಗಳು ಬೇಕಿಲ್ಲ. ಇದೆಲ್ಲವೂ ಮಾಧ್ಯಮಗಳಲ್ಲಿ ಮಾತ್ರ ಚರ್ಚಿಸಲಾಗುತ್ತಿದೆ. ಪಕ್ಷದ ಮಟ್ಟದಲ್ಲಿ ಇಂತಹ ಯಾವುದೇ ಚರ್ಚೆ ನಡೆದಿಲ್ಲ ಎಂದರು. ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಲು ಸಮಯಾವಕಾಶ ಕೇಳಿದ್ದೇನೆ. ಇಲ್ಲಿಯವರೆಗೆ ಯಾವುದೇ ಮಾಹಿತಿ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

**ಪತ್ನಿಗೆ ನೋಟಿಸ್: ವಿಷಯ ತಿಳಿದಿಲ್ಲ:** ಮುಡಾ ಪ್ರಕರಣದಲ್ಲಿ ಉಚ್ಚನ್ಯಾಯಾಲಯ ಮುಖ್ಯಮಂತ್ರಿ ಪತ್ನಿ ಪಾರ್ವತಿ ಅವರಿಗೆ ನೋಟಿಸ್ ಜಾರಿ ಮಾಡಲು ಆದೇಶ ಮಾಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಈ ಬಗ್ಗೆ ನನಗೆ ತಿಳಿದಿಲ್ಲ ಎಂದರು. ಕಾಂಗ್ರೆಸ್ ಆಡಳಿತವಿರುವ ರಾಜ್ಯಗಳ ಪೈಕಿ ಸಿದ್ದರಾಮಯ್ಯ ಮಾತ್ರ ಒಬಿಸಿ ಸಿಎಂ ಆಗಿದ್ದಾರೆ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಯಾರೋ ಒಬ್ಬರು ಇಬ್ಬರು ಹೇಳಿದರೆ ಅದು ಹೈ ಕಮಾಂಡ್ ಚರ್ಚೆ ಮಾಡಿದಂತೆ ಅಲ್ಲ ಎಂದರು.

**ಗ್ಯಾರಂಟಿ ಯೋಜನೆಗಳಿಂದ ಅನುಕೂಲ:** ರಂಭಾಪುರಿ ಮಠದ ಸ್ವಾಮೀಜಿಗಳು ಗ್ಯಾರಂಟಿ ಯೋಜನೆಗಳಿಂದಾಗಿ ಜನ ಸೋಮಾರಿಗಳಾಗಿದ್ದಾರೆ ಎಂದು ಹೇಳಿಕೆ ನೀಡಿರುವ ಬಗ್ಗೆ ಮಾತನಾಡಿ, ಯಾವ ಹಿನ್ನೆಲೆ ಅಥವಾ ಸಂದರ್ಭದಲ್ಲಿ ಸ್ವಾಮೀಜಿಗಳು ಈ ರೀತಿ ಹೇಳಿದ್ದಾರೆ ಎಂದು ನನಗೆ ತಿಳಿದಿಲ್ಲ. ಆದರೆ ಹೆಣ್ಣುಮಕ್ಕಳು ಶಕ್ತಿ ಯೋಜನೆಯಡಿ ಬಸ್ಸಿನಲ್ಲಿ ಉಚಿತವಾಗಿ ಪ್ರಯಾಣ ಮಾಡಿದರೆ ಸೋಮಾರಿಗಳಾಗುತ್ತಾರೆಯೇ ಎಂದು ಪ್ರಶ್ನಿಸಿದರು. ಕರ್ನಾಟಕದಲ್ಲಿ 7 ಕೋಟಿ ಜನರಿದ್ದು ಅದರ ಅರ್ಧ ಭಾಗವಿರುವ 3.5 ಕೋಟಿ ಮಹಿಳೆಯರು ಉಚಿತವಾಗಿ ಬಸ್ಸುಗಳಲ್ಲಿ ಪ್ರಯಾಣಿಸಿದರೆ ಹಣ ಉಳಿತಾಯವಾಗುತ್ತದೆ. ಅವರ ಶಕ್ತಿ ಹೆಚ್ಚಾಗುತ್ತದೆ. ಗೃಹಲಕ್ಷ್ಮಿ ಯೋಜನೆಯಡಿ 2,000 ರೂ. ಒದಗಿಸಿದರೆ ಅವರು ಮಕ್ಕಳನ್ನು ಓದಿಸುತ್ತಾರೆ ಎಂದು ವಿವರಿಸಿದರು.

**ಜೆಡಿಎಸ್ ಅಧಿಕಾರಕ್ಕೆ ಬರುವುದು ಹಗಲುಗನಸು:** ಮೇಕೆದಾಟು ಅಣೆಕಟ್ಟು ನಾವು ಅಧಿಕಾರಕ್ಕೆ ಬಂದರೆ ಮಾತ್ರ ಸಾಧ್ಯವಾಗಲಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿಯವರು ಹೇಳಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ನಾವು ಅಧಿಕಾರಕ್ಕೆ ಬಂದ ಕೂಡಲೆ ಮೇಕೆದಾಟು ಅಣೆಕಟ್ಟನ್ನು ನಿರ್ಮಿಸಲಾಗುವುದು ಎಂದು ಲೋಕಸಭಾ ಚುನಾವಣೆಯ ವೇಳೆ ಹೇಳುತ್ತಿದ್ದರು. ಈಗ ಯಾಕೆ ಈ ರೀತಿ ಹೇಳುತ್ತಿದ್ದಾರೆ ಎಂದು ಪ್ರಶ್ನಿಸಿದರು. ಕರ್ನಾಟಕದಲ್ಲಿ ಜೆಡಿಎಸ್ ಅಧಿಕಾರಕ್ಕೆ ಬರುವುದಿಲ್ಲ. ಹಾಗೆಂದು ಮೇಕೆದಾಟು ಅಣೆಕಟ್ಟು ರಾಜ್ಯಕ್ಕೆ ಬೇಡವೆ. ನಾನು ಜನತಾದಳದ ಅಧ್ಯಕ್ಷನಾಗಿದ್ದ ಸಂದರ್ಭದಲ್ಲಿ 2004ರಲ್ಲಿ ಅತಿಹೆಚ್ಚು ಅಂದರೆ 59 ಸ್ಥಾನಗಳನ್ನು ಪಡೆದಿದ್ದೆವು. ಅವರ ಶಕ್ತಿ ಚುನಾವಣೆಯಿಂದ ಚುನಾವಣೆಗೆ ಕುಂಠಿತವಾಗಿದೆಯೇ ಹೊರತು ಹೆಚ್ಚಾಗಿಲ್ಲ ಎಂದು ಅಭಿಪ್ರಾಯಪಟ್ಟರು.






## ಸುರ್ಜೇವಾಲಾ ಜೊತೆ ಸಿಎಂ, ಡಿಸಿಎಂ ಚರ್ಚೆ

ರಾಜ್ಯ ರಾಜಕಾರಣದಲ್ಲಿ ನಾಯಕತ್ವ ವಿಚಾರ ಬದಲಾವಣೆ ಕುರಿತಂತೆ ಸಾಕಷ್ಟು ಚರ್ಚೆಗಳು ನಡೆದಿರುವ ಬೆನ್ನಲ್ಲೇ ದೆಹಲಿ ಭೇಟಿ ಕೈಗೊಂಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಂಜೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ನೋಡಿಕೊಳ್ಳುತ್ತಿರುವ ರಣದೀಪ್ ಸಿಂಗ್ ಸುರ್ಜೇವಾಲ ಅವರು ಭೇಟಿ ಮಾಡಿ ಮಹತ್ವದ ಮಾತುಕತೆ ನಡೆಸಲಿರುವುದು ಕುತೂಹಲ ಕೆರಳಿಸಿದೆ. ಈಗಾಗಲೇ ಸುರ್ಜೇವಾಲಾ ಅವರು ಎರಡು ಬಾರಿ ಬೆಂಗಳೂರಿಗೆ ಭೇಟಿ ನೀಡಿ ಕಾಂಗ್ರೆಸ್ ಶಾಸಕರ ಜೊತೆ ಮಾತುಕತೆ ನಡೆಸಿ, ಸರ್ಕಾರ ಮತ್ತು ಸಚಿವರ ಕಾರ್ಯ ವೈಖರಿಯಗಳ ಬಗ್ಗೆ ಅಹವಾಲು ಆಲಿಸಿದ್ದಾರೆ. ಬಹುತೇಕ ಶಾಸಕರು ಸಚಿವರ ಕಾರ್ಯವೈಖರಿಗಳ ಬಗ್ಗೆ ಅಸಮಾಧಾನ ಹೊರಹಾಕಿದ್ದಾರೆ.ಈ ಶಾಸಕರ ಅಭಿಪ್ರಾಯ ಸಂಗ್ರಹಿಸಿರುವ ಸುರ್ಜೇವಾಲಾ ದೆಹಲಿಗೆ ವಾಪಾಸ್ ಆಗಿದ್ದು, ಸುರ್ಜೇವಾಲ ಮೈಸೂರು ವಿಭಾಗ 42 ಮಂದಿ ಶಾಸಕರು ಹಾಗೂ ಎರಡನೇ ಹಂತದಲ್ಲಿ ಉತ್ತರ ಕರ್ನಾಟಕ ಭಾಗ ಸೇರಿದಂತೆ 61 ಶಾಸಕರ ಜೊತೆ ಚರ್ಚೆ ನಡೆಸಿ ಅಭಿಪ್ರಾಯ ಸಂಗ್ರಹಿಸಿ ದೆಹಲಿಗೆ ಹೊರಡಿದ್ದಾರೆ.

## ಸಿದ್ದು ಪರವಾಗಿ ಸತೀಶ್ ಬ್ಯಾಟಿಂಗ್

ಸಿಎಂ ಸ್ಥಾನ ಬದಲಾವಣೆ ವಿಚಾರವಾಗಿ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ, ಸಿಎಂ ಹೇಳಿದ ಮೇಲೆ ಎಲ್ಲದಕ್ಕೂ ಇತಿಶ್ರೀ ಹಾಡಿದಂತೆ. ಸಿಎಂ ಹೇಳಿರುವುದರಲ್ಲಿ ಹೊಸದೇನಿಲ್ಲ. ಸಿಎಂ ಸ್ಥಾನಕ್ಕೆ ನಾನು ಆಕಾಂಕ್ಷಿಯೂ ಅಲ್ಲ, ಪ್ರತಿಸ್ಪರ್ಧಿಯು ಅಲ್ಲ. ಈಗ ಹೇಳಬೇಕಾದ ಸಂದರ್ಭ ಬಂದಿರಬಹುದು ಹೀಗಾಗಿ ಸಿಎಂ ಹೇಳಿದ್ದಾರೆ ಎಂದರು. ಸುರ್ಜೆವಾಲಾ ಅವರು ರಾಜ್ಯಕ್ಕೆ ನಾಯಕತ್ವ ಬದಲಾವಣೆ ಅಭಿಪ್ರಾಯ ಸಂಗ್ರಹಕ್ಕೆ ಬಂದಿಲ್ಲ. ನಿಗಮ ಮಂಡಳಿ ಚರ್ಚೆ ದೆಹಲಿಯಲ್ಲಿ ಇರಬಹುದು. ಸಿಎಂ ಬದಲಾವಣೆ ಎಲ್ಲಿಯೂ ಚರ್ಚೆಯೇ ಆಗಿಲ್ಲ. ಅಧಿಕಾರ ಹಂಚಿಕೆ ಇಲ್ಲ ಅಂತ ಸಿಎಂ ಸ್ಪಷ್ಟಪಡಿಸಿದ್ದಾರೆ. ಯಾರೂ ಶಾಸಕರೂ ಕೂಡ ನಾಯಕತ್ವ ಬದಲಾವಣೆ ಮಾಡಿ ಅಂದಿಲ್ಲ. ಸುರ್ಜೆವಾಲಾ ಮುಂದೆ ಎಲ್ಲರ ಡಿಮ್ಯಾಂಡ್ ಅನುದಾನದ್ದು. ಕೇವಲ 10% ಜನ ಮಾತ್ರ ನಾಯಕತ್ವ ಬಗ್ಗೆ ಮಾತಾಡಿರಬಹುದು ಎಂದರು.

## ಪಾಲಿಕೆಗಳ ನೌಕರರ ಕಷ್ಟಗಳನ್ನೂ ಕೇಳಿಸಿಕೊಳ್ಳಿ : ಹೆಚ್‌ಡಿಕೆ ಆಗ್ರಹ

• ಉದಯವಾಹಿನಿ, ಬೆಂಗಳೂರು



ಕೇವಲ ಶಾಸಕರ ದುಃಖ ದುಮ್ಮಾನ ಕೇಳಿದರೆ ಸಾಲದು. ಅನಿರ್ದಿಷ್ಟ ಮುಷ್ಕರ ನಡೆಸುತ್ತಿರುವ ಪಾಲಿಕೆಗಳ ನೌಕರರ ಕಷ್ಟಕಾರ್ಪಣ್ಯ ಆಲಿಸುವ ಹೃದಯವಂತಿಕೆಯನ್ನು ರಾಜ್ಯ ಸರ್ಕಾರ ತೋರಬೇಕು ಎಂದು ಕೇಂದ್ರದ ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಈ ಸಂಬಂಧ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು,ನೌಕರರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ತುರ್ತು ಗಮನ ಹರಿಸಬೇಕು. ಆದರೆ, ಶಾಸಕರ ಬಂಡಾಯ ತಣಿಸುವುದಕ್ಕೆ ಕಾಂಗ್ರೆಸ್ ಪಕ್ಷದಲ್ಲಿನ ಬೇಗುದಿಯನ್ನು ಕಡಿಮೆ ಮಾಡಲು ಸಿಎಂ, ಡಿಸಿಎಂ ಅವರಿಗೆ ಸಮಯವೇ ಸಾಲುತ್ತಿಲ್ಲ ಎಂದು ಟೀಕಿಸಿದ್ದಾರೆ.

ಇದನ್ನು ನಾನು ತಪ್ಪೆನ್ನಲಾರೆ. ಆದರೆ, ಪಾಲಿಕೆ ನೌಕರರು ಎಸಗಿದ ಪಾಪವೇನು? ಅವರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ವಿಳಂಬ ಧೋರಣೆ ಯಾಕೆ? ಸ್ವತಃ ಮುಖ್ಯಮಂತ್ರಿ ಅವರೇ ಮಾನವೀಯ ನೆಲೆಗಟ್ಟಿನಲ್ಲಿ ತಕ್ಷಣವೇ ಕ್ರಮ ವಹಿಸುತ್ತಿಲ್ಲ, ಏಕೆ? ಹಗಲಿರುಳು ಜನರಿಗಾಗಿ ದುಡಿಯುವ ಅವರ ಬದುಕಿಗೂ ಗ್ಯಾರಂಟಿ ಕೊಡಬೇಕಲ್ಲವೇ? ಎಂದು ಅವರು ಪ್ರಶ್ನಿಸಿದ್ದಾರೆ. ಪಾಲಿಕೆಗಳ ನಿತ್ಯದ ಯಾವ ಕೆಲಸ ಕಾರ್ಯಗಳು ನಿಲ್ಲಬಾರದು. ಸ್ವಚ್ಛತೆ, ನೈರ್ಮಲ್ಯ ಹಾಗೂ ಸ್ಥಳೀಯ ಆಡಳಿತದ ದೃಷ್ಟಿಯಿಂದ ಪಾಲಿಕೆಗಳು ಮಹತ್ವ ಹೊಂದಿವೆ ಎಂಬುದನ್ನು ಆಡಳಿತಗಾರರು ಮರೆಯಬಾರದು ಎಂದು ಅವರು ತಿಳಿಸಿದ್ದಾರೆ.

## ಎನ್‌ಐಎ ದಾಳಿ ಬಳಿಕ ಗೃಹ ಇಲಾಖೆ ವೈಫಲ್ಯ ಬೆಳಕಿಗೆ: ಸುನಿಲ್ ಕುಮಾರ್

• ಉದಯವಾಹಿನಿ, ಕಾರ್ಕಳ

ರಾಜ್ಯದಲ್ಲಿ ನಡೆದ ಎನ್‌ಐಎ ದಾಳಿ ಪೈಪೋಟಿಯ ಕಾನೂನು ಸುವ್ಯವಸ್ಥೆ ಹಾಗೂ ಗೃಹ ಇಲಾಖೆಯ ವಿಫಲತೆ ಪತ್ತೆ ಹಚ್ಚಿರುವುದಾಗಿ ಅಭಿಪ್ರಾಯಪಟ್ಟಿರುವ ಮಾಜಿ ಸಚಿವ ಮತ್ತು ಕಾರ್ಕಳ ಶಾಸಕ ವಿ. ಸುನಿಲ್ ಕುಮಾರ್ ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆಯಲ್ಲಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ರಾಜ್ಯದಲ್ಲಿ ಪೊಲೀಸರು ಮತ್ತು ಕಾರಾಗೃಹ ಸಿಬ್ಬಂದಿಯೊಬ್ಬರೇ ಅಂತಾರಾಷ್ಟ್ರೀಯ ಭಯೋತ್ಪಾದಕರ ಜತೆ ಕೈ ಜೋಡಿಸುತ್ತಿರುವುದು ಸರ್ಕಾರದ ಭದ್ರತಾ ವ್ಯವಸ್ಥೆ ಎಷ್ಟರ ಮಟ್ಟಿಗೆ ಕುಸಿದಿದೆ ಎಂಬುದರ ಸ್ಪಷ್ಟ ಸಂಕೇತ ಎಂದು ಆರೋಪಿಸಿದರು. ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿರುವ ಲಷ್ಕರ್ ಉಗ್ರ ಮತ್ತು ವಿದೇಶದಲ್ಲಿರುವ ಜುನೈದ್ ಪಾಷಾ ಎಂಬ ಭಯೋತ್ಪಾದಕರಿಗೆ ಕಾರಾಗೃಹ ಸಿಬ್ಬಂದಿಯೇ ನೆರವಾಗಿರುವುದು ಆತಂಕಕಾರಿ ಸಂಗತಿ. ಇಂಥ ಸಂಬಂಧಗಳ ನಡುವೆಯೂ ರಾಜ್ಯ ಭದ್ರತಾದಳ ನಿಶ್ಚಲವಾಗಿರುವುದು ನಾಚಿಕೆಗೇಡಿನ ಸಂಗತಿ ಎಂದು ಕಿಡಿಕಾರಿದರು. ಸರ್ಕಾರ ಭಯೋತ್ಪಾದಕರ ಕುರಿತು ನಯವಾದ ನಿಲುವು ತಾಳುತ್ತಿದೆ ಎಂದಿರುವ ಅವರು, ಹಿಂದು ಕಾರ್ಯಕರ್ತರ ಹತ್ಯೆ ಸೇರಿದಂತೆ ಹಲವು ಜಿಹಾದಿ ಚಟುವಟಿಕೆಗಳ ತನಿಖೆ ನಡೆಸಲು ರಾಜ್ಯ ಪೊಲೀಸರು ನಿರಾಶದಾಯಕ ಸ್ಥಿತಿಯಲ್ಲಿದ್ದಾರೆ. ಪ್ರತಿಬಾರಿಯೂ ಎನ್‌ಐಎ ಅಧಿಕಾರಿಗಳು ಘಟನೆಯ ಹಿಂದಿರುವ ಷಡ್ಯಂತ್ರ ಬಯಲಿಗೆಳೆಯುತ್ತಿದ್ದಾರೆ ಎಂದರು.



## 3ನೇ ಪಾಸ್ ಪೋರ್ಟ್ ಸೇವಾ ಕೇಂದ್ರ ಸ್ಥಾಪನೆಗೆ ಶೋಭಾ ಒತ್ತಾಯ

• ಉದಯವಾಹಿನಿ, ಬೆಂಗಳೂರು



ನಗರದ ಉತ್ತರ ವಲಯದಲ್ಲಿ ಹೆಚ್ಚುತ್ತಿರುವ ಬೇಡಿಕೆ ಈಡೇರಿಸಲು ಮೂರನೇ ಪಾಸ್ ಪೋರ್ಟ್ ಸೇವಾ ಕೇಂದ್ರ ಸ್ಥಾಪಿಸಬೇಕು ಎಂದು ಕೇಂದ್ರ ಉದ್ಯೋಗ ಮತ್ತು ಎಂಎಸ್ ಎಂಇ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಕೇಂದ್ರ ವಿದೇಶಾಂಗ ಸಚಿವಾಲಯಕ್ಕೆ ಮನವಿ ಮಾಡಿದ್ದಾರೆ. ಈ ಸಂಬಂಧ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರಿಗೆ ಮಂಗಳವಾರ ಪತ್ರ ಬರೆದಿರುವ ಶೋಭಾ ಕರಂದ್ಲಾಜೆ, ಲಾಲ್ ಬಾಗ್ ಮತ್ತು ಮಾರತ್ ಹಳ್ಳಿಯಲ್ಲಿರುವ ಪಾಸ್ ಪೋರ್ಟ್ ಸೇವಾ ಕೇಂದ್ರಗಳಲ್ಲಿ ತೀವ್ರ ಜನ ದಟ್ಟಣೆ ಇರಲಿದ್ದು, ಧೀರ್ಘ ಹೊತ್ತು ಸರತಿ ಸಾಲಿನಲ್ಲಿ ಕಾಯಬೇಕಾಗಿದೆ ಎಂದಿದ್ದಾರೆ. ಎರಡೂ ಕೇಂದ್ರಗಳು ಅರ್ಜಿದಾರರಿಂದ ತುಂಬಿದ್ದು, ತೀವ್ರ ವಿಳಂಬಕ್ಕೆ ಕಾರಣವಾಗುತ್ತಿದೆ. ಅಲ್ಲದೇ ಬೆಂಗಳೂರು ಉತ್ತರ ವಲಯ ನಿವಾಸಿಗಳಿಗೆ ತೊಂದರೆಯಾಗುತ್ತಿದೆ ಎಂದು ಅವರು ಪತ್ರದಲ್ಲಿ ತಿಳಿಸಿದ್ದಾರೆ. ಬೆಂಗಳೂರು ಉತ್ತರ ವಲಯದಲ್ಲಿ ಹೊಸದಾದ ಪಾಸ್ ಪೋರ್ಟ್ ಸೇವಾ ಕೇಂದ್ರ ಸ್ಥಾಪನೆಯಿಂದ ಜನದಟ್ಟಣೆ ಕಡಿಮೆ ಆಗಲಿದೆ ಮತ್ತು ಹೊಸ ಅರ್ಜಿ ಸ್ವೀಕಾರ, ನವೀಕರಣ ಮತ್ತು ದಾಖಲಾತಿ ಅಪ್‌ಡೇಟ್‌ಗಳು ಸೇರಿದಂತೆ ಪಾಸ್ ಪೋರ್ಟ್ ಸಂಬಂಧಿತ ಸೇವೆಗಳಲ್ಲಿ ಸುಧಾರಣೆಯಾಗಲಿದೆ ಎಂದು ಅವರು ಹೇಳಿದ್ದಾರೆ.

## ನನ್ನ ಪ್ರಕಾರ ತಂದೆ ಸಿದ್ದರಾಮಯ್ಯನೇ ಐದು ವರ್ಷ ಸಿಎಂ

• ಉದಯವಾಹಿನಿ, ಮೈಸೂರು

ಸಿದ್ದರಾಮಯ್ಯ ಅವರನ್ನು ಓಬಿಸಿ ಸಮಿತಿಗೆ ನೇಮಕ ಮಾಡಿರುವ ಬಗ್ಗೆ, ಸಿದ್ದರಾಮಯ್ಯ ಸಿಎಂ ಸ್ಥಾನದ ಬಗ್ಗೆ ಹಾಗೂ ಉಚಿತ ಭಾಗ್ಯಗಳಿಂದ ಜನರು ಸೋಮಾರಿಗಳಾಗುತ್ತಾರೆ ಎಂಬ ರಂಭಾಪುರಿ ಶ್ರೀಗಳ ಹೇಳಿಕೆ ವಿಚಾರವಾಗಿ ಇಂದು ಮೈಸೂರಿನಲ್ಲಿ ವಿಧಾನ ಪರಿಷತ್ ಸದಸ್ಯ ಯತೀಂದ್ರ ಸಿದ್ದರಾಮಯ್ಯ ಮಾತನಾಡಿದ್ದಾರೆ.

ಯಾರ್ರಿ ಹೇಳಿದ್ದು ಮುಖ್ಯಮಂತ್ರಿ ಆದವರನ್ನು ಓಬಿಸಿ ಕಮಿಟಿಗೆ ಕಳುಹಿಸಿದ್ರೇ ಪ್ರಮೋಷನ್ನಾ. ಇದು ಸಿಎಂ ಬದಲಾವಣೆ ವಿಚಾರಕ್ಕೆ ಸಂಬಂಧಿಸಿಲ್ಲ. ಕೆಲವರು ಊಹೆ ಮಾಡಿಕೊಂಡು ಮಾತನಾಡುತ್ತಾರೆ. ಚರ್ಚೆ ಮಾಡುವವರಿಗೆ ಸಾಮಾನ್ಯ ಜ್ಞಾನ ಇರಬೇಕು ಎಂದು ಅವರು ಹೇಳಿದ್ದಾರೆ. ಎಐಸಿಸಿ ಕಾರ್ಯದರ್ಶಿಯೇ ಸಿಎಂ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಬಿಜೆಪಿ ಹೇಳಿಕೆಗಳನ್ನು ನಂಬಬೇಡಿ. ನಮ್ಮ ಸರ್ಕಾರ ಬಂದಾಗಿನಿಂದಲೂ ಸಿಎಂ ಬದಲಾಗುತ್ತಾರೆ ಎಂದು ಹೇಳುತ್ತಿದ್ದಾರೆ ಎಂದು ಡಾ. ಯತೀಂದ್ರ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

**ನನ್ ತಂದೆನೆ ಐದು ವರ್ಷ ಸಿಎಂ:** ನವೆಂಬರ್ ತಿಂಗಳಿಗೆ ನಮ್ಮ ತಂದೆ ಎರಡುವರೆ ವರ್ಷ ಪೂರೈಕೆ ಮಾಡ್ತಾರೆ. ಹಾಗಾಗಿ ಸಿಎಂ ಆಗುವ ಆಸೆ ಇಟ್ಟುಕೊಂಡಿರೋರು ಕೇಳ್ತಾರೆ. ಕೇಳೋದ್ರಲ್ಲಿ ತಪ್ಪಿಲ್ಲ, ಸಿಎಂ ಬದಲಾವಣೆ ಬಗ್ಗೆ ತೀರ್ಮಾನ ಮಾಡೋದು ಹೈಕಮಾಂಡ್ ಹಾಗೂ ಎಂ ಎಲ್ ಎಗಳ ನಿರ್ಧಾರ. ಆದರೆ ನನ್ನ ಪ್ರಕಾರ ಸಿದ್ದರಾಮಯ್ಯ ಅವರು ಐದು ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಮುಂದುವರಿಯುತ್ತಾರೆ ಎಂದು ಅವರು ಯತೀಂದ್ರರವರು ಸ್ಪಷ್ಟನೆ ನೀಡಿದರು.

ಇದು ತಲೆತಲಾಂತರದಿಂದ ಬೇರೊಬ್ಬರ ಕೈಲಿ ದುಡಿಸಿಕೊಂಡು ಸುಖವಾಗಿ ಬಂದಿರೋರು ಹೇಳುವ ಮಾತುಗಳು ಎಂದು ಯತೀಂದ್ರ ಟೀಕಿಸಿದ್ದಾರೆ. ಶ್ರೀಮಂತರ ಸಾಲ ಮನ್ನಾ ಮಾಡುವ ಕೇಂದ್ರ ಸರ್ಕಾರಕ್ಕೆ ಇದೇ ಪ್ರಶ್ನೆಯನ್ನು ಕೇಳಿ. ಬಡವರಿಗೆ ಕೊಟ್ಟಾಗ ಯಾಕೆ ಕಣ್ಣುರಿ . ಯಾರು ಏನೇ ಟೀಕೆ ಮಾಡಿದರೂ ನಾವು ಉಚಿತ ಯೋಜನೆಗಳನ್ನು ಮುಂದುವರಿಸುತ್ತೇವೆ ಎಂದು ಅವರು ಸ್ಪಷ್ಟಪಡಿಸಿದರು.



ಸಿದ್ದರಾಮಯ್ಯ ಜನಪರವಾಗಿ ಒಳ್ಳೆಯ ಕೆಲಸಗಳನ್ನು ಮಾಡುತ್ತಿದ್ದಾರೆ, ಎಂದು ಹಿರಿಯ ಶಾಸಕ ಆರ್.ವಿ.ದೇಶಪಾಂಡೆ ಅವರು ಸಿಎಂ ಸಿದ್ದರಾಮಯ್ಯ ಪರವಾಗಿ ಬ್ಯಾಟಿಂಗ್ ಮಾಡಿದ್ದಾರೆ. ಸುರ್ಜೇವಾಲಾ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿ, ಪೂರ್ಣಾಧಿವಧಿಗೆ ನಾನೇ ಸಿಎಂ ಎಂದು ಸಿದ್ದರಾಮಯ್ಯ ಹೇಳಿರುವುದರಲ್ಲಿ ಯಾವ ತಪ್ಪೂ ಇಲ್ಲ. ಶಾಸಕಾಂಗ ಪಕ್ಷದ ಸಭೆಯಲ್ಲಿ ಸಿದ್ದರಾಮಯ್ಯ ಅವರನ್ನು 1 ಅಥವಾ 2 ವರ್ಷಗಳಿಗೆ ನಾವು ಆಯ್ಕೆ ಮಾಡಿಲ್ಲ ಎಂದು ಪ್ರತಿಪಾದಿಸಿದರು.

### ಫ್ರೀ ಕೊಟ್ರೆ ಯಾರು ಸೋಂಬೇರಿಗಳಾಗಲ್ಲ

**ಉಚಿತ ಭಾಗ್ಯಗಳಿಂದ ಜನರು ಸೋಮಾರಿ ಆಗುತ್ತಿದ್ದಾರೆ ಎಂದು ಇತ್ತೀಚೆಗೆ ರಂಭಾಪುರಿ ಶ್ರೀಗಳು ಹೇಳಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ಯತೀಂದ್ರ ಇದನ್ನು ಈಗಲ್ಲ, ಕಳೆದ ಬಾರಿ ಗ್ಯಾರಂಟಿ ಭಾಗ್ಯ ಕೊಟ್ಟಾಗಲೂ ಹೀಗೇ ಹೇಳುತ್ತಿದ್ರು. ಯಾರಾದ್ರೂ ಸೋಮಾರಿಗಳಾದ್ರಾ? ಆಗಿಲ್ಲ ಬಡವರು ಹೊಟ್ಟೆ ತುಂಬ ಊಟ ತಿಂದರೆ ಸೋಮಾರಿ ಆಗುವುದಿಲ್ಲ. ಕೇವಲ ಅಕ್ಕಿ ಕೊಟ್ಟ ತಕ್ಷಣ ಎಲ್ಲವೂ ಸಿಗುವುದಿಲ್ಲ. ಜೀವನಕ್ಕಾಗಿ ಅವರು ದುಡಿಯುತ್ತಾರೆ ಎಂದು ಉಚಿತ ಭಾಗ್ಯಗಳ ಬಗ್ಗೆ ರಂಭಾಪುರಿ ಶ್ರೀಗಳ ಹೇಳಿಕೆಗೆ ಡಾ. ಯತೀಂದ್ರ ತಿರುಗೇಟು ನೀಡಿದ್ದಾರೆ.**

## ಶಾಸಕ ಲಕ್ಷ್ಮಣ ಸವದಿ ಅವರ ಸತತ ಪ್ರಯತ್ನ ಮೌಲಾನಾ ಆಜಾದ್ ಮಾದರಿ ಶಾಲೆ ಮಂಜೂರು

• ಉದಯವಾಹಿನಿ, ಅಥಣಿ



ಅಲ್ಪಸಂಖ್ಯಾತರ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿ ಆ ಮಕ್ಕಳು ಉನ್ನತ ಶಿಕ್ಷಣದಿಂದ ವಂಚಿತರಾಗಬಾರದು. ಶಿಕ್ಷಣ ಎಂಬುದು ಎಲ್ಲರ ಬದುಕಿಗೆ ಬೆಳಕು ನೀಡುವ ಕ್ಷೇತ್ರವಾಗಿದೆ. ಶಿಕ್ಷಣದಿಂದಲೇ ಭವಿಷ್ಯ. ಶಿಕ್ಷಣದಿಂದ ಮಾತ್ರ ಪ್ರಗತಿ ಸಾಧ್ಯ. ಎಲ್ಲರಿಗೂ ಸಮರ್ಪಕ ಶೈಕ್ಷಣಿಕ ಸೌಲಭ್ಯ ಸಿಗುವಂತಾಗಬೇಕು. ಎಂಬ ಉದ್ದೇಶದಿಂದ ಅಥಣಿ ವಿಧಾನಸಭಾ ಕ್ಷೇತ್ರಕ್ಕೆ ನೂತನವಾಗಿ ಮೌಲಾನಾ ಆಜಾದ್ ಮಾದರಿ ಶಾಲೆ ಮಂಜೂರಾಗಿರುವುದಾಗಿ ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಅವರು ಹೇಳಿದರು.

ಅವರು ನಮ್ಮ ಪ್ರತಿನಿಧಿಯೊಂದಿಗೆ ಮಾತನಾಡುತ್ತಾ ಮತಕ್ಷೇತ್ರದಲ್ಲಿ ಅಲ್ಪಸಂಖ್ಯಾತ ಸಮುದಾಯದವರು ಶಿಕ್ಷಣದಲ್ಲಿ ಹಿಂದಿದ್ದು. ಅದರಲ್ಲೂ ವಿಶೇಷವಾಗಿ ತುಂಬಾ ಬಡತನದಿಂದ ಜೀವನ ಸಾಗಿಸುವ ಕುಟುಂಬಗಳ ಸಂಖ್ಯೆ ಹೆಚ್ಚಾಗಿದ್ದು ಅವರು ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಹಲವಾರು ದಶಕಗಳಿಂದ ವಂಚಿತರಾಗಿದ್ದಾರೆ. ಅಂತಹ ಕುಟುಂಬಗಳ ಮಕ್ಕಳು ಉತ್ತಮ ಗುಣಮಟ್ಟದ ಶಿಕ್ಷಣ ಪಡೆದು ಉನ್ನತ ಸ್ಥಾನಕ್ಕೆ ಹೋಗಬೇಕು. ಅಂತಹ ಮಕ್ಕಳಿಗೆ ಶಿಕ್ಷಣ ನೀಡುವ ಬಹು ದೊಡ್ಡ ಕನಸು ನನ್ನದಾಗಿದೆ. ಆ ನಿಟ್ಟಿನಲ್ಲಿ ವಿಶೇಷವಾಗಿ ಪ್ರಯತ್ನಿಸಲಾಗುವದು. ಎಲ್ಲಾ ಮುದಾಯದ ಬಡ ಮಕ್ಕಳ ಶಿಕ್ಷಣದ ಏಳ್ಗೆಗಾಗಿ ಶ್ರಮಿಸುವುದು ನನ್ನ ಆದ್ಯ ಕರ್ತವ್ಯವಾಗಿದೆ ಎಂದರು.

ಈ ವೇಳೆ ಚಿಕ್ಕೋಡಿ ಜಿಲ್ಲಾ ವಕ್ಫ್ ಸಲಹಾ ಸಮಿತಿ ಉಪಾಧ್ಯಕ್ಷ ಆಸೀಫ್ ತಾಂಬೋಳಿ ಮಾತನಾಡಿ ನಮ್ಮ ನೆಚ್ಚಿನ ಶಾಸಕರಾದ ಲಕ್ಷ್ಮಣ ಸವದಿ ಅವರು ಅಲ್ಪಸಂಖ್ಯಾತರ ಮಕ್ಕಳ ಶೈಕ್ಷಣಿಕ ಗುಣಮಟ್ಟವನ್ನು ಗಮನದಲ್ಲಿ ಇಟ್ಟುಕೊಂಡು ಸರ್ಕಾರಕ್ಕೆ ಬೇಡಿಕೆ ಸಲ್ಲಿಸಿ ಸತತ ಪ್ರಯತ್ನದಿಂದ ಮೌಲಾನಾ ಆಜಾದ್ ಮಾದರಿ ಶಾಲೆಯನ್ನು ಮಂಜೂರು ಮಾಡಿಸಿದ್ದಾರೆ. ಕಳೆದ ವರ್ಷ ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ವಸತಿ ಶಾಲೆ ಪ್ರಾರಂಭಿಸಿ ಅಲ್ಪಸಂಖ್ಯಾತರ ಮಕ್ಕಳ ಶಿಕ್ಷಣಕ್ಕೆ ಬೆಳಕಾಗಿದ್ದರು. ಅದಕ್ಕಾಗಿ ಅವರಿಗೆ ಮುಸ್ಲಿಂ ಸಮುದಾಯದ ಪರವಾಗಿ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ ಎಂದರು.

# ರಾಜ್ಯದ ಬೇಹುಗಾರಿಕಾ ದಳ ಕೋಮಾ ಸ್ಥಿತಿಗೆ ತಲುಪಿದೆಯೇ?

## • ಪರಪ್ಪನ ಅಗ್ರಹಾರದಲ್ಲಿ ಉಗ್ರರ ಚಟುವಟಿಕೆ, ರಾಜ್ಯ ಗುಪ್ತಚರ ಇಲಾಖೆಗೆ ಸಿಕ್ಕೇ ಇಲ್ಲ ಮಾಹಿತಿ: ಸಿಟಿ ರವಿ ಗಂಭೀರ ಆರೋಪ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಬೇಹುಗಾರಿಕಾ ದಳ ಕೋಮಾ ಸ್ಥಿತಿಗೆ ತಲುಪಿದೆಯೇ ಎಂದು ಬಿಜೆಪಿ ನಿಕಟಪೂರ್ವ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಅವರು ಪ್ರಶ್ನಿಸಿದ್ದಾರೆ. ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನದ'ಲ್ಲಿ ಗುರುವಾರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳ್ಳೆಯ ಕಾರಣಕ್ಕೆ ಕರ್ನಾಟಕ ಸುದ್ದಿ ಆಗುತ್ತಿಲ್ಲ. ಗ್ಯಾಂಗ್

- ರಾಜ್ಯ ಗುಪ್ತಚರ ಇಲಾಖೆಯ ವಿರುದ್ಧ ಸಿಟಿ ರವಿ ವಾಗ್ದಾಳಿ
- ಪರಪ್ಪನ ಅಗ್ರಹಾರದಲ್ಲಿ ಉಗ್ರರ ಚಟುವಟಿಕೆ ಬಗ್ಗೆ ಆತಂಕ
- ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಬಗ್ಗೆ ಪ್ರಶ್ನೆ ಎತ್ತಿದ ಸಿಟಿ ರವಿ


ರೇಪ್, ಕಾಲ್ತುಳಿತ, ಆತ್ಮಹತ್ಯೆ, ಕೊಲೆಯಂಥ ಕಾರಣಕ್ಕೆ ಕರ್ನಾಟಕ ಸುದ್ದಿ ಆಗುವುದು ಒಳ್ಳೆಯ ಸಂಗತಿಯಲ್ಲ. ಈ ಸರಕಾರ, ಸಿಎಂ, ಡಿಸಿಎಂ, ಗೃಹ ಸಚಿವರಿಗೆ ಆಡಳಿತ ನಡೆಸಲು ಆಗದೆ ಇದ್ದರೆ ಅಧಿಕಾರ ಬಿಟ್ಟು ತೊಲಗಲಿ ಎಂದು ಆಗ್ರಹಿಸಿದರು.

**3 ತಿಂಗಳಲ್ಲಿ 340 ಅತ್ಯಾಚಾರ:** 3 ತಿಂಗಳಲ್ಲಿ 340 ಅತ್ಯಾಚಾರ ಪ್ರಕರಣ ಆಗಿದೆ. ಇದೇನು ಒಳ್ಳೆಯ ಸುದ್ದಿಯೇ ಭ್ರಷ್ಟಾಚಾರ, ಬೆಲೆ ಏರಿಕೆ, ಅತ್ಯಾಚಾರ, ಹತ್ಯೆ, ಉಗ್ರ ಚಟುವಟಿಕೆಗೆ ರಾಜ್ಯ ಸರಕಾರ ಸುದ್ದಿ ಆಗುತ್ತಿರುವುದು ದುರದೃಷ್ಟಕರ ಎಂದು ಅವರು ಹೇಳಿದರು. ಎರಡು ದಿನಗಳ ಹಿಂದೆ ಎನ್‌ಐಎ ರಾಜ್ಯದ ಎರಡು ಕಡೆಗಳಲ್ಲಿ ದಾಳಿ ಮಾಡಿದೆ. ಜೀವಾವಧಿ ಶಿಕ್ಷೆಗೆ ಒಳಗಾದ ಮೂವರನ್ನು ಬಂಧಿಸಿದೆ. ಅದರಲ್ಲಿ ಮನೋವೈದ್ಯ ಡಾ. ನಾಗರಾಜ್, ಎಎಸ್‌ಐ ಚಾಂದ್ ಭಾಷಾ, ಮತ್ತೊಬ್ಬರು ಪರಾರಿಯಾದ ಶಂಕಿತ ಉಗ್ರ ಜುನೈದ್ ಅಹ್ಮದ್‌ನ ತಾಯಿ ಅನೀಸ್ ಫಾತಿಮಾ ಬಂಧಿತರು. ಎನ್‌ಐಎಗೆ ರಾಜ್ಯದ ಮಾಹಿತಿ ಸಿಗುತ್ತಿದೆ.

**ಉಗ್ರರ ಚಟುವಟಿಕೆ ಬಗ್ಗೆ ಆತಂಕ**

ಪರಪ್ಪನ ಅಗ್ರಹಾರ ಜೈಲಿನಲ್ಲಿ ಅಕ್ರಮ ಚಟುವಟಿಕೆ ನಡೆಯುತ್ತಿವೆ. ರಾಷ್ಟ್ರವಿರೋಧಿ, ರಾಷ್ಟ್ರಘಾತುಕ ವ್ಯವಸ್ಥೆ ತಯಾರಾದ ಮಾಹಿತಿ ಎನ್‌ಐಎಗೆ ಸಿಗುತ್ತದೆ. ನಮ್ಮ ಬೇಹುಗಾರಿಕಾ ದಳಕ್ಕೆ (ಇಂಟೆಲಿಜೆನ್ಸ್) ಯಾಕೆ ಈ ಮಾಹಿತಿ ಸಿಗುತ್ತಿಲ್ಲ ಎಂದು ಕೇಳಿದರು.

ಬಂಧಿತರಲ್ಲದೆ ಇನ್ನೂ ಕೆಲವು ಜೈಲು ಸಿಬ್ಬಂದಿಗಳು ಈ ಥರದ ಚಟುವಟಿಕೆಗಳಲ್ಲಿ ಭಾಗವಹಿಸಿದ ಸಾಧ್ಯತೆ ಇದೆ. ಸಮಾಜಘಾತುಕರು ಹೊರಗೆ ಕೇಂದ್ರ ಸ್ಥಾನ ಇಟ್ಟುಕೊಂಡ ಹಲವು ಪ್ರಕರಣ ಅನುಭವಕ್ಕೆ ಬಂದಿತ್ತು. ಆದರೆ, ಜೈಲನ್ನೇ ಕೇಂದ್ರವಾಗಿ ಇಟ್ಟುಕೊಂಡು ಸಮಾಜಘಾತುಕ ಚಟುವಟಿಕೆ ಮಾಡುವುದು, ಜೈಲಿನ ಮೂಲಕವೇ ಸಂಚು ರೂಪಿಸುವುದು, ಜೈಲಿನ ಮೂಲಕವೇ ನಿರ್ದೇಶನ ಕೊಡುವುದು, ಅಲ್ಲಿಂದಲೇ ನಿಯಂತ್ರಣ ಮಾಡುವುದು ಜೈಲಿನ ಅಧಿಕಾರಿಗಳು, ಇಂಟೆಲಿಜೆನ್ಸ್



ಅಧಿಕಾರಿಗಳಿಗೆ ಗೊತ್ತಿಲ್ಲ ಎಂಬುದನ್ನು ನಂಬಲು ಸಾಧ್ಯವಿಲ್ಲ ಎಂದು ಅನಿಸುತ್ತದೆ ಎಂದು ನುಡಿದರು.

ಮುಖ್ಯಮಂತ್ರಿಗಳನ್ನು ಕೇಳಿದರೆ ಎಲ್ಲವೂ ಗೊತ್ತಿದೆ ಎನ್ನುತ್ತಾರೆ, ಗೃಹ ಸಚಿವರು ಬೆಳಗಾವಿ, ಮಂಗಳೂರು ಸೇರಿ ಯಾವುದೇ ಪ್ರಕರಣದ ಕುರಿತು ಕೇಳಿದರೂ ನನಗೇನೂ ಗೊತ್ತಿಲ್ಲ ಎಂದು ಹೇಳುತ್ತಾರೆ. ಉಪ ಮುಖ್ಯಮಂತ್ರಿಗಳನ್ನು ಕೇಳಿದರೆ ನಟ್ ಬೋಲ್ಟ್ ಟೈಟ್ ಮಾಡುವುದಾಗಿ ಹೇಳುತ್ತಾರೆ. ಸಿಎಂ ಎಂದರೆ ಭೂತ, ವರ್ತಮಾನ, ಭವಿಷ್ಯ ಎಲ್ಲವೂ ಗೊತ್ತಿರುವ ಸರ್ವಜ್ಞ. ಈ ಸ್ಥಿತಿಯಲ್ಲಿ ನಮ್ಮ ಇಂಟೆಲಿಜೆನ್ಸ್‌ಗೆ ಏನಾಗಿದೆ ಎಂದು ಕೇಳಿದರು.

### ಜೈಲೆಂಬ ಸೂಪರ್ ಮಾರ್ಕೆಟ್

**ನಮ್ಮ ಬೇಹುಗಾರಿಕಾ ದಳಕ್ಕೆ ಜನರು ಸೇರುವುದೂ ಗೊತ್ತಾಗುವುದಿಲ್ಲ, ಜನರು ಸಾಯುವುದೂ ಅವರ ಗಮನಕ್ಕೆ ಬರುವುದಿಲ್ಲ ಎಂಬುದು ದುರ್ದೈವದ ಸಂಗತಿ ಎಂದು ಸಿ.ಟಿ. ರವಿ ಅವರು ತಿಳಿಸಿದರು. ಜೈಲನ್ನೇ ಒಂಥರ ಸೂಪರ್ ಮಾರ್ಕೆಟ್ ಮಾಡಿಕೊಂಡಿದ್ದಾರೆ. ಜೈಲಿನಲ್ಲಿ ಎಲ್ಲವೂ ಸಿಗುತ್ತಿದೆ ಎಂಬುದು ರಕ್ಷಣಾ ಕ್ಷೇತ್ರದ ವೈಫಲ್ಯಕ್ಕೆ ನಿದರ್ಶನ. ರನ್ಯಾ ರಾವ್ ಪ್ರಕರಣದ ಬಳಿಕ ಸೂಕ್ಷ್ಮ ಪ್ರದೇಶಗಳಿಗೆ ಪ್ರವೇಶ ಮಾಡುವವರನ್ನು ಕಡ್ಡಾಯ ತಪಾಸಣೆ ಮಾಡಬೇಕು ಎಂಬುದು ಗೊತ್ತಿದ್ದು ಕೂಡ, ಆ ವೈದ್ಯ ಡಾ. ನಾಗರಾಜ್‌ರನ್ನು ಯಾಕೆ ನಿರಂತರ ತಪಾಸಣೆ ಮಾಡುತ್ತಿರಲಿಲ್ಲ ಎಂದು ಪ್ರಶ್ನೆ ಮಾಡಿದರು.**

ಭಯೋತ್ಪಾದಕತೆ ಬಗ್ಗೆ ಕಾಂಗ್ರೆಸ್ ಪಕ್ಷ ಮತ್ತು ಈ ಸರಕಾರಕ್ಕೆ ಗಂಭೀರತೆ ಇಲ್ಲ ಅನಿಸುತ್ತದೆ. ಭಯೋತ್ಪಾದಕ ಪ್ರಕರಣಗಳನ್ನೂ ಗಂಭೀರವಲ್ಲದ ಪ್ರಕರಣ ಎಂದು ನೋಡುವ ಮಾನಸಿಕತೆ ಇದೆಯೇನೋ ಎಂಬ ಅನುಮಾನ ಮೂಡುವಂತಾಗಿದೆ.

**ಕುಕ್ಕರ್ ಬಾಂಬ್ ಸ್ಫೋಟ ಇವರಿಗೆ ಗಂಭೀರ ವಿಷಯವಲ್ಲ;** ರಾಮೇಶ್ವರ ಕೆಫೆಯ ಬಾಂಬ್ ಸ್ಫೋಟವನ್ನು ಆಂತರಿಕ ಕಲಹ ಎಂಬಂತೆ ತನಿಖೆಗೂ ಮೊದಲೇ ತಿಳಿಸಿದ್ದರು. ಅದು ಸಿಲಿಂಡರ್ ಸ್ಫೋಟ ಎಂದು ಇನ್ನೊಬ್ಬರು ಹೇಳಿದ್ದರು. ಜೀವಾವಧಿ ಕೈದಿಗೆ ಮೊಬೈಲ್, ಎಲ್ಲಾ ವಸ್ತು ಸಿಗುತ್ತಿದೆ. ಇವರು ರಾಜಕೀಯ ಚಟುವಟಿಕೆಗಳನ್ನು ಟೂರಿಂಗ್ ಟೆಂಟ್ ಮಾಡುತ್ತಿದ್ದಾರೆ. ಮೈಸೂರು, ಬೆಂಗಳೂರು, ದೆಹಲಿ, ಕಲಬುರ್ಗಿಗೆ ಟೆಂಟ್ ವರ್ಗಾವಣೆ ಆಗುತ್ತಿದೆ. ಆಡಳಿತ ಕುಸಿದಿದೆ, ಇಂಟೆಲಿಜೆನ್ಸ್ ವಿಭಾಗಕ್ಕೆ ಯಾರಿಗೆ ಹೇಳಬೇಕೆಂದು ತಿಳಿಯುತ್ತಿಲ್ಲ ಎಂದು ವ್ಯಂಗ್ಯವಾಡಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,840 /Gram(24ct) ₹9,020/Gram(22ct) | ಬೆಳ್ಳಿ: ₹110.00/Gram

## ಕೊಲೆಯಾದ ಸ್ಥಿತಿಯಲ್ಲಿ 14 ವರ್ಷದ ಬಾಲಕಿ ಶವ ಪತ್ತೆ, ಅತ್ಯಾಚಾರ ಶಂಕೆ

• ಉದಯವಾಹಿನಿ, ಬೆಂಗಳೂರು

ರಾಮನಗರ ಜಿಲ್ಲೆಯ ತಾವರೆಕೆರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 14 ವರ್ಷದ ಬಾಲಕಿಯ ಶವ ಪತ್ತೆಯಾಗಿದ್ದು, ಅತ್ಯಾಚಾರ ನಡೆಸಿ, ಹತ್ಯೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಬಾಲಕಿ ಪೋಷಕರು ಕೊಪ್ಪಳ ಮೂಲದವರಾಗಿದ್ದು, ದಿನಗೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದಾರೆಂದು ತಿಳಿದುಬಂದಿದೆ. ರಾಮನಗರ ಎಸ್‌ಪಿ ಆರ್ ಶ್ರೀನಿವಾಸ್ ಗೌಡ ಅವರು ಮಾತನಾಡಿ, ಬಾಲಕಿಯ ಪೋಷಕರು ತಾವರೆಕೆರೆ ಪೊಲೀಸ್ ಠಾಣೆಯಲ್ಲಿ ಅತ್ಯಾಚಾರ ಮತ್ತು ಕೊಲೆ ಆರೋಪದ ಮೇಲೆ ದೂರು ದಾಖಲಿಸಿದ್ದಾರೆ. ಪ್ರಸ್ತುತ ಈ ಅಪರಾಧವನ್ನು ಕೊಲೆ ಪ್ರಕರಣವೆಂದು ಪರಿಗಣಿಸಲಾಗುತ್ತಿದ್ದು, ಕೊಲೆಗೆ ಮುನ್ನ ಆಕೆಯ ಮೇಲೆ ಅತ್ಯಾಚಾರ ನಡೆದಿದೆಯೇ ಎಂಬುದು ಮರಣೋತ್ತರ ಪರೀಕ್ಷೆಯ ನಂತರ ತಿಳಿದುಬರಲಿದೆ ಎಂದು ಹೇಳಿದ್ದಾರೆ. ಮಧ್ಯಾಹ್ನ 1 ರಿಂದ 2 ಗಂಟೆಯ ನಡುವೆ ಘಟನೆ ನಡೆದಿರುವ ಶಂಕೆಗಳಿವೆ. ಬಾಲಕಿ ಮನೆಯಲ್ಲಿ ಒಬ್ಬಂಟಿಯಾಗಿದ್ದು, ಈ ವೇಳೆ ಮನೆಗೆ ನುಗ್ಗಿರುವ ಆರೋಪಿಗಳು, ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ. ನಂತರ ಮಾರಣಾಂತಿಕವಾಗಿ ಹಲ್ಲೆ ನಡೆಸಿ, ಗ್ಯಾಸ್ ಸಿಲಿಂಡರ್‌ನಿಂದ ತಲೆಗೆ ಹೊಡೆದು ಪರಾರಿಯಾಗಿದ್ದಾರೆಂದು ಶಂಕಿಸಲಾಗಿದೆ.

## ಕಾಂಗ್ರೆಸ್ ಶಾಸಕ ಎಸ್.ಎನ್ ಸುಬ್ಬಾರೆಡ್ಡಿಗೆ ಇಡಿ ಶಾಕ್

• ಉದಯವಾಹಿನಿ, ಬೆಂಗಳೂರು

ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ 1999 (FEMA)ಯ ಸೆಕ್ಷನ್ 37ರಡಿಯಲ್ಲಿ ಕಾಂಗ್ರೆಸ್ ಶಾಸಕ ಎಸ್.ಎನ್. ಸುಬ್ಬಾರೆಡ್ಡಿಗೆ ಸಂಬಂಧಿಸಿದ ಬೆಂಗಳೂರಿನ ಐದು ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ ಅಧಿಕಾರಿಗಳು ಬೆಳಗಿನ ಜಾವ ದಾಳಿ ನಡೆಸಿದ್ದಾರೆ. ಶಾಸಕ ಸುಬ್ಬಾರೆಡ್ಡಿ ಅವರು ಹಾಂಗ್‌ಕಾಂಗ್, ಮಲೇಷ್ಯಾ ಮತ್ತು ಜರ್ಮನಿಯಾದ್ಯಂತ ಬ್ಯಾಂಕ್‌ಗಳಲ್ಲಿ ಕಪ್ಪು ಹಣ ಹೊಂದಿದ್ದಾರೆ, ಸರ್ಕಾರಕ್ಕೆ ದಾಖಲೆಗಳನ್ನು ತಿಳಿಸದೆ ವಾಹನಗಳು ಮತ್ತು ಆಸ್ತಿಗಳನ್ನು ಖರೀದಿಸಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದೆ. ವಿದೇಶಗಳಲ್ಲಿನ ಬ್ಯಾಂಕ್ ಅಕೌಂಟ್, ವಿದೇಶ ವ್ಯವಹಾರದಲ್ಲಿ ಹೂಡಿಕೆ ವಿಚಾರವಾಗಿ ಶೋಧ ನಡೆಸಲಾಗುತ್ತಿದೆ. ಶಾಸಕ ಸುಬ್ಬಾರೆಡ್ಡಿ ಮನೆ ಸೇರಿದಂತೆ ಒಟ್ಟು ಬೆಂಗಳೂರಿನ 5 ಕಡೆಗಳಲ್ಲಿ ಬೆಳಗ್ಗೆ ಜಾರಿ ನಿರ್ದೇಶನಾಲಯ (ಇಡಿ) ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಶಾಸಕ ಸುಬ್ಬಾರೆಡ್ಡಿ ಮತ್ತು ಸಂಬಂಧಿಕರಿಗೆ ಸೇರಿದ ಮನೆಗಳಲ್ಲಿ ಶೋಧ ನಡೆಯುತ್ತಿದೆ. ಸುಬ್ಬಾರೆಡ್ಡಿ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿ ಕ್ಷೇತ್ರದ ಕಾಂಗ್ರೆಸ್ ಶಾಸಕರಾಗಿದ್ದು, ಇವರ ವಿರುದ್ಧ ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ ಉಲ್ಲಂಘನೆ ಆರೋಪ ಕೇಳಿಬಂದಿತ್ತು. ಅದರ ಅನ್ವಯ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

## ಯಶವಂತಪುರ-ಕಾಚಿಗುಡ ವಂದೇ ಭಾರತ್‌ಗೆ 16 ಬೋಗಿ

• ಉದಯವಾಹಿನಿ, ಬೆಂಗಳೂರು

ಕಾಚಿಗುಡ – ಯಶವಂತಪುರ ನಡುವೆ ಸಂಚರಿಸುವ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ಬೋಗಿಗಳ ಸಂಖ್ಯೆಯನ್ನು 16ಕ್ಕೆ ಹೆಚ್ಚಿಸಲಾಗಿದೆ. ವಂದೇ ಭಾರತ್ ರೈಲು 8 ಬೋಗಿಗಳೊಂದಿಗೆ ಸಂಚರಿಸುತ್ತಿದೆ. ಪ್ರಯಾಣಿಕರ ಸಂಖ್ಯೆ ಹೆಚ್ಚುತ್ತಿರುವುದರಿಂದ ಬೋಗಿಗಳ ಸಂಖ್ಯೆ ಹೆಚ್ಚಿಸಲು ನಿರ್ಧರಿಸಲಾಗಿದೆ. ಜುಲೈ 10 ರಿಂದ 16 ಬೋಗಿಗಳ ವಂದೇ ಭಾರತ್ ಸಂಚರಿಸಲಿದೆ. ಇದು ಶಾಶ್ವತ ವ್ಯವಸ್ಥೆಯಾಗಿದೆ ಎಂದು ನೈರುತ್ಯ ರೈಲ್ವೆ ಅಧಿಕಾರಿಗಳು ತಿಳಿಸಿದ್ದಾರೆ.

## ಪತ್ನಿಯನ್ನು ಕೊಂದಿದ್ದ ಪತಿ ಬಂಧನ

• ಉದಯವಾಹಿನಿ, ಬೆಂಗಳೂರು

ಶಾಪಿಂಗ್‌ಗೆ ಹೋಗಿ ಮನೆಗೆ ಬಂದಿದ್ದ ಪತ್ನಿಯ ಜತೆಗೆ ಗಲಾಟೆ ನಡೆಸಿ ಕತ್ತು ಹಿಸುಕಿ ಕೊಲೆ ಮಾಡಿದ್ದ ಪತಿಯನ್ನು ಬೊಮ್ಮನಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಹರೀಶ್ ಬಂಧಿತ ಆರೋಪಿ. ಪದ್ಮಜಾ (29) ಕೊಲೆಯಾದವರು. ಕೋಲಾರ ಜಿಲ್ಲೆಯ ಶ್ರೀನಿವಾಸಪುರದ ದಂಪತಿ ಬೊಮ್ಮನಹಳ್ಳಿಯಲ್ಲಿ ನೆಲಸಿದ್ದರು. ದಂಪತಿಗೆ ಇಬ್ಬರು ಮಕ್ಕಳಿದ್ದಾರೆ. ಪದ್ಮಜಾ ಅವರು ಸಾಫ್ಟ್‌ವೇರ್ ಎಂಜಿನಿಯರ್. ಹರೀಶ್ ಸಿವಿಲ್ ಎಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದರು ಎಂದು ಪೊಲೀಸರು ಹೇಳಿದರು. ಹರೀಶ್ ಅವರು ಇತ್ತೀಚೆಗೆ ಕೆಲಸಕ್ಕೆ ಹೋಗುತ್ತಿರಲಿಲ್ಲ. ಮದ್ಯ ಸೇವಿಸಿ ಮನೆಗೆ ಬಂದು ಗಲಾಟೆ ಮಾಡುತ್ತಿದ್ದರು. ಹರೀಶ್ ಹತ್ತು ದಿನಗಳ ಹಿಂದೆ ಕೆಲಸಕ್ಕೆ ಸೇರಿದ್ದರು. ಜುಲೈ 6ರಂದು ಶಾಪಿಂಗ್‌ಗೆ ಹೋಗಿ ಮನೆಗೆ ಬಂದಿದ್ದ ಪತ್ನಿಯೊಂದಿಗೆ ಜಗಳವಾಡಿದ್ದರು. ಇಬ್ಬರ ನಡುವಿನ ವಾಗ್ವಾದ ವಿಕೋಪಕ್ಕೆ ತಿರುಗಿ, ಪತ್ನಿಯನ್ನು ಹರೀಶ್ ಕೆಳಕ್ಕೆ ಬೀಳಿಸಿ ಕತ್ತು ಹಿಸುಕಿ ಕೊಲೆ ಮಾಡಿದ್ದರು ಎಂಬುದು ತನಿಖೆಯಿಂದ ಗೊತ್ತಾಗಿತ್ತು. ಅದನ್ನು ಆಧರಿಸಿ ಆರೋಪಿಯನ್ನು ಬಂಧಿಸಲಾಗಿದೆ' ಎಂದು ಪೊಲೀಸರು ಹೇಳಿದರು.

## ತುಮಕೂರಿನಲ್ಲಿ 80,000 ಸಸಿ ನೆಡಲು ಉಪ ಲೋಕಾಯುಕ್ತರಿಂದ ಬೃಹತ್ ಅಭಿಯಾನ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಪರಿಸರವನ್ನು ರಕ್ಷಿಸುವ ಮತ್ತು ಸಮೃದ್ಧಗೊಳಿಸುವ ತಮ್ಮ ಧ್ಯೇಯವನ್ನು ಮುಂದುವರೆಸುತ್ತಿರುವ, ಉಪ ಲೋಕಾಯುಕ್ತ ನ್ಯಾಯಮೂರ್ತಿ ಬಿ ವೀರಪ್ಪ ಗುರುವಾರ ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ 300 ಎಕರೆ ಅರಣ್ಯ ಭೂಮಿಯಲ್ಲಿ 80,000 ಸಸಿಗಳನ್ನು ನೆಡುವ ಬೃಹತ್ ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಕಂದಾಯ ಇಲಾಖೆಯು ಅತಿಕ್ರಮಣದಾರರಿಂದ ವಶಪಡಿಸಿಕೊಂಡ ಭೂಮಿಯಲ್ಲಿ ಸಸಿ ನೆಡಲು ಅರಣ್ಯ ಇಲಾಖೆಗೆ ಹಸ್ತಾಂತರಿಸಿದೆ. ಜುಲೈ 2024 ರಲ್ಲಿ ಉಪ ಲೋಕಾಯುಕ್ತರಾಗಿ ಅಧಿಕಾರ ವಹಿಸಿಕೊಂಡ ನಂತರ, ನ್ಯಾಯಮೂರ್ತಿ ವೀರಪ್ಪ ಅವರು ತುಮಕೂರಿನಲ್ಲಿ 25,000, ಕೋಲಾರದಲ್ಲಿ 10,000 ಮತ್ತು ಮಂಡ್ಯ ಜಿಲ್ಲೆಯ ಕರಿಘಟ್ಟದಲ್ಲಿ 2,000 ಸೇರಿದಂತೆ 40,000 ಸಸಿಗಳನ್ನು ನೆಡುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಚಿಕ್ಕನಾಯಕನಹಳ್ಳಿಯ ಭೂಮಿಯನ್ನು ದಶಕಗಳಿಂದ ಅತಿಕ್ರಮಣದಾರರು ಒತ್ತುವರಿ ಮಾಡಿದಕೊಂಡಿದನು ಮತ್ತು ಅದನ್ನು ಅರಣ್ಯ ಭೂಮಿಯಾಗಿ ಪುನಃಸ್ಥಾಪಿಸಲಾಯಿತು. 2015 ರಲ್ಲಿ ಸಿದ್ದಲಿಂಗೇಗೌಡ ಎಂಬವರು ಸಲ್ಲಿಸಿದ ದೂರಿನ ಮೇರೆಗೆ 2019 ರಲ್ಲಿ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಸೆಕ್ಷನ್ 12(1) ರ ಅಡಿಯಲ್ಲಿ ಆಗಿನ ಉಪ ಲೋಕಾಯುಕ್ತ ನ್ಯಾಯಮೂರ್ತಿ ಎನ್ ಆನಂದ್ ಅವರು ಶಿಫಾರಸು ಮಾಡಿದ್ದರು. ಆದರೂ ಅಧಿಕಾರಿಗಳು ಸುಮಾರು ಆರು ವರ್ಷಗಳ ಕಾಲ ಭೂಮಿಯನ್ನು ಮರಳಿ ಪಡೆದಿರಲಿಲ್ಲ. ಅಧಿಕಾರ ವಹಿಸಿಕೊಂಡ ನಂತರ ಈ ವಿಷಯವನ್ನು ಕೈಗೆತ್ತಿಕೊಂಡ ನ್ಯಾಯಮೂರ್ತಿ ವೀರಪ್ಪ, ಅಗತ್ಯ ಕ್ರಮ ಕೈಗೊಂಡರು, ಸಂಬಂಧಪಟ್ಟ ಅಧಿಕಾರಿಗಳನ್ನು ಕರೆಸಿ ಸಮಸ್ಯೆಯನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲು ನಿರಂತರ ವಿಚಾರಣೆಗಳನ್ನು ನಿಗದಿಪಡಿಸಿದರು.

ಜೂನ್ 17, 2025 ರಂದು ಕಂದಾಯ ಇಲಾಖೆಯು ಭೂಮಿಯನ್ನು ಮರಳಿ ಪಡೆದು ಕಂದಾಯ ದಾಖಲೆಗಳಲ್ಲಿ ಸಂಬಂಧಿತ ನಮೂದುಗಳನ್ನು ಮಾಡುವುದರೊಂದಿಗೆ ಈ ಪ್ರಕ್ರಿಯೆಗಳು ಕೊನೆಗೊಂಡವು, ಈ ಭೂಮಿ ಅರಣ್ಯಕ್ಕೆ ಸೇರಿದೆ ಎಂದು ದಾಖಲಾಗಿದೆ. ನಾನು ಭೂಮಿಯನ್ನು ನಿರ್ಲಜ್ಜ ವ್ಯಕ್ತಿಗಳಿಂದ ರಕ್ಷಿಸಲು ಮತ್ತು ಪ್ರಕೃತಿಯನ್ನು ಮತ್ತಷ್ಟು ಉತ್ಕೃಷ್ಟಗೊಳಿಸಲು ನೆಡುತೋಪು ಅಭಿಯಾನವನ್ನು ಪ್ರಾರಂಭಿಸುತ್ತಿದ್ದೇನೆ ಎಂದು ನ್ಯಾಯಮೂರ್ತಿ ವೀರಪ್ಪ ಟಿಎನ್‌ಐಗೆ ತಿಳಿಸಿದರು.

### ● ಜಯದೇವ ಆಸ್ಪತ್ರೆಗೆ ಫಾಲೋ ಅಪ್ ರೋಗಿಗಳಿಗೆ ಪ್ರತ್ಯೇಕ ಕೌಂಟರ್ ತೆರೆಯಲಾಗಿದೆ

# ಹೃದಯಾಘಾತದ ಆತಂಕ: ಜಯದೇವದಲ್ಲಿ ಜನವೋ ಜನ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ಹೃದಯಾಘಾತ ಪ್ರಕರಣಗಳ ಹೆಚ್ಚಳದ ಹಿನ್ನೆಲೆಯಲ್ಲಿ ದೇಶದ ಪ್ರತಿಷ್ಠಿತ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ತಪಾಸಣೆಗೆ ಬರುವವರ ಸಂಖ್ಯೆಯು ದಾಖಲೆ ಪ್ರಮಾಣದಲ್ಲಿ ಏರಿಕೆಯಾಗಿದೆ.

ಬೆಂಗಳೂರು ನಗರ ಸೇರಿದಂತೆ ರಾಜ್ಯದ ಬೇರೆ ಬೇರೆ ಜಿಲ್ಲೆಗಳಿಂದ ಜಯದೇವ ಆಸ್ಪತ್ರೆಗೆ ತಪಾಸಣೆಗೆಂದು ಜನ ಸಾಗರವೇ ಹರಿದು ಬರುತ್ತಿದೆ. ಯಾವುದೇ ಆರೋಗ್ಯ ಸಮಸ್ಯೆ ಇಲ್ಲದವರೂ ಒಮ್ಮೆ ಪರೀಕ್ಷಿಸಿಕೊಳ್ಳುವ ಉದ್ದೇಶದಿಂದ ಆಸ್ಪತ್ರೆಗೆ ದೌಡಾಯಿಸುತ್ತಿದ್ದಾರೆ. ಈಗ ಆಸ್ಪತ್ರೆಯ ತುಂಬೆಲ್ಲಾ ಜನವೋ ಜನ. ಹೃದ್ರೋಗದ ಪ್ರಾಥಮಿಕ ಚಿಕಿತ್ಸೆಗಳಾದ ಇಸಿಜಿ, ಟಿಎಂಟಿ, ಎಕೋ ಕೇಂದ್ರಗಳು ಜನರಿಂದ ತುಂಬಿ ತುಳುಕುತ್ತಿವೆ. ಬೆಳಗ್ಗೆ ಆರು ಗಂಟೆಯಿಂದಲೇ ಜನರು ಸರದಿ ಸಾಲಿನಲ್ಲಿ ನಿಂತು ಟೋಕನ್ ಪಡೆಯುತ್ತಿದ್ದಾರೆ. ಇಸಿಜಿಯಲ್ಲಿ ಸ್ವಲ್ಪ ಸಂಶಯವಿದ್ದರೂ ಅಗತ್ಯ ಇರುವ ಎಲ್ಲಾ ಪರೀಕ್ಷೆಗಳನ್ನು ಮಾಡಿಸಿ ಹೃದ್ರೋಗದ ಬಗ್ಗೆ ಖಚಿತಪಡಿಸಿಕೊಳ್ಳಲಾಗುತ್ತಿದೆ. ಆತಂಕದಿಂದ, ತಪಾಸಣೆಗೆಂದು ಕುಟುಂಬ ಸದಸ್ಯರನ್ನು ಕರೆದುಕೊಂಡು ಬಂದವರೂ ತಪಾಸಣೆ ಮಾಡಿಸಿಕೊಳ್ಳುತ್ತಿದ್ದಾರೆ.

**ಯುವಕರೇ ಹೆಚ್ಚು:** ತಪಾಸಣೆಗೆ ಸರದಿ ಸಾಲಿನಲ್ಲಿ ನಿಂತವರತ್ತ ಕಣ್ಣಾಡಿಸಿದರೆ, ಯುವ ಸಮುದಾಯದ ದೊಡ್ಡ ದಂಡೇ ಕಾಣುತ್ತಿದೆ. ಸ್ನೇಹಿತರೆಲ್ಲಾ ಒಟ್ಟಾಗಿ ಬಂದು ತಪಾಸಣೆ ಮಾಡಿಸಿಕೊಳ್ಳುತ್ತಿದ್ದಾರೆ. ಹೆಚ್ಚಾಗಿ ಯುವಜನರಲ್ಲಿ ವಂಶವಾಹಿ ಹೃದಯಾಘಾತದ ಆತಂಕ ಕಾಡುತ್ತಿದೆ.

- **ಬೆಂಗಳೂರು ನಗರ ಮತ್ತು ರಾಜ್ಯದ ಇತರ ಜಿಲ್ಲೆಗಳಿಂದ ಜನರು ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಗೆ ತಪಾಸಣೆಗೆ ಆಗಮಿಸುತ್ತಿದ್ದಾರೆ, ಏಕಕಾಲದಲ್ಲಿ 1,800 ಜನ ಕಾಯುತ್ತಿದ್ದಾರೆ**
- **ಹೃದಯಾಘಾತದ ಆತಂಕದಿಂದ ಜನರು ಆರೋಗ್ಯದ ಯಾವುದೇ ಸಮಸ್ಯೆ ಇಲ್ಲದಿದ್ದರೂ ಕೂಡ ತಪಾಸಣೆ ಮಾಡಿಸಲು ಬರುತ್ತಿದ್ದಾರೆ, ವಿಶೇಷವಾಗಿ ಯುವಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತಿದ್ದಾರೆ.**

**ಸರಾಸರಿ 300 ಜನ ಹೆಚ್ಚಳ**

**ಆಸ್ಪತ್ರೆಯಲ್ಲಿ ನಿತ್ಯ ಸರಾಸರಿ 1,200ರಿಂದ 1,500 ಜನರು ಹೊರರೋಗಿಗಳ ವಿಭಾಗದಲ್ಲಿ ಚಿಕಿತ್ಸೆಗೆಂದು ಬರುತ್ತಿದ್ದರು. ಕಳೆದ ಹದಿನೈದು ದಿನದಿಂದ ಈ ಸಂಖ್ಯೆ 1,800ಕ್ಕೆ ಏರಿಕೆಯಾಗಿದೆ. ಒಳ ರೋಗಿಗಳ ಸಂಖ್ಯೆ ಸರಾಸರಿ 200 ರಿಂದ 250ಕ್ಕೆ ಏರಿಕೆಯಾಗಿದೆ. ಜಯದೇವದ ಮೈಸೂರು, ಕಲಬುರಗಿ ಕೇಂದ್ರದಲ್ಲೂ ಹೃದ್ರೋಗ ತಪಾಸಣೆ ಮಾಡಿಸಿಕೊಳ್ಳುವವರ ಸಂಖ್ಯೆ ಹೆಚ್ಚಾಗಿದೆ, ಎಂದು ಜಯದೇವ ಆಸ್ಪತ್ರೆ ನಿರ್ದೇಶಕ ಡಾ.ರವೀಂದ್ರನಾಥ್ ತಿಳಿಸಿದರು. ತೀವ್ರ ನಿಗಾ ಘಟಕದ (ಐಸಿಯು) ಹಾಸಿಗೆಗಳು ಸಂಪೂರ್ಣ ಭರ್ತಿಯಾಗಿವೆ. ಇದೇ ವೇಳೆ ಚಿಕಿತ್ಸೆ ಪಡೆದು ಹೊರ ಹೋಗುವವರ ಸಂಖ್ಯೆ ಕೂಡ ಹೆಚ್ಚಿದೆ. ಚಿಕಿತ್ಸೆಗೆಂದು ಬಂದ ಯಾರಿಗೂ ಚಿಕಿತ್ಸೆ ನೀಡದೆ ವಾಪಸ್ ಕಳುಹಿಸುವುದಿಲ್ಲ. ಹೊರ ರೋಗಿಗಳ (ಒಪಿಡಿ) ವಿಭಾಗದಲ್ಲಿ ಚಿಕಿತ್ಸೆಗೆಂದು ಬಂದವರನ್ನು ಸಂಪೂರ್ಣ ತಪಾಸಣೆ ಮಾಡಲಾಗುತ್ತಿದೆ. ಒಳ ರೋಗಿಗಳ ಸಂಖ್ಯೆಯಲ್ಲಿ ಹೆಚ್ಚಿನ ವ್ಯತ್ಯಾಸವಾಗಿಲ್ಲ, ಎಂದು ಅವರು ಮಾಹಿತಿ ನೀಡಿದರು.**

**ಫಾಲೋಅಪ್ ರೋಗಿಗಳಿಗೆ ಪ್ರತ್ಯೇಕ ಕೌಂಟರ್ ಬೇಕು:** ಸದ್ಯ ಹೊಸದಾಗಿ ತಪಾಸಣೆಗೆಂದು ಬರುವವರ ಸಂಖ್ಯೆ ಹೆಚ್ಚಾದ ಹಿನ್ನೆಲೆಯಲ್ಲಿ ಫಾಲೋ ಅಪ್ ರೋಗಿಗಳು ಕೂಡ ಬಹಳ ಹೊತ್ತುಕಾಯುವ ಪರಿಸ್ಥಿತಿ ಸೃಷ್ಟಿಯಾಗಿದೆ. ನನಗೆ ಈಗಾಗಲೇ ಎರಡು ಸ್ಟೆಂಟ್ ಹಾಕಲಾಗಿದೆ. ಆರು ತಿಂಗಳಿಗೊಮ್ಮೆ ಫಾಲೋ ಅಪ್‌ಗೆ ಬರುವಂತೆ ವೈದ್ಯರು ಸೂಚಿಸಿದ್ದಾರೆ. ಬೆಳಗ್ಗೆ ಆರು ಗಂಟೆಗೆ ಬಂದು ಸರದಿಯಲ್ಲಿ ನಿಂತು ಟೋಕನ್ ತೆಗೆದುಕೊಂಡೆ. ರಕ್ತಪರೀಕ್ಷೆ ಸೇರಿದಂತೆ ಎಲ್ಲಾ ಪರೀಕ್ಷೆ ಮಾಡಲಾಗಿದೆ. ಆದರೆ, ವರದಿ ಕೈ ಸೇರುವ ಹೊತ್ತಿಗಾಗಲೇ ಮಧ್ಯಾಹ್ನವಾಗಿದೆ. ಇನ್ನೂ ವೈದ್ಯರ ಭೇಟಿಯಾಗಿಲ್ಲ, ವೈದ್ಯರು ವರದಿ ನೋಡಿದ ನಂತರ ಮತ್ತೆ ಯಾವಾಗ ಬರಬೇಕೆಂದು ಹೇಳುತ್ತಾರೆ. ಈ ಹಿಂದೆ ಬಂದಾಗ ಮಧ್ಯಾಹ್ನದ ವೇಳೆಗೆ ಎಲ್ಲಾ ತಪಾಸಣೆ ಮುಗಿದಿತ್ತು.

ಈಗ ಮಧ್ಯಾಹ್ನ 2 ಗಂಟೆಯಾದರೂ ಇನ್ನೂ ವೈದ್ಯರನ್ನು ಭೇಟಿ ಮಾಡಲು ಸಾಧ್ಯವಾಗಿಲ್ಲ, ಫಾಲೋಅಪ್‌ಗೆ ಬರುವವರಿಗೆ ಪ್ರತ್ಯೇಕ ಕೌಂಟರ್ ತೆರೆದರೆ ಅನುಕೂಲ, ಎಂದು ಸುನಿಲ್ ಹೇಳಿದರು.

ಕಳೆದ ಕೆಲ ದಿನಗಳಿಂದ ಎದೆಯಲ್ಲಿ ಬಿಟ್ಟು ಬಿಟ್ಟು ನೋವು ಬರುತ್ತಿತ್ತು. ಅದಕ್ಕೆ ಬೆಂಗಳೂರು ಜಯದೇವಕ್ಕೆ ಬಂದು ತಪಾಸಣೆ ಮಾಡಿಸಿದೆ. ವೈದ್ಯರು ಯಾವುದೇ ಸಮಸ್ಯೆಯಿಲ್ಲ ಎಂದರು.

## ಒಳಮೀಸಲಾತಿ ವರ್ಗೀಕರಣದ ವೇಳೆ ಕೊರಚ ಸಮುದಾಯದ ಅಭಿಪ್ರಾಯ ಪರಿಗಣಿಸಲು ಆಗ್ರಹ

• ಉದಯವಾಹಿನಿ, ಬೆಂಗಳೂರು

ಒಳ ಮೀಸಲಾತಿ ವರ್ಗೀಕರಣ ಮಾಡುವ ಸಂದರ್ಭದಲ್ಲಿ ಕೊರಚ ಸಮುದಾಯದ ಪ್ರತಿನಿಧಿಗಳ ಅಭಿಪ್ರಾಯಗಳು, ಸಲಹೆಗಳನ್ನೂ ಪರಿಗಣಿಸಿ ತೀರ್ಮಾನ ಕೈಗೊಳ್ಳಬೇಕು ಎಂದು ಅಖಿಲ ಕರ್ನಾಟಕ ಕೊರಚ ಮಹಾಸಭಾ ಆಗ್ರಹಿಸಿದೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಹಾಸಭಾದ ರಾಜ್ಯ ಘಟಕದ ಅಧ್ಯಕ್ಷ ಆದರ್ಶ ಯಲ್ಲಪ್ಪ, ಪರಿಶಿಷ್ಟ ಜಾತಿಯ 101 ಸಮುದಾಯಗಳ ಪಟ್ಟಿಯಲ್ಲಿ ಕೊರಚ ಮತ್ತು ಕೊರಮ ಸಮುದಾಯಗಳಿದ್ದು, ಇವರೆಡೂ ಪ್ರತ್ಯೇಕ ಸಮುದಾಯಗಳಾಗಿವೆ. ಒಳ ಮೀಸಲಾತಿ ನಿಗದಿ ಸಂದರ್ಭದಲ್ಲಿ ಕೊರಚ ಸಮುದಾಯದ ಅಭಿಪ್ರಾಯಗಳನ್ನೂ ಪರಿಗಣಿಸಬೇಕು ಎಂದು ಒತ್ತಾಯಿಸಿದರು. ಸೂಕ್ಷ್ಮ, ಅತಿಸೂಕ್ಷ್ಮ ಸಮುದಾಯದಲ್ಲಿ ಬರುವ ಕೊರಚ ಸಮುದಾಯವನ್ನು ಕೈಬಿಟ್ಟು ಜುಲೈ 5ರಂದು ಮಾಜಿ ಸಚಿವ ಎಚ್. ಆಂಜನೇಯ ಅವರ ನೇತೃತ್ವದಲ್ಲಿ ಅಲೆಮಾರಿ ಸಭೆ ಹಮ್ಮಿಕೊಳ್ಳಲಾಗಿತ್ತು. ಇದು ಖಂಡನೀಯ. ಎಚ್. ಆಂಜನೇಯ ಅವರು ಎಲ್ಲಾರನ್ನೂ ಒಟ್ಟುಗೂಡಿಸಿ



ಉದಯವಾಹಿನಿ ಚಿತ್ರ

ಮತ್ತೊಂದು ಸಭೆ ನಡೆಸಿ, ಒಳ ಮೀಸಲಾತಿ ವರ್ಗೀಕರಣದ ಬಗ್ಗೆ ಚರ್ಚಿಸುವ ಭರವಸೆ ನೀಡಿದ್ದಾರೆ. ಇದಕ್ಕೆ ನಮ್ಮ ಬೆಂಬಲವಿದೆ. ಮುಂದಿನ ದಿನಗಳಲ್ಲಿ ಪರಿಶಿಷ್ಟ ಜಾತಿಯ ಸಮಸ್ತ ಅಲೆಮಾರಿ ಅಧಿಕೃತ ಸಮುದಾಯಗಳು ಒಗ್ಗಟ್ಟಾಗಿ ಹೋರಾಟ ಮಾಡಿ, ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಿಸಲು ಪ್ರಯತ್ನಿಸಬೇಕು ಎಂದು ತಿಳಿಸಿದರು. 2011ರ ಜನಗಣತಿಯ ಪ್ರಕಾರ ಕೊರಚ ಸಮುದಾಯದ ಜನಸಂಖ್ಯೆ 55 ಸಾವಿರಕ್ಕೂ ಹೆಚ್ಚಿದೆ. ನಮ್ಮ ಸಮುದಾಯವನ್ನು ಅಲೆಮಾರಿ ಪಟ್ಟಿಯಿಂದ ಕೈಬಿಡಬಾರದು' ಎಂದು ಆಗ್ರಹಿಸಿದರು.

## ಕೆರೆ ಅಭಿವೃದ್ಧಿ ಹೆಸರಿನಲ್ಲಿ ಹಣ ಸಂಗ್ರಹಣೆ ಅಕ್ರಮ

• ಉದಯವಾಹಿನಿ, ಬೆಂಗಳೂರು

ಕೆರೆ 'ಅಭಿವೃದ್ಧಿ' ಮತ್ತು ಇತರ ಚಟುವಟಿಕೆಗಳಿಗೆ ಹಣ ಸಂಗ್ರಹಣೆ ಮಾಡುವುದು ಅಕ್ರಮ ಎಂದು ಹೇಳಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ಹಣ ಸಂಗ್ರಹಿಸುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದೆ.

ಕೆರೆ ಪುನರುಜ್ಜೀವನ ಮತ್ತು ಅಭಿವೃದ್ಧಿ ಚಟುವಟಿಕೆಗಳಿಗಾಗಿ ಎನ್‌ಜಿಒಗಳು ಮತ್ತು ಸಂಘಗಳು ಹಣ ಸಂಗ್ರಹಿಸುತ್ತಿವೆ ಎಂದು ವರದಿಯಾಗಿವೆ. ಇದು ಕಾನೂನುಬದ್ಧವಲ್ಲ ಎಂದು ಪಾಲಿಕೆ ಹೇಳಿದೆ. ಬೆಂಗಳೂರು ದಕ್ಷಿಣ ವಿಭಾಗದಲ್ಲಿ ಹಲವು ಗುಂಪು ಇಂತಹ ಚಟುವಟಿಕೆಯಲ್ಲಿ ಭಾಗಿಯಾಗಿದ್ದು, ಕೆರೆ ಅಭಿವೃದ್ಧಿಗಾಗಿ ಯುಪಿಐ ಪಾವತಿಗಳಿಗಾಗಿ ಕ್ಯೂಆರ್ ಕೋಡ್‌ಗಳಲ್ಲಿ ಅಂಟಿಸಿದೆ ಎಂದು ಹಿರಿಯ ಎಂಜಿನಿಯರ್ ಒಬ್ಬರು ಹೇಳಿದ್ದಾರೆ. ಖಾಸಗಿ ಸಂಘವು ಕೆರೆಗಳಿಗೆ ಭದ್ರತಾ ಸಿಬ್ಬಂದಿಗಳನ್ನು ನಿಯೋಜಿಸಿ ಅಭಿವೃದ್ಧಿ ಕಾರ್ಯಕ್ಕಾಗಿ ತೆರಳುವ ಬಿಬಿಎಂಪಿ ನಿರ್ವಹಣಾ ತಂಡ ಮತ್ತು ಎಂಜಿನಿಯರ್‌ಗಳನ್ನು ತಡೆಯುವ ಕೆಲಸ ಮಾಡುತ್ತಿದ್ದರೆ. ನಗರದ ಕೆರೆಗಳು ಪಾಲಿಕೆಯ



ಉದಯವಾಹಿನಿ ಚಿತ್ರ

ಆಸ್ತಿಯಾಗಿದ್ದು, ಖಾಸಗಿ ಸಂಸ್ಥೆಗಳ ನಿಧಿ ಸಂಗ್ರಹವನ್ನು ಒಪ್ಪಲು ಸಾಧ್ಯವಿಲ್ಲ.

ಯಾವುದೇ ಖಾಸಗಿ ಸಂಸ್ಥೆ ಕೆರೆ ಅಭಿವೃದ್ಧಿ ಮಾಡಲು ಮುಂದಾದರೆ ಮೊದಲು ಅದು ಬಿಬಿಎಂಪಿಯೊಂದಿಗೆ ಒಪ್ಪಂದ ಪತ್ರವನ್ನು ಮಾಡಿಕೊಳ್ಳಬೇಕಾಗುತ್ತದೆ. ಒಪ್ಪಂದ ಮಾಡಿಕೊಳ್ಳುವವರು ನಿಧಿ ಸಂಗ್ರಹ, ವಾಣಿಜ್ಯ ಕಾರ್ಯಸೂಚಿಗಳನ್ನು ಆಶ್ರಯಿಸುವುದಿಲ್ಲ ಎಂದು ಘೋಷಿಸಬೇಕು ಎಂದು ಕೆರೆ ಅಭಿವೃದ್ಧಿ ಎಂಜಿನಿಯರ್ ಒಬ್ಬರು ಹೇಳಿದ್ದಾರೆ. ಕೆರೆ ಅಭಿವೃದ್ಧಿ ಹೆಸರಿನಲ್ಲಿ ನಿಧಿ ಸಂಗ್ರಹಿಸುತ್ತಿದ್ದ ಖಾಸಗಿ ಸಂಸ್ಥೆಯೊಂದಕ್ಕೆ ಈಗಾಗಲೇ ನೋಟಿಸ್ ಜಾರಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಕರ್ನಾಟಕ ಟ್ಯಾಂಕ್ ಅಭಿವೃದ್ಧಿ ಮತ್ತು ಸಂರಕ್ಷಣಾ ಪ್ರಾಧಿಕಾರ (ಕೆಟಿಡಿಸಿಎ) ಕೂಡ ಬಿಬಿಎಂಪಿ ಕ್ರಮವನ್ನು ಬೆಂಬಲಿಸಿದೆ. ಕೆರೆ ಅಭಿವೃದ್ಧಿ ಹೆಸರಿನಲ್ಲಿ ನಿಧಿ ಸಂಗ್ರಹ ವಿಚಾರ ನಮ್ಮ ಗಮನಕ್ಕೆ ಬಂದರೆ ನಾವೂ ನೋಟಿಸ್ ನೀಡುತ್ತೇವೆಂದು ಹೇಳಿದೆ. ಸಾರ್ವಜನಿಕರಿಂದ ಜಲಮೂಲ ಅಭಿವೃದ್ಧಿಗಾಗಿ ಹಣ ಸಂಗ್ರಹಿಸುವ ವಿಷಯ ನ್ಯಾಯಾಲಯದಲ್ಲಿ ಬಗೆಹರಿಯುವವರೆಗೆ, ಈ ಸಂಗ್ರಹಗಳನ್ನು ಕಾನೂನುಬಾಹಿರವೆಂದೇ ಪರಿಗಣಿಸಲಾಗುತ್ತದೆ ಎಂದು ಕೆಟಿಡಿಸಿಎ ಸ್ಪಷ್ಟಪಡಿಸಿದೆ.

> **ಈಗಾಗಲೇ ನಮ್ಮ ತಂಡಗಳಿಗೆ ಎಚ್ಚರಿಕೆ ನೀಡಲಾಗಿದ್ದು, ಸರೋವರ ನಿರ್ವಹಣೆಯಲ್ಲಿ ತೊಡಗಿರುವ ಎನ್‌ಜಿಒಗಳು ಮತ್ತು ಸಂಘಗಳನ್ನು ಪರಿಶೀಲನೆ ನಡೆಸಲಾಗುತ್ತಿದೆ. ಇವರು ನಿಧಿ ಸಂಗ್ರಹದಲ್ಲಿ ಭಾಗಿಯಾಗಿರುವುದು ಕಂಡುಬಂದರೆ, ಅವರಿಗೆ ನೀಡಲಾದ ಅನುಮತಿಯನ್ನು ರದ್ದುಗೊಳಿಸುತ್ತೇವೆ ಎಂದು ಕೆಟಿಡಿಸಿಎ ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ.**

## ಪುಷ್ಪಗಳಲ್ಲಿ ಅರಳಲಿದ್ದಾರೆ ಕಿತ್ತೂರು ರಾಣಿ ಚನ್ನಮ್ಮ ಸಂಗೊಳ್ಳಿ ರಾಯಣ್ಣ

• ಉದಯವಾಹಿನಿ, ಬೆಂಗಳೂರು

ಸ್ವಾತಂತ್ರ್ಯೋತ್ಸವದ ಅಂಗವಾಗಿ ತೋಟಗಾರಿಕೆ ಇಲಾಖೆ ಆಯೋಜಿಸುವ ಲಾಲ್‌ಬಾಗ್ ಫಲಪುಷ್ಪ ಪ್ರದರ್ಶನದಲ್ಲಿ ಈ ಬಾರಿ 'ಕಿತ್ತೂರು ರಾಣಿ ಚನ್ನಮ್ಮ ಹಾಗೂ ಸಂಗೊಳ್ಳಿ ರಾಯಣ್ಣ' ಅವರ ವಿಷಯಾಧಾರಿತ ಹೂವಿನ ಪ್ರತಿಕೃತಿಗಳು ಕಣ್ಮನ ಸೆಳೆಯಲಿವೆ.

ಸ್ವಾತಂತ್ರ್ಯೋತ್ಸವದ ಅಂಗವಾಗಿ ಆಗಸ್ಟ್ 7 ರಿಂದ 15ರವರೆಗೆ ಲಾಲ್‌ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನ ನಡೆಯಲಿದೆ. ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಹೋರಾಟ ನಡೆಸಿದ ಕಿತ್ತೂರು ರಾಣಿ ಚನ್ನಮ್ಮ ಹಾಗೂ ಸಂಗೊಳ್ಳಿ ರಾಯಣ್ಣ ಅವರ ಜೀವನವನ್ನು ಪುಷ್ಪಗಳಲ್ಲಿ ಕಟ್ಟಿಕೊಡಲು



ಉದಯವಾಹಿನಿ ಚಿತ್ರ

ತೋಟಗಾರಿಕೆ ಇಲಾಖೆ ಸಿದ್ಧತೆ ನಡೆಸಿದೆ. ಪುಷ್ಪ ಪ್ರದರ್ಶನ ಹೇಗಿರಬೇಕು ಎಂಬುದರ ಕುರಿತು ಈಗಾಗಲೇ ವಿಷಯ ತಜ್ಞರು, ಪರಿಣತರೊಂದಿಗೆ ಚರ್ಚೆ ನಡೆಸುತ್ತಿದ್ದೇವೆ ಎಂದು ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ಪ್ರದರ್ಶನಕ್ಕಾಗಿ ಇಲಾಖೆಯ ನರ್ಸರಿಗಳಲ್ಲಿ ವೈವಿಧ್ಯಮಯ ಪುಷ್ಪಗಳನ್ನು ಬೆಳೆಯಲಾಗುತ್ತಿದೆ. ಶೀತ ಪ್ರದೇಶಗಳಲ್ಲಿ ಬೆಳೆಯುವ ಹೂಗಳು ಈ ಬಾರಿಯ ಆಕರ್ಷಣೆ ಆಗಲಿವೆ. ದೇಶ, ವಿದೇಶಗಳಿಂದ ವಿವಿಧ ತಳಿಯ ಹೂಗಳನ್ನು ಆಮದು ಮಾಡಿಕೊಳ್ಳಲಾಗುವುದು' ಎಂದು ವಿವರಿಸಿದರು.

> **'ಫಲಪುಷ್ಪ ಪ್ರದರ್ಶನದಲ್ಲಿ ಕಿತ್ತೂರು ಕೋಟೆಯನ್ನು ಹೇಗೆ ಪ್ರಸ್ತುತ ಪಡಿಸಬೇಕು ಎಂಬುದರ ಕುರಿತು ಪುರಾತತ್ವ ಇಲಾಖೆ ಹಾಗೂ ಸಂಗೊಳ್ಳಿ ರಾಯಣ್ಣನ ಸಮಾಧಿ ಸ್ಥಳ ನಂದಗಡವನ್ನು ಹೇಗೆ ಪ್ರದರ್ಶಿಸಬೇಕು ಎಂಬ ಬಗ್ಗೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುತ್ತಿದ್ದೇವೆ. ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಕಿತ್ತೂರು ಹಾಗೂ ನಂದಗಡಕ್ಕೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ್ದಾರೆ. ಈ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳಲು ಜುಲೈ 10ರಂದು ಸಭೆ ಕರೆಯಲಾಗಿದೆ' ಎಂದು ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಎಂ. ಜಗದೀಶ್ ತಿಳಿಸಿದರು.**

## ಸಿಎಟಿ ಆದೇಶ ವಿರುದ್ಧ ಆರ್‌ಸಿಬಿ ಅರ್ಜಿ, ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನೋಟಿಸ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಆಡಳಿತ ನ್ಯಾಯಮಂಡಳಿ ಆದೇಶದ ವಿರುದ್ಧ ಆರ್‌ಸಿಬಿ ತಂಡದ ಮಾಲೀಕತ್ವ ಹೊಂದಿರುವ ರಾಯಲ್ ಚಾಲೆಂಜರ್ಸ್ ಸ್ಪೋರ್ಟ್ಸ್ ಪ್ರೈವೇಟ್ ಲಿಮಿಟೆಡ್ (ಆರ್‌ಸಿಎಸ್‌ಪಿಎಲ್) ಅರ್ಜಿ ಸಲ್ಲಿಸಿದ್ದು, ಈ ಅರ್ಜಿ ಕುರಿತು ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿದೆ. ಪ್ರಕರಣ ಸಂಬಂಧ ವಿಕಾಸ್ ಕುಮಾರ್ ಅಮಾನತು ಆದೇಶ ವಜಾಗೊಳಿಸಿದ್ದ ಸಿಎಟಿ, ಚಿನ್ನಸ್ವಾಮಿ ಕ್ರೀಡಾಂಗಣಕ್ಕೆ ಅತಿ ಹೆಚ್ಚು ಜನ ಆಗಮಿಸುವುದಕ್ಕೂ, ಚಿನ್ನಸ್ವಾಮಿ ಕ್ರೀಡಾಂಗಣದ ಮುಂದೆ ಕಾಲ್ತುಳಿತ ನಡೆದಿರುವುದಕ್ಕೆ ಮೇಲ್ನೋಟಕ್ಕೆ ಆರ್‌ಸಿಬಿಯೇ ಕಾರಣ ಎಂಬುದಾಗಿ ಅಭಿಪ್ರಾಯಪಟ್ಟಿತ್ತು. ಸರಕಾರದಿಂದ ಸೂಕ್ತ ರೀತಿಯ ಅನುಮತಿ ಪಡೆಯದೆ ಅತಿ ಹೆಚ್ಚು ಜನ ಆಗಮಿಸುವುದಕ್ಕೆ ಕಾರಣವಾಗಿತ್ತು.

ಇದೇ ಕಾರಣದಿಂದ ಪೊಲೀಸರು ಸೂಕ್ತ ಭದ್ರತೆ ಒದಗಿಸಿ



ಜನ ದಟ್ಟಣೆಯನ್ನು ನಿಯಂತ್ರಣ ಮಾಡುವುದಕ್ಕೆ ಕಷ್ಟ ಸಾಧ್ಯವಾಗಿತ್ತು. ಇದೇ ಕಾರಣದಿಂದ ಕಾಲ್ತುಳಿತ ನಡೆದಿದೆ. ಪೊಲೀಸರ ಅನುಮತಿಯಿಲ್ಲದೆ ಆರ್‌ಸಿಬಿ ವಿಜಯೋತ್ಸವ ಮೆರವಣಿಗೆಗೆ ಆಹ್ವಾನಿಸಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿತ್ತು. ಇದರಿಂದ ಭಾರಿ ಜನ ಸಮೂಹ ಸೇರಲು ಕಾರಣವಾಯಿತು ಮತ್ತು ಪೊಲೀಸರಿಗೆ ಎಲ್ಲಾ ತಯಾರಿ ಮಾಡಿಕೊಳ್ಳಲು ಸಾಕಷ್ಟು ಸಮಯವಿರಲಿಲ್ಲ. ಕೇವಲ 12 ಗಂಟೆಗಳಲ್ಲಿ ಪೊಲೀಸರು ಸಂಪೂರ್ಣ ವ್ಯವಸ್ಥೆ ಮಾಡುತ್ತಾರೆಂದು ನಿರೀಕ್ಷಿಸಲಾಗುವುದಿಲ್ಲ.

> **ಇದನ್ನು ಪ್ರಶ್ನಿಸಿ ಆರ್‌ಸಿಬಿ ಹೈಕೋರ್ಟ್ ಮೆಟ್ಟಿಲೇರಿತ್ತು. ಸಿಎಟಿ ತನ್ನ ವಾದ ಆಲಿಸದೆ ಏಕಪಕ್ಷೀಯವಾಗಿ ಈ ಆದೇಶ ಮಾಡಿದೆ. ಸಿಎಟಿ ನಡೆ ಸಹಜ ನ್ಯಾಯದ ತತ್ವಕ್ಕೆ ವಿರುದ್ಧವಾಗಿದೆ. ಆದ್ದರಿಂದ ಐಪಿಎಸ್ ಅಧಿಕಾರಿ ಅಮಾನತು ಆದೇಶ ವಜಾಗೊಳಿಸಿ ಜುಲೈ 1ರಂದು ಹೊರಡಿಸಿದ ಆದೇಶದಲ್ಲಿ ಆರ್‌ಸಿಬಿ ಕುರಿತು ವ್ಯಕ್ತಪಡಿಸಲಾಗಿರುವ ಅಭಿಪ್ರಾಯ, ಆರೋಪಗಳನ್ನು ಆದೇಶದಿಂದ ತೆಗೆದು ಹಾಕುವಂತೆ ನಿರ್ದೇಶನ ನೀಡಬೇಕು ಎಂದು ಮನವಿ ಮಾಡಿತ್ತು.**

ಇದರ ಪರಿಣಾಮವಾಗಿ 11 ಜನರು ಸಾವನ್ನಪ್ಪಿದರು ಎಂದು ತಿಳಿಸಿದ್ದರು.

## ಹೊಸ ಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲು ಸೇವೆ ಪ್ರಾರಂಭ

• ಉದಯವಾಹಿನಿ, ಬೆಂಗಳೂರು

ಆಂಧ್ರಪ್ರದೇಶ ಮತ್ತು ಕರ್ನಾಟಕದ ಮಲೆನಾಡು ಪ್ರದೇಶದ ನಡುವೆ ರೈಲು ಸಂಪರ್ಕವನ್ನು ವಿಸ್ತರಿಸುವ ಉದ್ದೇಶದಿಂದ, ರೈಲ್ವೆ ಮಂಡಳಿ ತಿರುಪತಿ ಮತ್ತು ಚಿಕ್ಕಮಗಳೂರು ನಡುವಿನ ಹೊಸ ಸಾಪ್ತಾಹಿಕ ಎಕ್ಸ್‌ಪ್ರೆಸ್ ರೈಲು ಸೇವೆ ಪ್ರಾರಂಭಕ್ಕೆ ಅನುಮೋದನೆ ನೀಡಿದೆ.

**ಉದ್ಘಾಟನಾ ವಿಶೇಷ ರೈಲು::**ಈ ಸೇವೆಯ ಪ್ರಾರಂಭವನ್ನು ಸೂಚಿಸುವಂತೆ, ದಕ್ಷಿಣ ಮಧ್ಯ ರೈಲ್ವೆ ಒಂದು ಬಾರಿ ನಡೆಯುವ ಉದ್ಘಾಟನಾ ವಿಶೇಷ ಎಕ್ಸ್‌ಪ್ರೆಸ್ ರೈಲನ್ನು ನಡೆಸಲಿದೆ. ರೈಲು ಸಂಖ್ಯೆ 07424 ಚಿಕ್ಕಮಗಳೂರು ತಿರುಪತಿ ಉದ್ಘಾಟನಾ ವಿಶೇಷ ಎಕ್ಸ್‌ಪ್ರೆಸ್ ಜುಲೈ 11 (ಶುಕ್ರವಾರ) ರಂದು ಚಲಿಸಲಿದ್ದು, ಮಧ್ಯಾಹ್ನ 12 ಕ್ಕೆ ಚಿಕ್ಕಮಗಳೂರಿನಿಂದ ಹೊರಟು, ಮರುದಿನ ಬೆಳಗ್ಗೆ 02:30 ಕ್ಕೆ ತಿರುಪತಿಗೆ ತಲುಪಲಿದೆ. ಈ ರೈಲಿಗೆ ಒಟ್ಟು 18 ಎಲ್‌ಹೆಚ್‌ಬಿ ಕೋಚ್‌ಗಳು ಇರುತ್ತವೆ. **ನಿಯಮಿತ ರೈಲು ಸೇವೆಗಳು:** 1. ರೈಲು ಸಂಖ್ಯೆ 17423 ತಿರುಪತಿ ಚಿಕ್ಕಮಗಳೂರು ಸಾಪ್ತಾಹಿಕ ಎಕ್ಸ್‌ಪ್ರೆಸ್ 2025 ಜುಲೈ 17 (ಗುರುವಾರ)ರಿಂದ ನಿಯಮಿತ ಸೇವೆ ಪ್ರಾರಂಭವಾಗಲಿದೆ. 2. ರೈಲು ಸಂಖ್ಯೆ 17424 ಚಿಕ್ಕಮಗಳೂರು ತಿರುಪತಿ ಸಾಪ್ತಾಹಿಕ ಎಕ್ಸ್‌ಪ್ರೆಸ್ 2025 ಜುಲೈ 18 (ಶುಕ್ರವಾರ)ರಿಂದ ನಿಯಮಿತ ಸೇವೆ ಆರಂಭವಾಗಲಿದೆ.



# ಮಹಾನಗರ ಪಾಲಿಕೆ ನೌಕರರ ಹೋರಾಟಕ್ಕೆ ಕೇಂದ್ರ ಸಚಿವ HD.ಕುಮಾರಸ್ವಾಮಿ, ವಿರೋಧಪಕ್ಷದ ನಾಯಕ R.ಅಶೋಕ್ ಮಾಜಿ ಸಚಿವ K.S.ಈಶ್ವರಪ್ಪ ಬೆಂಬಲ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿರವರು ಬೆಂಬಲ ಸೂಚಿಸಿ ಕೇವಲ ಶಾಸಕರ ದುಃಖ ದುಮ್ಮಾನ ಕೇಳಿದರೆ ಸಾಲದು. ಅನಿರ್ದಿಷ್ಟ ಮುಷ್ಕರ ನಡೆಸುತ್ತಿರುವ ಪಾಲಿಕೆಗಳ ನೌಕರರ ಕಷ್ಟಕಾರ್ಪಣ್ಯ ಆಲಿಸುವ ಹೃದಯವಂತಿಕೆ ತೋರಬೇಕು ರಾಜ್ಯ ಸರಕಾರ.

ನೌಕರರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ತುರ್ತು ಗಮನ ಹರಿಸಬೇಕು. ಆದರೆ, ಶಾಸಕರ ಬಂಡಾಯ ತಣಿಸುವುದಕ್ಕೆ, Indian National Congress - Karnataka ಮಾಡಲು ಸಿಎಂ, ಡಿಸಿಎಂ ಅವರಿಗೆ ಸಮಯವೇ ಸಾಲುತ್ತಿಲ್ಲ. ಇದನ್ನು ನಾನು ತಪ್ಪೆನ್ನಲಾರೆ. ಆದರೆ, ಪಾಲಿಕೆ ನೌಕರರು ಎಸಗಿದ ಪಾಪವೇನು ಅವರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ವಿಳಂಬ ಧೋರಣೆ ಯಾಕೆ? ಸ್ವತಃ ಮುಖ್ಯಮಂತ್ರಿ ಅವರೇ ಮಾನವೀಯ ನೆಲೆಗಟ್ಟಿನಲ್ಲಿ ತಕ್ಷಣವೇ ಕ್ರಮ ವಹಿಸುತ್ತಿಲ್ಲ, ಏಕೆ? ಹಗಲಿರುಳು ಜನರಿಗಾಗಿ ದುಡಿಯುವ ಅವರ ಬದುಕಿಗೂ ಗ್ಯಾರಂಟಿ ಕೊಡಬೇಕಲ್ಲವೇ?

ಪಾಲಿಕೆಗಳ ನಿತ್ಯದ ಯಾವ ಕೆಲಸ ಕಾರ್ಯಗಳು ನಿಲ್ಲಬಾರದು.

**ಕಳೆದ ಮೂರು ದಿನಗಳಿಂದ ಮುಷ್ಕರ**



ಉದಯವಾಹಿನಿ ಚಿತ್ರ

ಸ್ವಚ್ಛತೆ, ನೈರ್ಮಲ್ಯ ಹಾಗೂ ಸ್ಥಳೀಯ ಆಡಳಿತದ ದೃಷ್ಟಿಯಿಂದ ಪಾಲಿಕೆಗಳು ಮಹತ್ವ ಹೊಂದಿವೆ ಎಂಬುದನ್ನು ಆಡಳಿತಗಾರರು ಮರೆಯಬಾರದು. ರಾಜ್ಯ ಮಹಾನಗರ ಪಾಲಿಕೆ ವೃಂದ ನೇಮಕಾತಿ ನಿಯಮಾವಳಿಗಳ ತಿದ್ದುಪಡಿ ಮಾಡಿ ಕರಡು ಅಧಿಸೂಚನೆಯನ್ನು ಪ್ರಕಟಿಸಬೇಕು. ಸರ್ಕಾರಿ ನೌಕರರಿಗೆ ಜಾರಿ ಮಾಡಿರುವ ಕೆಜಿಐಡಿ ಜಿಪಿಎಫ್ ಸೌಲಭ್ಯವನ್ನು ಮಹಾನಗರ ಪಾಲಿಕೆ ಅಧಿಕಾರಿ/ನೌಕರರಿಗೆ ಜಾರಿಗೊಳಿಸಬೇಕು. ಆರೋಗ್ಯ ಸೌಲಭ್ಯದ ಜ್ಯೋತಿ/ಆರೋಗ್ಯ ಸಂಜೀವಿನಿ ಯೋಜನೆಯನ್ನು ಪಾಲಿಕೆ ಸಿಬ್ಬಂದಿಗೆ ನೀಡಬೇಕು.ಪ್ರತಿ ವರ್ಷ ಕ್ರೀಡಾ ಕಾರ್ಯಕ್ರಮ ಆಯೋಜಿಸಬೇಕು. ವಿವಿಧ ವೃಂದದ ಹುದ್ದೆಗಳಿಗೆ ವೃಂದವಾರು ಮುಂಬಡ್ತಿ ನೀಡಬೇಕು.

> **ವಿರೋಧ ಪಕ್ಷದ ನಾಯಕ ಆರ್.ಅಶೋಕ್ ರವರು ಮಾತನಾಡಿ ಪಾಲಿಕೆ ನೌಕರರ ನ್ಯಾಯಯುತ ಬೇಡಿಕೆಗಳ ಸ್ಪಂದಿಸದ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ. ವಿವಿಧ ಬೇಡಿಕೆಗಳ ಈಡೇರಿಕೆಗೆ ಅಗ್ರಹಿಸಿ ರಾಜ್ಯದ 10ಮಹಾನಗರ ಪಾಲಿಕೆಗಳ ಸುಮಾರು 25000ಕ್ಕೂ ಹೆಚ್ಚು ನೌಕರರು ಕಳೆದ ಮೂರು ದಿನಗಳಿಂದ ಮುಷ್ಕರ ನಡೆಸುತ್ತಿದ್ದರೂ, ಅವರ ಸಮಸ್ಯೆಗಳಿಗೆ ಕಿವಿಗೊಡದೆ ಉದ್ಧಟತನ ಪ್ರದರ್ಶನ ಮಾಡುತ್ತಿರುವ ಸಿಎಂ @siddaramaiah ನೇತೃತ್ವದ @INCKarnataka ಸರ್ಕಾರ ಮತ್ತೊಮ್ಮೆ ತನ್ನ ಜನವಿರೋಧಿ ಧೋರಣೆ ಪ್ರದರ್ಶನ ಮಾಡುತ್ತಿದೆ. ಸರ್ಕಾರಿ ನೌಕರರಿಗೆ ನೀಡಲಾಗಿರುವ 7ನೇ ವೇತನ ಆಯೋಗದ ಸೌಲಭ್ಯ ನೀಡಲು ಪಾಲಿಕೆಗಳ ಸಿಬ್ಬಂದಿಗೂ ಆರ್ಥಿಕ ಇಲಾಖೆಯಿಂದಲೇ ಅನುದಾನ ಬಿಡುಗಡೆ ಮಾಡಬೇಕು.**

ಪಾಲಿಕೆ ನೌಕರರು ಮುಂದಿಟ್ಟಿರುವ ಈ ಎಲ್ಲಾ ಬೇಡಿಕೆಗಳು ಅತ್ಯಂತ ನ್ಯಾಯಯುತವಾಗಿದ್ದು, ನಮ್ಮ ರಾಜ್ಯದ ಆರ್ಥಿಕ ಇಂಜಿನ್ ಗಳಾಗಿರುವ ನಗರಗಳ ನಿರ್ವಹಣೆಯಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುವ ಪಾಲಿಕೆ ಸಿಬ್ಬಂದಿಗಳ ಸೇವೆ, ಪರಿಶ್ರಮ ರಾಜ್ಯ ಸರ್ಕಾರಿ ನೌಕರರಿಗಿಂತ ಯಾವುದೇ ರೀತಿಯಲ್ಲೂ ಕಡಿಮೆಯಲ್ಲ. ಶಿವಮೊಗ್ಗ ಪಾಲಿಕೆ ಪ್ರತಿಭಟನಾ ಸ್ಥಳಕ್ಕೆ ಕೆ.ಎಸ್.ಈಶ್ವರಪ್ಪರವರು ಭೇಟಿ ನೀಡಿ ಮಾತನಾಡಿ ಸರ್ಕಾರಿ ನೌಕರರಿಗೆ ಸಿಗುವ ಸೌಲಭ್ಯ, ಸೌವಲತ್ತುಗಳು ಪಾಲಿಕೆ ನೌಕರರಿಗೆ ಸಿಗಬೇಕು ಎಂದು ಕೇಳುತ್ತಿರುವುದು ನ್ಯಾಯಯುತ ಬೇಡಿಕೆಯಾಗಿದೆ. ಕಳೆದ ಮೂರು ದಿನಗಳಿಂದ ಹತ್ತು ಮಹಾನಗರ ಪಾಲಿಕೆ ನೌಕರರು ಪ್ರತಿಭಟನೆ ಮಾಡುತ್ತಿದ್ದಾರೆ, ಪಾಲಿಕೆ ಎಲ್ಲಾ ಕಾರ್ಯಗಳು ನಿಂತಿರುವುದರಿಂದ ನಾಗರಿಕರು ಸಮಸ್ಯೆ ಎದುರಿಸುತ್ತಿದ್ದಾರೆ. ಸಾಕಷ್ಟು ಬಾರಿ ಸಚಿವರು,ಕಾರ್ಯದರ್ಶಿ ಗಳ ಗಮನಕ್ಕೆ ತಂದರು ಯಾವುದೇ ಕ್ರಮವಹಿಸಿಲ್ಲ. 8ನೇ ತಾರೀಖಿನಿಂದ ಪ್ರತಿಭಟನೆ ಮಾಡುತ್ತೇವೆ ಎಂದು ಹೇಳಿದರು ಸಚಿವರು ಇದರ ಬಗ್ಗೆ ಗಮನಹಿಸಿಲ್ಲ, ಇಂತಹ ಸಚಿವರು ಕೊಡಲೆ ರಾಜೀನಾಮೆ ನೀಡಬೇಕು ಎಂದು ಹೇಳಿದರು. ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘಗಳ ಪರಿಷತ್ತು ರಾಜ್ಯಾಧ್ಯಕ್ಷರಾದ ಎ.ಅಮೃತ್ ರಾಜ್ ರವರು ಬೆಂಬಲ, ಸಹಕಾರ ನೀಡುತ್ತಿದ್ದಾರೆ. ಶಿವಮೊಗ್ಗ ಮಹಾನಗರ ಪಾಲಿಕೆ ಅಧ್ಯಕ್ಷರು, ಪದಾಧಿಕಾರಿಗಳು ಮತ್ತು ನೌಕರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಕಾರ್ಮಿಕರ ಕಾಯ್ದೆ ತಿದ್ದುಪಡಿಗೆ ವಿರೋಧ

## ಸರ್ಕಾರದ ವಿರುದ್ಧ ಪಟ್ಟಣದ ಡಾ.ಎಚ್.ಎನ್.ವೃತ್ತದಿಂದ ಬಸ್ ನಿಲ್ದಾಣದ ಡಿವಿಜಿ ಮುಖ್ಯರಸ್ತೆಯಲ್ಲಿ ಪ್ರತಿಭಟನೆ

• ಉದಯವಾಹಿನಿ, ಬಾಗೇಪಲ್ಲಿ

ಕೇಂದ್ರ, ಕಾರ್ಮಿಕ ಸಂಘಟನೆಗಳು ಮತ್ತು ರೈತ ಸಂಘಟನೆಗಳ ಸಂಯುಕ್ತ ಕಿಸಾನ್ ಮೋರ್ಚಾ ಕರೆ ನೀಡಿದ್ದ ಅಖಿಲ ಭಾರತ ಸಾರ್ವತ್ರಿಕ ಮುಷ್ಕರದ ಅಂಗವಾಗಿ ತಾಲ್ಲೂಕಿನ ಕೃಷಿ ಕೂಲಿ ಕಾರ್ಮಿಕರು, ವಿದ್ಯಾರ್ಥಿಗಳು, ಮಹಿಳೆಯರು ಅಕ್ಷರದಾಸೋಹ ಸಂಘಟನೆಯಿಂದ ಪಟ್ಟಣದ ಬಸ್ ನಿಲ್ದಾಣದಲ್ಲಿ ಕೆಲ ಕಾಲ ರಸ್ತೆ ತಡೆದು ಪ್ರತಿಭಟನೆ ನಡೆಸಲಾಯಿತು. ನಾಲ್ಕು ಕಾರ್ಮಿಕ ಕೋಡ್‌ಗಳ ಜಾರಿ ನಿಲ್ಲಿಸಬೇಕು. ದುಡಿಯುವ ಕಾರ್ಮಿಕರಿಗೆ ನ್ಯಾಯಬದ್ಧವಾದ ಹಕ್ಕು ಕಲ್ಪಿಸಬೇಕು. ರೈತರ ಭೂಮಿ ಸ್ವಾಧೀನಕ್ಕೆ ವಿರೋಧಿಸಿ. ಬೆಲೆ ಏರಿಕೆ ನಿಯಂತ್ರಿಸಬೇಕು. ಸಮಾನ ಕೆಲಸಕ್ಕೆ ಸಮಾನ ವೇತನ, ಗರಿಷ್ಠ ರೂ.35 ಸಾವಿರ ವೇತನ ನೀಡಬೇಕು. ವಿದ್ಯುತ್ ತಿದ್ದುಪಡಿ ಮಸೂದೆ 2022 ವಾಪಸ್ ಪಡೆಯಬೇಕು ಸೇರಿದಂತೆ ವಿವಿಧ ಬೇಡಿಕೆ ಈಡೇರಿಸಲು ಒತ್ತಾಯಿಸಲಾಯಿತು.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧ ಪಟ್ಟಣದ ಡಾ.ಎಚ್.ಎನ್.ವೃತ್ತದಿಂದ ಬಸ್ ನಿಲ್ದಾಣದ ಡಿವಿಜಿ ಮುಖ್ಯ ರಸ್ತೆಯಲ್ಲಿ ಪ್ರತಿಭಟನಾ ಮೆರವಣಿಗೆ ಮಾಡಿದರು. ಸಾರಿಗೆ ಬಸ್ ನಿಲ್ದಾಣದ ಮುಂದೆ ಎಲ್ಲಾ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಮಾನವ ಸರಪಳಿ ರಚಿಸಿದರು. ಪ್ರಾಂತ ಕೃಷಿ ಕೂಲಿಕಾರರ ಸಂಘದ ರಾಜ್ಯ ಉಪಾಧ್ಯಕ್ಷ ಎಂ.ಪಿ.ಮುನಿವೆಂಕಟಪ್ಪ ಮಾತನಾಡಿ, ಕಾರ್ಪೋರೇಟ್ ಹಾಗೂ ಶ್ರೀಮಂತರ ಕಂಪನಿಗಳಲ್ಲಿ ದಿನಗೂಲಿ, ಹೊರಗುತ್ತಿಗೆ, ಗುತ್ತಿಗೆ


ಉದಯವಾಹಿನಿ ಚಿತ್ರ

ಆಧಾರದಲ್ಲಿ 12 ಗಂಟೆ ಕಾರ್ಮಿಕರನ್ನು ದುಡಿಯಲು ಕಾನೂನು ಮಾಡಲು ಹೊರಟಿದ್ದಾರೆ. ದೇಶದಲ್ಲಿ ಅತಿಹೆಚ್ಚು ಅಸಂಘಟಿತ, ಅನೌಪಚಾರಿಕ ಕಾರ್ಮಿಕರನ್ನು ಕಾನೂನುಗಳ ಅಡಿಯಲ್ಲಿ ತರಬೇಕು. ರೂ.600 ದಿನ ವೇತನ ನಿಗದಿ ಮಾಡಬೇಕು ಎಂಬ ಕೇಂದ್ರ ಕಾರ್ಮಿಕರ ಸಂಘಟನೆಗಳ ಬೇಡಿಕೆಯನ್ನು ಕೇಂದ್ರ ಸರ್ಕಾರ ತಿರಸ್ಕಾರ ಮಾಡಿದೆ. ಕಾರ್ಮಿಕರು ತಮ್ಮ ಹಕ್ಕುಗಳನ್ನು ಪಡೆಯಲು ಬೇಡಿಕೆಗಳ ಪಟ್ಟಿ ಸಲ್ಲಿಸುವಂತಿಲ್ಲ. ಮುಷ್ಕರದ ನೋಟಿಸ್ ನೀಡುವಂತಿಲ್ಲ. ಮುಷ್ಕರ ಬೆಂಬಲಿಸಿದವರನ್ನು ಜೈಲಿಗೆ, ಜಾಮೀನುರಹಿತ ಪ್ರಕರಣ, ದಂಡ ಮಾಡುವ ಹಕ್ಕನ್ನು ಮತ್ತು ಕಾರ್ಮಿಕರ ಸಂಘದ ನೊಂದಾವಣಿ ರದ್ದುಗೊಳಿಸುವ ಅಂಶಗಳನ್ನು ಸಂಹಿತೆಯಲ್ಲಿ ತರಲಾಗಿದೆ ಎಂದು

**ರೈತ ಸಂಘ ಹಾಗೂ ಹಸಿರು ಸೇನೆ (ಪುಟ್ಟಣ್ಣಯ್ಯ ಬಣ)ದ ಜಿಲ್ಲಾ ಅಧ್ಯಕ್ಷ ಟಿ.ಕೃಷ್ಣನಾರಾಯಣರೆಡ್ಡಿ ಮಾತನಾಡಿ, ಕೃಷಿಕೂಲಿಕಾರ್ಮಿರ, ಮಹಿಳೆಯರ, ವಿದ್ಯಾರ್ಥಿಗಳ, ಯುವಜನರ ಸಮಸ್ಯೆಗಳ ವಿರುದ್ಧ ವಿಧಾನಸೌಧದಲ್ಲಿ, ಹೊರಗೆ ಧ್ವನಿಯಾಗಿ ನಿಂತಿದ್ದ ಮಾಜಿ ಶಾಸಕ ಜಿ.ವಿ.ಶ್ರೀರಾಮರೆಡ್ಡಿರವರಂತೆ ಹಸಿರು, ಕೆಂಪು, ನೀಲಿ ಬಣ್ಣಗಳ ಸಂಘಟನೆಗಳ ನಾಯಕತ್ವದಲ್ಲಿ ಬಲಿಷ್ಠ ಚಳವಳಿಗೆ ಎಲ್ಲಾ ಮುಖಂಡರು ಒಂದಾಗಬೇಕು ಎಂದರು.**

ಆರೋಪಿಸಲಾಗಿದೆ. ಸಂವಿಧಾನದಲ್ಲಿ ಕಾರ್ಮಿಕರು ತಮ್ಮ ಹಕ್ಕುಗಳು ನ್ಯಾಯಯುತವಾಗಿ ಪಡೆಯಬಹುದು ಎಂದು ಇದೆ. ಆದರೆ ಕೇಂದ್ರ ಬಿಜೆಪಿ ಸರ್ಕಾರ ಕಾರ್ಮಿಕ ಹಕ್ಕುಗಳಿಗೆ ತಿದ್ದುಪಡಿ, ಕಾರ್ಮಿಕರ ಹಕ್ಕುಗಳನ್ನು ಕಿತ್ತುಕೊಳ್ಳಲು ಪ್ರಯತ್ನ ಮಾಡುತ್ತಿದೆ. ದೇಶದ ಅಂಗನವಾಡಿ, ಆಶಾ. ಅಕ್ಷರದಾಸೋಹ ಸೇರಿದಂತೆ ಅಸಂಘಟಿತ ಕಾರ್ಮಿಕರಿಗೆ ಕನಿಷ್ಠ 35 ಸಾವಿರ ವೇತನ ನೀಡಬೇಕು ಎಂದು ಬೀದಿಗಿಳಿದು ಪ್ರತಿಭಟನೆ ಮಾಡಿದರೂ ಸರ್ಕಾರ ಜಾಣಕುರುಡತನ ಪ್ರದರ್ಶಿಸಿದೆ ಎಂದು ದೂರಿದರು. ಕೃಷಿಕೂಲಿಕಾರ್ಮಿಕರಿಗೆ ಬೆಂಬಲ ಬೆಲೆ, ಕನಿಷ್ಠ ವೇತನ ನೀಡಲು, ರೈತರ ಸಾಲ ಮನ್ನಾ ಮಾಡಲು

**ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕಾರ್ಮಿಕರ ವಿರೋಧಿ ನೀತಿಗಳನ್ನು ಅನುಸರಿಸಿದೆ. ದಿನದ ಕೆಲಸದ ಅವಧಿ 12 ಗಂಟೆಗೆ ವಿಸ್ತರಣೆ, ರಾತ್ರಿ ಪಾಳಿಯಲ್ಲಿ ಮಹಿಳಾ ಕಾರ್ಮಿಕರ ದುಡಿಮೆಗೆ ಅವಕಾಶ ನೀಡಿ ಕೈಗಾರಿಕಾ ಕಾಯ್ದೆಗೆ ಮಾಡಿರುವ ತಿದ್ದುಪಡಿ ನಿಶ್ಚಿತ ಕಾಲಾವಧಿ ಕಾರ್ಮಿಕರ ನೇಮಕಕ್ಕೆ ಅವಕಾಶ ನೀಡುವ ಆದೇಶಗಳ ತಿದ್ದುಪಡಿಗಳನ್ನು ರಾಜ್ಯ ಸರ್ಕಾರ ವಾಪಸ್ ಪಡೆಯಬೇಕು ಎಂದರು.**

**ಸಿಐಟಿಯು ತಾಲ್ಲೂಕು ಕಾರ್ಯದರ್ಶಿ ಜಿ.ಮುಸ್ತಾಫ**

ಕೇಂದ್ರ , ರಾಜ್ಯ ಸರ್ಕಾರದ ಬಳಿ ಹಣ ಇಲ್ಲ. ಆದರೆ ಶ್ರೀಮಂತರ, ಕಾರ್ಪೋರೇಟ್ ಕಂಪನಿಗಳ ಸಾಲ ಮನ್ನಾ ಮಾಡಲು ಹಣ ಇದೆ. ರಾಜ್ಯ ಸರ್ಕಾರದ ಶಾಸಕರ ಪ್ರತಿ ತಿಂಗಳ ವೇತನ ಹೆಚ್ಚಳ ಮಾಡಲು ಹಣ ಇದೆಯೇ ಎಂದು ಪ್ರಶ್ನಿಸಿದರು.

ಕಾರ್ಮಿಕರ ನಿವೃತ್ತಿ ವಯಸ್ಸು 60 ವರ್ಷವನ್ನು ಸಮರ್ಪಕವಾಗಿ ಜಾರಿ ಮಾಡಬೇಕು. ಎಲ್ಲಾ ವಿಭಾಗದ ದುಡಿಯುವ ಮಹಿಳೆಗೆ ವಾರ್ಷಿಕ 12 ದಿನ ವೇತನ ಸಹಿತ ಮುಟ್ಟಿನ ರಜೆ ನೀಡಬೇಕು. ಆಶಾ, ಅಂಗನವಾಡಿ, ಬಿಸಿಊಟ ಸೇರಿದಂತೆ ಎಲ್ಲಾ ವರ್ಗದ ಅಸಂಘಟಿತ ಕಾರ್ಮಿಕರು ತಮ್ಮ ಹಕ್ಕುಗಳನ್ನು ಪಡೆಯಲು ಬಲಿಷ್ಠ ಚಳವಳಿಗೆ ಮುಂದಾಗಬೇಕು ಎಂದು ಕರೆ ನೀಡಿದರು.

# ಪಹಣಿ, ಖಾತೆ ಸಮರ್ಪಕ ನಿರ್ವಹಣೆಗೆ ಸಲಹೆ

• ಉದಯವಾಹಿನಿ, ಮಧುಗಿರಿ

ರೈತರು ತಮ್ಮ ಜಮೀನಿನ ದಾಖಲೆಗಳನ್ನು ಸರಿಯಾಗಿ ಹೊಂದಿದ್ದರೆ ಮಾತ್ರ ಸರ್ಕಾರದ ಸೌಲಭ್ಯ ಪಡೆಯಲು ಸಾಧ್ಯ ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ತಿಳಿಸಿದರು. ಪಟ್ಟಣದ ತಾಲ್ಲೂಕು ಕಚೇರಿ ಆವರಣದಲ್ಲಿ ಬುಧವಾರ ನಡೆದ ಕಂದಾಯ ಅದಾಲತ್‌ನಲ್ಲಿ ಇ ಪೌತಿ ಖಾತೆ ಆಂದೋಲನ, ದರಖಾಸ್ತು ಪೋಡಿ, ಗ್ರಾಮ ಆಡಳಿತ ಅಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಿಸಿ ಮಾತನಾಡಿದರು. ಭೂಮಿಯ ಬೆಲೆ ಹೆಚ್ಚಾಗುತ್ತಿರುವುದರಿಂದ ರೈತರು ಸರಿಯಾದ ದಾಖಲೆಗಳನ್ನು ಹೊಂದಿರಬೇಕು.

ಈ ನಿಟ್ಟಿನಲ್ಲಿ ಅಧಿಕಾರಿಗಳು ರೈತರ ಮನೆ ಬಾಗಿಲಿಗೆ ತೆರಳಿ ಖಾತೆ. ಪಹಣಿ ಸೇರಿದಂತೆ ಇತರೆ ದಾಖಲೆಗಳನ್ನು ಮಾಡಿಕೊಡಬೇಕು. ತಾತ ಮತ್ತು ಮುತ್ತಾತನ ಹೆಸರಿನಲ್ಲಿಯೇ ಪಹಣಿ ಇದ್ದು, ಇದನ್ನು ಸರಿಪಡಿಸಿಕೊಂಡು ಆದಷ್ಟು ಬೇಗ ತಮ್ಮ ಹೆಸರಿಗೆ ಖಾತೆಗಳನ್ನು ಮಾಡಿಸಿ ಕೊಂಡು ಪಹಣಿ ಹೊಂದಬೇಕು ಎಂದರು. ತಾಲ್ಲೂಕಿನಲ್ಲಿ ಶೀಘ್ರ 122 ಮಂದಿಗೆ ಸಾಗುವಳಿ ಚೀಟಿ ನೀಡಲಾಗುವುದು. ಈಗಾಗಲೇ ಸಾಗುವಳಿ ಚೀಟಿ ನೀಡಿರುವ 100 ಮಂದಿಗೆ ಖಾತೆ ಮತ್ತು ಪಹಣಿ ಮಾಡಿಕೊಡಲಾಗುವುದು. ರೈತರು


ಉದಯವಾಹಿನಿ ಚಿತ್ರ

**ಹೆಚ್ಚುವರಿ ಜಿಲ್ಲಾಧಿಕಾರಿ ತಿಪ್ಪೇಸ್ವಾಮಿ ಮಾತನಾಡಿ, ಪೌತಿ ಖಾತೆ, ಖಾತೆ ಮತ್ತು ಪಹಣಿಗಳನ್ನು ರೈತರು ತಪ್ಪದೆ ಮಾಡಿಸಿಕೊಳ್ಳಬೇಕು. ಕಂದಾಯ ಇಲಾಖೆಯ ಪೋಡಿ, ಬಂಡಿ ಜಾಡು ಸೇರಿದಂತೆ ಹಲವು ಮಾಹಿತಿಗಳನ್ನು ರೈತರಿಗೆ ತಿಳಿಸಿದರು. ಕಂದಾಯ ಗ್ರಾಮದ ಹಕ್ಕುಪತ್ರ 30 ಮಂದಿಗೆ, 20 ಪೌತಿ ಖಾತೆ ಹಾಗೂ 30 ಗ್ರಾಮ ಆಡಳಿತ ಅಧಿಕಾರಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಯಿತು.**

ಬೆಳೆದ ಬೆಳೆಗಳಿಗೆ ಅವರೇ ದರವನ್ನು ನಿಗದಿ ಮಾಡಿದಾಗ ಮಾತ್ರ ರೈತರು ಆರ್ಥಿಕವಾಗಿ ಸದೃಢರಾಗಲು ಸಾಧ್ಯ ಎಂದು ತಿಳಿಸಿದರು.

# ಸಮಿತಿ ಕರೆಯ ಮೇರೆಗೆ ತಾಲ್ಲೂಕು ಅಂಗನವಾಡಿ ನೌಕರರ ಪ್ರತಿಭಟನೆ

• ಉದಯವಾಹಿನಿ, ಕುಣಿಗಲ್

ರಾಜ್ಯ ಸಮಿತಿ ಕರೆಯ ಮೇರೆಗೆ ತಾಲ್ಲೂಕು ಅಂಗನವಾಡಿ ನೌಕರರ ಸಂಘದ ಕಾರ್ಯಕರ್ತೆಯರು ಪಟ್ಟಣದ ಹುಚ್ಚಮಾಸ್ತಿ ಗೌಡ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯ ನೇತೃತ್ವ ವಹಿಸಿ ಮಾತನಾಡಿದ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುಲ್ಜಾರ್, ಕೇಂದ್ರ ಸರ್ಕಾರ ರೈತ ವಿರೋಧಿ ಕಾರ್ಮಿಕ ವಿರೋಧಿ ನೀತಿ ಅನುಸರಿಸುತ್ತಿದ್ದು, ಕಾರ್ಪೋರೇಟ್ ಕಂಪನಿಗಳ ಕಾರ್ಯನಿರ್ವಹಿಸುತ್ತಿದೆ. ಆರೋಗ್ಯ, ಆಹಾರ ಮತ್ತು ಶಿಕ್ಷಣ ನೀಡುವ ಕಾಯಕದಲ್ಲಿ ತೊಡಗಿರುವ ಅಂಗನವಾಡಿ ಕಾರ್ಯಕರ್ತರಿಗೆ ನೀಡಬೇಕಾದ ಸೌಲಭ್ಯಗಳನ್ನು ನೀಡದೆ ಅನ್ಯಾಯ ಮಾಡುತ್ತಿದೆ ಎಂದು ದೂರಿದರು. ಪೋಷಣೆ ಅಭಿಯಾನದಲ್ಲಿ ಕಾರ್ಯನಿರ್ವಹಿಸುವಲ್ಲಿ ತಂದಿರುವ ನಿಯಮಗಳ ಪಾಲನೆ ಮಾಡಲಾಗದ ಸ್ಥಿತಿಯಲ್ಲಿ ಕಾರ್ಯಕರ್ತೆಯರು ಇದ್ದಾರೆ. ಹೆಚ್ಚಿನ ಕಾರ್ಯ ಒತ್ತಡದಲ್ಲಿ ಸಿಲುಕಿ ಅನೇಕ ಕಾರ್ಯಕರ್ತೆಯರು ಪ್ರಾಣ ಕಳೆದುಕೊಂಡಿದ್ದಾರೆ. ಹೊಸದಾಗಿ ತಂದಿರುವ ನಾಲ್ಕು ಸಂಹಿತೆಗಳನ್ನು ರದ್ದುಗೊಳಿಸಲು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಅಬ್ದುಲ್ ಮುನಾಫ್, ಶಾಂತಕುಮಾರಿ, ರಾಜು ವೆಂಕಟಪ್ಪ ಮಾತನಾಡಿದರು.


ಉದಯವಾಹಿನಿ ಚಿತ್ರ

ಪದಾಧಿಕಾರಿಗಳಾದ ಸೌಭಾಗ್ಯಮ್ಮ, ಇಂದಿರಾ, ಕುಣಿಗಲ್ ಕುದುರೆ ಫಾರಂ, ಬೀಡಿ ಕಾರ್ಮಿಕರ ಸಂಘ, ಬಿಸಿಯೂಟ ನೌಕರರ ಸಂಘ, ಗ್ರಾಮ ಪಂಚಾಯಿತಿ ನೌಕರರ ಸಂಘ, ದಲಿತ ಹಕ್ಕುಗಳ ಸಮಿತಿ ಪದಾಧಿಕಾರಿಗಳು ಭಾಗವಹಿಸಿದ್ದರು. ಅದು ಪ್ರಯೋಜನವಾಗದ ಕಾರಣ ವೃತ್ತದ ಮಧ್ಯದಲ್ಲಿ ಪ್ರಚಾರಕ್ಕೆಂದು ಧ್ವನಿವರ್ಧಕ ಅಳವಡಿಸಿ ತಂದಿದ್ದ ಆಟೊ ಚಾಲಕನಿಗೆ ತೆರವು ಮಾಡಲು ಸೂಚಿಸಿದರು. ತಡಮಾಡಿದ ಆಟೊ ಚಾಲಕನಿಗೆ ಪೊಲೀಸರು ಹೊಡೆದ ಪರಿಣಾಮ ಅಂಗನವಾಡಿ ಕಾರ್ಯಕರ್ತೆಯರು ಪೊಲೀಸರ ವಿರುದ್ಧ ತಿರುಗಿ ಬಿದ್ದರು. ಪ್ರತಿಭಟನೆ ಹತ್ತಿಕ್ಕುವ ಕಾರ್ಯ ಮಾಡಬೇಡಿ ಆಟೊ ಚಾಲಕನ ಮೇಲೆ ಹಲ್ಲೆ ಮಾಡುವ ಬದಲು ಸಂಘಟನೆ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಿ ಎಂದು ಆಗ್ರಹಿಸಿ ಪೊಲೀಸರೊಂದಿಗೆ ವಾಗ್ವಾದ ನಡೆಸಿದರು.

**ಪೊಲೀಸರೊಂದಿಗೆ ಜಟಾಪಟಿ**

**ನೂರಾರು ಅಂಗನವಾಡಿ ಕಾರ್ಯಕರ್ತೆಯರು ಪ್ರವಾಸಿ ಮಂದಿರದಿಂದ ಹುಚ್ಚಮಾಸ್ತಿಗೌಡ ವೃತ್ತದವರೆಗೆ ಮೆರವಣಿಗೆಯಲ್ಲಿ ಬಂದು ಮಾನವ ಸರಪಣಿ ನಿರ್ಮಿಸಿ ಪ್ರತಿಭಟಿಸುವಾಗ ನಾಲ್ಕು ಕಡೆಗಳಿಂದ ಬಂದ ವಾಹನಗಳ ಸಂಚಾರಕ್ಕೆ ಅಡ್ಡಿಯಾಗಿತ್ತು. ಆಗ ಪೊಲೀಸರು ಪ್ರತಿಭಟನೆಗೆ ನೀಡಿದ ಸಮಯ ಮುಗಿದಿದೆ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಮನವಿ ಮಾಡಿದರು.**

# ನೀರಿಲ್ಲದೆ ಬಣಗುಡುತ್ತಿವೆ ತಾಲ್ಲೂಕಿನ ಕೆರೆಗಳು

• ಉದಯವಾಹಿನಿ, ಚನ್ನಪಟ್ಟಣ

ಈ ವರ್ಷ ಮುಂಗಾರಿನ ಆರಂಭದಲ್ಲೇ ಕಾವೇರಿ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗಿ ತಾಲ್ಲೂಕಿನ ಜೀವನಾಡಿ ಇಗ್ಗಲೂರು ಬಳಿಯ ಎಚ್.ಡಿ.ದೇವೇಗೌಡ ಬ್ಯಾರೇಜ್ ಸಂಪೂರ್ಣ ತುಂಬಿದ್ದರೂ ತಾಲ್ಲೂಕಿನ ಕೆರೆಗಳು ಮಾತ್ರ ನೀರಿಲ್ಲದೆ ಬಣಗುಡುತ್ತಿವೆ. ತಾಲ್ಲೂಕಿನಲ್ಲಿ ಈ ವರ್ಷದ ಆರಂಭದಲ್ಲಿ ಉತ್ತಮ ಮಳೆ ಬಾರದಿದ್ದರೂ, ಅಕ್ಕಪಕ್ಕದ ಜಿಲ್ಲೆಗಳಲ್ಲಿ ಬಿದ್ದ ಮಳೆಗೆ ಶಿಂಷಾ ನದಿಯಲ್ಲಿ ಹರಿದ ಹೆಚ್ಚುವರಿ ನೀರಿನಿಂದ ಎಚ್.ಡಿ.ದೇವೇಗೌಡ ಬ್ಯಾರೇಜ್ ಸಂಪೂರ್ಣ ತುಂಬಿ ತುಳುಕುತ್ತಿದೆ. ಆದರೆ, ನೀರನ್ನು ತಾಲ್ಲೂಕಿನ ಕೆರೆಗಳಿಗೆ ಹರಿಸದ ಕಾರಣ ಈ ಭಾಗದ ರೈತರು ಮಾತ್ರ ಬ್ಯಾರೇಜ್ ತುಂಬಿರುವುದಕ್ಕೆ ಸಂತಸಪಡುವ ಬದಲಾಗಿ ಬೇಸರ ವ್ಯಕ್ತಪಡಿಸುವಂತಾಗಿದೆ.

ದೇವೇಗೌಡ ಬ್ಯಾರೇಜ್‌ನಿಂದ ತಾಲ್ಲೂಕಿನ ಕೆರೆಗಳಿಗೆ ನೀರು ಹರಿಸಲು ಗರಕಹಳ್ಳಿ ಏತ ನೀರಾವರಿ ಹಾಗೂ ಕಣ್ವ ಏತ ನೀರಾವರಿ ಯೋಜನೆ ಕಾರ್ಯನಿರ್ವಹಿಸುತ್ತಿವೆ. ತಾಲ್ಲೂಕಿನ ಕೆರೆಗಳಿಗೆ ನೀರು ಹರಿಸಲು ಪೈಪ್‌ಲೈನ್ ಅಳವಡಿಸಲಾಗಿದೆ. ಈ ಯೋಜನೆಗಳ ಮೂಲಕ ಸುಮಾರು ಹತ್ತು ವರ್ಷಗಳಿಂದ ತಾಲ್ಲೂಕಿನ ಕೆರೆಗಳಿಗೆ ನೀರು ಹರಿಸಲಾಗುತ್ತಿದೆ. ಆದರೆ, ಈ ವರ್ಷ ತಾಲ್ಲೂಕಿನ ಕೆರೆಗಳಿಗೆ ಮಾತ್ರ ಅಧಿಕಾರಿಗಳು ನೀರು ಹರಿಸುವ ಕೆಲಸ ಮಾಡುತ್ತಿಲ್ಲ ಎನ್ನುವುದು ಸಾರ್ವಜನಿಕರ ಆರೋಪವಾಗಿದೆ.

0.18 ಟಿಎಂಸಿ ಅಡಿ ನೀರು ಸಾಮರ್ಥ್ಯದ ಬ್ಯಾರೇಜ್ 18 ಅಡಿ ಎತ್ತರ ಇದೆ. ಸದ್ಯ ಬ್ಯಾರೇಜ್‌ನಲ್ಲಿ ಸಂಪೂರ್ಣ 0.18 ಟಿಎಂಸಿ ಅಡಿ ನೀರು ಸಂಗ್ರಹವಾಗಿದೆ. ಎರಡು ಏತ ನೀರಾವರಿ ಯೋಜನೆ ವತಿಯಿಂದ ತಾಲ್ಲೂಕಿನ 123 ಕೆರೆಗಳಿಗೆ ನೀರು ಹರಿಸುವ ಪೈಪ್‌ಲೈನ್ ವ್ಯವಸ್ಥೆ ಇದೆ. ಆದರೆ, ಈ ವರ್ಷ ತಾಲ್ಲೂಕಿನ ಕೆಲವು ಕೆರೆಗಳಿಗೆ ಮಾತ್ರ ನೀರು ಹರಿಸಲಾಗಿದೆ. ಬಹುತೇಕ ಕೆರೆಗಳು ಇನ್ನು ಖಾಲಿಯಾಗಿಯೇ ಇವೆ ಎಂಬುದು ರೈತ ಮುಖಂಡರಾದ ತಿಮ್ಮಯ್ಯ, ಕೃಷ್ಣಗೌಡ, ರಾಜಣ್ಣ ಅವರ ಆರೋಪವಾಗಿದೆ.ಕಳೆದ ಮೂರು ವರ್ಷಗಳ ಹಿಂದೆ ತಾಲ್ಲೂಕಿನ ಎಲ್ಲಾ ಕೆರೆಗಳು ತುಂಬಿ ಕೋಡಿ ಹರಿದಿದ್ದವು. ಮಳೆಯ ತೀವ್ರತೆಯಿಂದಾಗಿ ಕೆಲವು ಕೆರೆಗಳ ಅಚ್ಚುಕಟ್ಟು ಪ್ರದೇಶ ನೀರಿನಲ್ಲಿ ಮುಳುಗಿ ಹೋಗಿತ್ತು. ರೈತರು ಬೆಳೆದ ಬೆಳೆಗಳು ನೀರು ಪಾಲಾಗಿದ್ದವು. ಆದರೆ, ಕಳೆದ ಎರಡು


ಉದಯವಾಹಿನಿ ಚಿತ್ರ

**ತಾಲ್ಲೂಕಿನ ಕೆರೆಗಳಿಗೆ ನೀರು ಹರಿಸುವ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. ಈಗಾಗಲೇ 30 ಕೆರೆಗಳಿಗೆ ನೀರು ಹರಿಸಲಾಗುತ್ತಿದೆ. ಮೋಟಾರ್‌ಗಳನ್ನು ಸರ್ವಿಸ್ ಮಾಡುತ್ತಿದ್ದು ಹಂತಹಂತವಾಗಿ ತಾಲ್ಲೂಕಿನ ಕೆರೆಗಳಿಗೆ ನೀರು ಹರಿಯಲಿದೆ.**

**ಸುರೇಶ್ ಎಇಇ ದೇವೇಗೌಡ ಬ್ಯಾರೇಜ್ ಇಗ್ಗಲೂರು**

ವರ್ಷದಿಂದ ಸೂಕ್ತ ಪ್ರಮಾಣದ ಮಳೆ ಇಲ್ಲದೆ ಕೆರೆಯಂಗಳ ಜಾನುವಾರುಗಳ ಮೇವಿನ ತಾಣಗಳಾಗಿವೆ. ಜೊತೆಗೆ ಕ್ರಿಕೆಟ್ ಪ್ರಿಯರ ಆಟದ ಅಂಗಳಗಳಾಗಿ ಮಾರ್ಪಾಡಾಗಿವೆ. ಅಧಿಕಾರಿಗಳು ಕೆರೆಗಳಿಗೆ ನೀರು ಹರಿಸುವ ಮನಸ್ಸು ಮಾಡುತ್ತಿಲ್ಲ ಎಂಬುದು ರೈತರ ಆರೋಪವಾಗಿದೆ.

ಆದರೆ, ಇದಕ್ಕೆ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ನೀಡುವ ಉತ್ತರವೇ ಬೇರೆ. ಕಳೆದ ಕೆಲವು ದಿನಗಳಿಂದ ತಾಲ್ಲೂಕಿನ ಕೆರೆಗಳಿಗೆ ಪೈಪ್‌ಲೈನ್ ಮೂಲಕ ನೀರು ಹರಿಸಲಾಗುತ್ತಿದೆ. ಗರಕಹಳ್ಳಿ ಏತ ನೀರಾವರಿ ಯೋಜನೆಯ ಆರು ಮೋಟಾರ್‌ಗಳಲ್ಲಿ ಕೆಲವು ರಿಪೇರಿಗೆ ಬಂದಿವೆ. ಸುಸ್ಥಿತಿಯಲ್ಲಿರುವ ಮೋಟಾರ್‌ಗಳನ್ನು ಚಾಲನೆ ಮಾಡಲಾಗಿದೆ. ಈಗಾಗಲೇ ತಾಲ್ಲೂಕಿನ ಸುಮಾರು 30ಕ್ಕೂ ಹೆಚ್ಚು ಕೆರೆಗಳಿಗೆ ನೀರು ಹರಿಸಲಾಗುತ್ತಿದೆ ಎನ್ನುತ್ತಾರೆ. ಬ್ಯಾರೇಜ್ ತುಂಬಿರುವುದರಿಂದ ಆ ನೀರನ್ನು ವ್ಯರ್ಥವಾಗಿ ನದಿಗೆ ಹರಿಸುವ ಬದಲು ತಾಲ್ಲೂಕಿನ ಎಲ್ಲಾ ಕೆರೆಗಳಿಗೂ ಹರಿಸಿ ತುಂಬಿಸಿದರೆ ತಾಲ್ಲೂಕಿನಲ್ಲಿ ಅಂತರ್ಜಲ ಹೆಚ್ಚುವ ಜೊತೆಗೆ ತಾಲ್ಲೂಕಿನ ಕೃಷಿ ಚಟುವಟಿಕೆಗಳಿಗೂ ಅನುಕೂಲವಾಗುತ್ತದೆ ಎನ್ನುವುದು ಸಾರ್ವಜನಿಕರ ಅಭಿಪ್ರಾಯವಾಗಿದೆ.

# ಮಹಾನಗರ ಪಾಲಿಕೆ ನೌಕರರ ಮುಷ್ಕರ

• ಉದಯವಾಹಿನಿ, ತುಮಕೂರು

ಮಹಾನಗರ ಪಾಲಿಕೆ ನೌಕರರಿಗೂ ಏಳನೇ ವೇತನ ಆಯೋಗದ ಸೌಲಭ್ಯಗಳನ್ನು ನೀಡಬೇಕು ಎಂಬುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಪಾಲಿಕೆ ಕಚೇರಿ ಆವರಣದಲ್ಲಿ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಇಳಿದಿದ್ದಾರೆ. ಪಾಲಿಕೆ ನೌಕರರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಮುಷ್ಕರ ನಡೆಸಿದ್ದರು. ಅದರ ಮುಂದುವರಿದ ಭಾಗವಾಗಿ ನಗರದಲ್ಲೂ ಬುಧವಾರ ಮುಷ್ಕರ ಆರಂಭಿಸಲಿದ್ದಾರೆ.

ನೌಕರರ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸರ್ಕಾರಕ್ಕೆ ಹಲವಾರು ಬಾರಿ ಮನವಿ ಸಲ್ಲಿಸಿದ್ದರೂ ಸ್ಪಂದಿಸಿಲ್ಲ. ಈಗ ಅನಿವಾರ್ಯವಾಗಿ ಮುಷ್ಕರಕ್ಕೆ ಇಳಿದಿದ್ದೇವೆ ಎಂದು ಪ್ರತಿಭಟನಕಾರರು ತಿಳಿಸಿದರು. ಮುಷ್ಕರದ ಸ್ಥಳಕ್ಕೆ ಶಾಸಕ ಜಿ.ಬಿ.ಜ್ಯೋತಿಗಣೇಶ್


ಉದಯವಾಹಿನಿ ಚಿತ್ರ

ಭೇಟಿ ನೀಡಿ ಅಹವಾಲು ಆಲಿಸಿದರು.

ಸರ್ಕಾರ ಈಗಲಾದರೂ ಎಚ್ಚೆತ್ತುಕೊಂಡು ನೌಕರರ ಸಮಸ್ಯೆಗಳನ್ನು ಪರಿಹರಿಸಬೇಕು ಎಂದು ಒತ್ತಾಯಿಸಿದರು. ಮಹಾನಗರ ಪಾಲಿಕೆ ನೌಕರರ ಸಂಘದ ಅಧ್ಯಕ್ಷ ಪ್ರಸನ್ನಕುಮಾರ್, ಸಂಘದ ಪ್ರಮುಖರಾದ ಶಬ್ಬಿರ್ ಅಹಮದ್, ಪುಷ್ಪಲತಾ ಸಿದ್ದಲಿಂಗಪ್ಪ, ಮಧು, ವಿಶ್ವನಾಥ್, ಶೇಖರಬಾಬು, ಮಹೇಶ್ ಪಾಲ್ಗೊಂಡಿದ್ದರು.

**ಪಾಲಿಕೆ ನೌಕರರಿಗೆ ಆರ್ಥಿಕ ಇಲಾಖೆಯಿಂದಲೇ ವೇತನ ಅನುದಾನ ಬಿಡುಗಡೆ ಮಾಡಬೇಕು, ವೃಂದ, ನೇಮಕಾತಿ ನಿಯಮಗಳಿಗೆ ಸೂಕ್ತ ತಿದ್ದುಪಡಿ ತರಬೇಕು. ರಾಜ್ಯ ಸರ್ಕಾರಿ ನೌಕರರಿಗೆ ಜಾರಿ ಮಾಡಿರುವ ಆರೋಗ್ಯ ಸಂಜೀವಿನಿ ಯೋಜನೆಯನ್ನು ಪಾಲಿಕೆ ನೌಕರರಿಗೂ ವಿಸ್ತರಿಸಬೇಕು. ಮರುಪಾವತಿ ಯೋಜನೆಯಲ್ಲಿ ಆರೋಗ್ಯದ ಸಲುವಾಗಿ ಖರ್ಚು ಮಾಡಿದ ಹಣದಲ್ಲಿ ಶೇ 35ರಷ್ಟು ಮರುಪಾವತಿ ಮಾಡಲಾಗುತ್ತಿದೆ. ಇದರಿಂದ ನೆರವಾಗುತ್ತಿಲ್ಲ. ಅದೇ ರೀತಿ ಕೆಜಿಐಡಿ, ಜಿಪಿಎಫ್ ಸೌಲಭ್ಯ ವಿಸ್ತರಿಸಬೇಕು ಎಂದು ಆಗ್ರಹಿಸಿದರು.**

# ಸಿಸಿಟಿವಿ ಕ್ಯಾಮೆರಾ ಕೊಟ್ಟ ಸುಳಿವು; ಕಟ್ಟಡ ಕಾರ್ಮಿಕ ವಶಕ್ಕೆ

• ಉದಯವಾಹಿನಿ, ರಾಮನಗರ

ಬೆಂಗಳೂರು ದಕ್ಷಿಣ ತಾಲ್ಲೂಕಿನ ತಾವರೆಕೆರೆಯಲ್ಲಿ ನಡೆದಿದ್ದ 13 ವರ್ಷದ ಬಾಲಕಿಯ ಅತ್ಯಾಚಾರ ಮತ್ತು ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ತಾವರೆಕೆರೆ ಠಾಣೆ ಪೊಲೀಸರು, ಘಟನೆ ನಡೆದ ಕೆಲವೇ ತಾಸುಗಳಲ್ಲಿ ಆರೋಪಿ ಯಲ್ಲಪ್ಪ ಎಂಬಾತನನ್ನು ವಶಕ್ಕೆ ಪಡೆದಿದ್ದಾರೆ. ರಾಯಚೂರು ಜಿಲ್ಲೆಯ 25 ವರ್ಷದ ಯಲ್ಲಪ್ಪ ಕಟ್ಟಡ ಕಾರ್ಮಿಕನಾಗಿದ್ದಾನೆ. ಕೊಪ್ಪಳ ಜಿಲ್ಲೆಯ ಬಾಲಕಿ ತಂದೆ ತಾಯಿ ಸಹ ಕಟ್ಟಡ ಕಾರ್ಮಿಕರಾಗಿದ್ದಾರೆ. ತಾವರೆಕೆರೆಯಲ್ಲಿ ಒಬ್ಬನೇ ನೆಲೆಸಿದ್ದ ಆರೋಪಿ, ಬಾಲಕಿ ಮನೆ ಬಳಿ ಆಗಾಗ ಬಂದು ಹೋಗುತ್ತಿದ್ದ.

ದಂಪತಿ ಕೆಲಸಕ್ಕೆ ಮತ್ತು ಅವರ ಮಕ್ಕಳು ಶಾಲೆಗೆ ಹೋದ ನಂತರ, ಬಾಲಕಿ ಒಬ್ಬಳೇ ಮನೆಯಲ್ಲಿರುವುದನ್ನು ಅರಿತಿದ್ದ ಎಂದು ಮೂಲಗಳು ತಿಳಿಸಿವೆ. **ಕೂಗಲೆತ್ನಿಸಿದಾಗ ಕೊಲೆ:** ಮಧ್ಯಾಹ್ನ 1.30ರ ಸುಮಾರಿಗೆ ಬೈಕ್‌ನಲ್ಲಿ ಬಾಲಕಿ ಮನೆಗೆ ಬಂದಿದ್ದ ಆರೋಪಿ, ಆಕೆ ಮೇಲೆ ಅತ್ಯಾಚಾರ ಎಸಗಿದ್ದಾನೆ. ಬಾಲಕಿ ಬಲವಾದ ಪ್ರತಿರೋಧ ತೋರಿ ಕೂಗಿಕೊಳ್ಳಲು ಯತ್ನಿಸಿದ್ದಾಳೆ.

ಆಗ ಆರೋಪಿ, ಎಲ್ಲಿ ತಾನು ಸಿಕ್ಕಿ ಬೀಳುತ್ತೇನೊ ಎಂಬ ಭಯದಿಂದ ಮನೆಯೊಳಗೆ ಇದ್ದ ದೊಣ್ಣೆಯಿಂದ ತಲೆ ಮತ್ತು ಮುಖಕ್ಕೆ ಹೊಡೆದು ಕೊಲೆ ಮಾಡಿದ್ದಾನೆ. ಕೃತ್ಯದ ಬಳಿಕ ಮನೆಯಿಂದ ಹಾಗೆಯೇ ಹೋದರೆ ಯಾರಿಗಾದರೂ ಅನುಮಾನ ಬರಲಿದೆ ಅಂದುಕೊಂಡು, ಒಳಗಿದ್ದ ಸಿಲಿಂಡರ್ ತೆಗೆದುಕೊಂಡು ಹೋಗಿದ್ದಾನೆ. ಮಧ್ಯಾಹ್ನ 2ರ ಸುಮಾರಿಗೆ ಬಾಲಕಿ ಸಹೋದರ ಮನೆಗೆ ಬಂದಾಗ ತನ್ನ ಅಕ್ಕ ಅರೆ ನಗ್ನಾವಸ್ಥೆಯಲ್ಲಿ ರಕ್ತದ ಮಡುವಿನಲ್ಲಿ ಬಿದ್ದಿರುವುದನ್ನು ನೋಡಿ ಅಕ್ಕಪಕ್ಕದ ಮನೆಯವರಿಗೆ ವಿಷಯ ತಿಳಿಸಿದ್ದ. ಸ್ಥಳೀಯರು ಠಾಣೆಗೆ ನೀಡಿದ ಮಾಹಿತಿ ಮೇರೆಗೆ ಸ್ಥಳಕ್ಕೆ ತೆರಳಿ ಪರಿಶೀಲಿಸಲಾಯಿತು ಎಂದು ಮೂಲಗಳು ತಿಳಿಸಿವೆ.

**ಸುಳಿವು ಕೊಟ್ಟ ಕ್ಯಾಮೆರಾ:** ರಕ್ತದ ಮಡುವಿನಲ್ಲಿದ್ದ ಬಾಲಕಿಯನ್ನು ಸಮೀಪದ ಆಸ್ಪತ್ರೆಗೆ ಕರೆದೊಯ್ದಾಗ, ಅಷ್ಟೊತ್ತಿಗಾಗಲೇ ಆಕೆ ಕೊನೆಯುಸಿರೆಳೆದಿದ್ದಾಳೆ ಎಂದು ವೈದ್ಯರು ಖಚಿತಪಡಿಸಿದರು.

## ಮಿನಿ ನ್ಯೂಸ್

### ಕೆಂಕೇರಮ್ಮ ದೇಗುಲದಲ್ಲಿ ಕಳ್ಳತನ

• ಉದಯವಾಹಿನಿ, ಕನಕಪುರ

ಕನಕಪುರದ ಶಕ್ತಿ ದೇವತೆ ಕೆಂಕೇರಮ್ಮ ದೇಗುಲದ ಬಾಗಿಲು ಒಡೆದು ಕಳ್ಳರು ಚಿನ್ನಾಭರಣ ಹಾಗೂ ಹುಂಡಿ ಹಣ ದೋಚಿರುವ ಘಟನೆ ಮಂಗಳವಾರ ರಾತ್ರಿ ನಡೆದಿದೆ. ಕೆಂಕೇರಮ್ಮ ದೇವಾಲಯವು ಜನವಸತಿ ಬಡಾವಣೆಯಲ್ಲಿದ್ದರೂ ಕಳ್ಳರು ಕಾಂಪೌಂಡ್ ಹಾರಿ, ದೇವಾಲಯದ ಹೆಬ್ಬಾಗಿಲನ್ನು ಒಡೆದು ದೇವಿ ಮೈ ಮೇಲಿದ್ದ ಚಿನ್ನದ ತಾಳಿ ಮತ್ತು ಬೆಳ್ಳಿ ಒಡವೆ ಹಾಗೂ ಎರಡು ಹುಂಡಿಯಲ್ಲಿದ್ದ ಹಣವನ್ನು ದೋಚಿದ್ದಾರೆ. ಜೊತೆಗೆ ಹುಂಡಿಯನ್ನು ದೇವಾಲಯ ಆವರಣದಲ್ಲೇ ಬಿಟ್ಟು ಪರಾರಿಯಾಗಿದ್ದಾರೆ. ಬೆಳಿಗ್ಗೆ ಅರ್ಚಕರು ದೇವಾಲಯದ ಬಳಿ ಹೋಗಿ ನೋಡಿದಾಗ ಕಳ್ಳತನವಾಗಿರುವುದು ಬೆಳಕಿಗೆ ಬಂದಿದೆ. ಈ ಸಂಬಂಧ ಟ್ರಸ್ಟ್ ಅಧ್ಯಕ್ಷ ಚಿಕ್ಕಲಿಂಗಯ್ಯ ಕನಕಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಎರಡು ಹುಂಡಿಗಳ ತುಂಬ ಹಣವಿತ್ತು. ಜೊತೆಗೆ ದೇವಿ ಮೈಮೇಲಿದ್ದ 12 ಗ್ರಾಂ ಚಿನ್ನ ಹಾಗೂ 200 ಗ್ರಾಂ ಬೆಳ್ಳಿ ಆಭರಣಗಳು ಕಳ್ಳತನವಾಗಿವೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

### ಗ್ರಾಚ್ಯುಟಿ ಪಾವತಿಗೆ ಬೇಡಿಕೆ

• ಉದಯವಾಹಿನಿ, ಶಿರಾ

ನಗರದಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಎಐಟಿಯುಸಿ ಮತ್ತು ಸಿಐಟಿಯುಯಿಂದ ಪ್ರತ್ಯೇಕವಾಗಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಹಾಗೂ ಸಿಡಿಪಿಒ ಕಚೇರಿಗೆ ಮನವಿ ಪತ್ರ ಸಲ್ಲಿಸಿದರು.

ಸುಪ್ರೀಂಕೋರ್ಟಿನ ತೀರ್ಪಿನಂತೆ ಅಂಗನವಾಡಿ ಉದ್ಯೋಗಿಗಳ ಗೌರವ ಸೇವೆಯನ್ನು ನಾಗರಿಕ ಸೇವೆಯಾಗಿ ಪರಿಗಣಿಸಿ, ಕಾರ್ಯಕರ್ತೆಯರು 'ಸಿ' ದರ್ಜೆ ಹಾಗೂ ಸಹಾಯಕಿಯರನ್ನು 'ಡಿ' ದರ್ಜೆ ನೌಕರರನ್ನಾಗಿ ಖಾಯಂಗೊಳಿಸಬೇಕು. ನಿವೃತ್ತರಾಗಿರುವ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಸಹಾಯಕಿಯರಿಗೆ ಗ್ರಾಚ್ಯುಟಿ ಪಾವತಿಸಬೇಕು ಎಂದು ಒತ್ತಾಯಿಸಿದರು. ಅಂಗನವಾಡಿ ಉದ್ಯೋಗಿಗಳಿಗೆ ಗೌರವಧನ ನೀಡುವ ಪದ್ಧತಿ ಬಿಟ್ಟು ಘನತೆಯುಕ್ತ ಜೀವನ ನಡೆಸಲು 26 ಸಾವಿರ ಕನಿಷ್ಠ ವೇತನ, ನಿವೃತ್ತರಿಗೆ ಮಾಸಿಕ ರೂ.10 ಸಾವಿರ ಮಾಸಿಕ ಪಿಂಚಣಿ ನೀಡುವ ಯೋಜನೆಯನ್ನು ರೂಪಿಸುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸಿದರು.

### ವಂಚನೆ ಪ್ರಕರಣ: ವಕೀಲ ಬೆಂಕಿ ಚಿದಾನಂದ್ ಬಂಧನ

• ಉದಯವಾಹಿನಿ, ಮೈಸೂರು

ವಂಚನೆ ಪ್ರಕರಣದಲ್ಲಿ ನ್ಯಾಯಾಲಯದಿಂದ ಶಿಕ್ಷೆಗೆ ಗುರಿಯಾಗಿದ್ದ. ವಕೀಲ ಬೆಂಕಿ ಚಿದಾನಂದ್ ಅವರನ್ನು ವಿದ್ಯಾರಣ್ಯಪುರಂ ಠಾಣೆ ಪೊಲೀಸರು ತುಮಕೂರಿನಲ್ಲಿ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.'ಬೆಂಕಿ ಚಿದಾನಂದ ಲಷ್ಕರ್ ಮೊಹಲ್ಲಾದ ಕೆ.ರಾಘು ಅವರಿಂದ 2012ರಲ್ಲಿ 20 ಸಾವಿರವನ್ನು ಸಾಲವಾಗಿ ಪಡೆದಿದ್ದರು. ಆ ಸಾಲದ ಮರು ಪಾವತಿಗಾಗಿ ದಿವಾನ್ಸ್ ರಸ್ತೆಯ ಓರಿಯಂಟಲ್ ಬ್ಯಾಂಕ್ ಆಫ್ ಕಾಮರ್ಸ್‌ನ 20 ಸಾವಿರ ಮೊತ್ತದ ಚೆಕ್‌ಗೆ ಅದರ ಅಂದಿನ ವ್ಯವಸ್ಥಾಪಕರಾಗಿದ್ದ ಚಿದಾನಂದ್ ಸಹಿ ಮಾಡಿ ನೀಡಿದ್ದರು. ರಾಘು ಬ್ಯಾಂಕಿಗೆ ಹಾಜರುಪಡಿಸಿದಾಗ ಚೆಕ್ ಬೌನ್ಸ್ ಆಗಿತ್ತು. ಬೆಂಕಿ ಚಿದಾನಂದ ಅವರ ಮನೆ ಬಳಿ ಹೋಗಿ ವಿಚಾರ ತಿಳಿಸಿ, ಹಣ ವಾಪಸ್ ನೀಡುವಂತೆ ಕೇಳಿದ್ದರು. ಆಗ ಚಿದಾನಂದ, ಈ ವಿಚಾರವಾಗಿ ಕೇಳಿದರೆ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದರು ಎಂದು ರಾಘು ವಿದ್ಯಾರಣ್ಯಪುರಂ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು' ಎಂದು ಪೊಲೀಸರು ತಿಳಿಸಿದರು.

### 6 ತಿಂಗಳ ಹುಲಿ ಮರಿ ರಕ್ಷಣೆ

• ಉದಯವಾಹಿನಿ, ಸರಗೂರು

ತೆರೆದ ಪಾಳು ಬಾವಿಗೆ ಬಿದ್ದಿದ್ದ ಆರು ತಿಂಗಳ ಹುಲಿ ಮರಿಯನ್ನು ಬುಧವಾರ ಕಾರ್ಯಾಚರಣೆ ಮಾಡಿ ಬುಧವಾರ ರಕ್ಷಿಸಲಾಯಿತು. ಆಹಾರ ಅರಸಿ ಬಂದ ಹುಲಿ ಮರಿ ಪಟ್ಟಣದ 11ನೇ ವಾರ್ಡ್ ಹಾಲಿನ ಡೇರಿ ಸಮೀಪದಲ್ಲಿದ್ದ ತೆರೆದ ಬಾವಿಗೆ ಬಿದ್ದಿದ್ದು, ಜೋರಾಗಿ ಘರ್ಜಿಸಿತು. ಇದನ್ನು ಕೇಳಿಸಿಕೊಂಡ ಸಾರ್ವಜನಿಕರು ಅರಣ್ಯ ಇಲಾಖೆಗೆ ವಿಷಯ ತಿಳಿಸಿದರು. ಸ್ಥಳಕ್ಕೆ ದೌಡಾಯಿಸಿದ ಅರಣ್ಯ ಇಲಾಖೆ ತಂಡ ಕಾರ್ಯಾಚರಣೆಗೆ ಮುಂದಾಯಿತು. ಡಾ.ಆದರ್ಶ ಅವರು ಹುಲಿಗೆ ಅರವಳಿಕೆ ಚುಚ್ಚುಮದ್ದು ನೀಡಿದ ಬಳಿಕ ಹುಲಿ ಮರಿಯನ್ನು ಬಾವಿಯಿಂದ ಸುರಕ್ಷಿತವಾಗಿ ರಕ್ಷಿಸಲಾಯಿತು. 'ಸೆರೆಸಿಕ್ಕ ಹುಲಿ ಮರಿಯನ್ನು ಹ್ಯಾಂಡ್ ಪೋಸ್ಟ್‌ನ ಅರಣ್ಯ ಇಲಾಖೆ ಕಚೇರಿಗೆ ತಂದು ತಪಾಸಣೆ ನಡೆಸಲಾಯಿತು. ಸಣ್ಣಪುಟ್ಟ ಗಾಯವಾಗಿದ್ದು, ಸೂಕ್ತ ಚಿಕಿತ್ಸೆಯ ಬಳಿಕ ಮೈಸೂರಿನ ಇಲವಾಲ ಬಳಿ ಇರುವ ಕೂರ್ಗಳ್ಳಿ ವನ್ಯಜೀವಿ ಪುನರ್ವಸತಿ ಕೇಂದ್ರಕ್ಕೆ ಬಿಡಲಾಗುವುದು' ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಕಾರ್ಯಕರ್ತರಿಗೆ ನಾಯಕರ ಸೃಷ್ಟಿಸುವ ಶಕ್ತಿ: ನಿಖಿಲ್ ಕುಮಾರಸ್ವಾಮಿ

## ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಯ 11 ವಿಧಾನಸಭಾ ಕ್ಷೇತ್ರಗಳಲ್ಲಿ ಅತಿ ಹೆಚ್ಚು ಸ್ಥಾನಗಳನ್ನು ನಾವು ಗೆಲ್ಲಬೇಕು ಎಂದು ಹೇಳಿಕೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ನಾಯಕರನ್ನು ಸೃಷ್ಟಿಸುವ ಶಕ್ತಿ ಇದ್ದರೆ ಅದು ಜೆಡಿಎಸ್ ಕಾರ್ಯಕರ್ತರಿಗೆ ಮಾತ್ರ. ಇದನ್ನು 20 ವರ್ಷಗಳಿಂದ ಸಾಬೀತು ಮಾಡಿದ್ದೀರಿ. ಪಕ್ಷ ತೊರೆದವರ ಬಗ್ಗೆ ಚಿಂತೆ ಬೇಡ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತಿಳಿಸಿದರು.ನಗರದಲ್ಲಿ ನಡೆದ 'ಜನರೊಂದಿಗೆ ಜನತಾದಳ' ಕಾರ್ಯಕ್ರಮದಲ್ಲಿ ಮಾತನಾಡಿದರು.

2028ರ ವಿಧಾನಸಭೆ ಚುನಾವಣೆಯಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ 11 ವಿಧಾನಸಭಾ ಕ್ಷೇತ್ರಗಳಲ್ಲಿ ಅತಿ ಹೆಚ್ಚು ಸ್ಥಾನಗಳನ್ನು ನಾವು ಗೆಲ್ಲಬೇಕು ಎಂದು ಹೇಳಿದರು. ಹಳ್ಳಿಗಳಿಗೆ ತೆರಳಿ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳು, ಹಗರಣಗಳ ಬಗ್ಗೆ ತಿಳಿಸಬೇಕು. ಸಂಘಟನೆ ಸುಲಭದ ಮಾತಲ್ಲ. ಬದ್ಧತೆ ಮತ್ತು ಸಾಮಾಜಿಕ ಕಾಳಜಿ ಬೇಕು. ಕಾರ್ಯಕರ್ತರು ಯಾವುದೇ ಕಾರಣಕ್ಕೂ ಧೃತಿಗೆಡಬಾರದು ಎಂದು ಕಿವಿಮಾತು ಹೇಳಿದರು.

ಪಕ್ಷ ಸಂಘಟನೆಗೆ ನಿಖಿಲ್ ಕುಮಾರಸ್ವಾಮಿ ಬಂದಾಗ ಎರಡು ಮೂರು ಗಂಟೆ ಅಬ್ಬರಿಸಿ ಆ ಮೇಲೆ ಮಲಗುವುದಲ್ಲ. ದಿನಕ್ಕೆ ಮೂರರಿಂದ ನಾಲ್ಕು ಗಂಟೆ ಪಕ್ಷಕ್ಕೆ ಕೆಲಸ ಮಾಡಬೇಕು. ಪ್ರತಿ ಪಂಚಾಯಿತಿಗೆ ಮುಖಂಡರು, ಕಾರ್ಯಕರ್ತರು ತೆರಳಬೇಕು. ಒಬ್ಬರು 30ರಿಂದ 35 ಜನರಿಗೆ ಮಿಸ್ ಕಾಲ್ ಕೊಡಿಸಿ ಸದಸ್ಯರನ್ನಾಗಿ ಮಾಡಬೇಕು ಎಂದು ಹೇಳಿದರು. ರಾಜ್ಯ ಸರ್ಕಾರದಲ್ಲಿ ದುರಾಡಳಿತ, ಭ್ರಷ್ಟಾಚಾರ ಹೆಚ್ಚಿದೆ. ಆ ಪಕ್ಷದ ಶಾಸಕರೇ ಈ ಬಗ್ಗೆ ಮಾತನಾಡುತ್ತಿದ್ದಾರೆ.

ಕಾಂಗ್ರೆಸ್ ಶಾಸಕರಿಗೆಯೇ 10 ಅನುದಾನ ಸಹ ದೊರೆಯುತ್ತಿಲ್ಲ ಎಂದರು. ಚಿಕ್ಕಬಳ್ಳಾಪುರವನ್ನು ಜಿಲ್ಲಾ ಕೇಂದ್ರವಾಗಿ ಘೋಷಿಸಿದ್ದು ಎಚ್.ಡಿ.ಕುಮಾರಸ್ವಾಮಿ.


ಉದಯವಾಹಿನಿ ಚಿತ್ರ



ಅವರಿಗೆ ಚಿಕ್ಕಬಳ್ಳಾಪುರದ ಮೇಲೆ ವಿಶೇಷ ಪ್ರೀತಿ, ಅಭಿಮಾನ ಇದೆ. ಲೋಕಸಭೆ ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ನಮ್ಮ ಪಕ್ಷದ ಕಾರ್ಯಕರ್ತರು ಪ್ರಾಮಾಣಿಕವಾಗಿ ಎನ್‌ಡಿಎ ಅಭ್ಯರ್ಥಿ ಗೆಲುವಿಗೆ ಶ್ರಮಿಸಿದ್ದೀರಿ. ಆ ಮೂಲಕ ಪಕ್ಷದ ಗೌರವ ಎತ್ತಿ ಹಿಡಿದಿದ್ದೀರಿ ಎಂದು ಪ್ರಶಂಸಿಸಿದರು. ಜೆಡಿಎಸ್ ಕಾರ್ಯಕರ್ತರು, ವರಿಷ್ಠರು ಇಲ್ಲದಿದ್ದರೆ ನಾನು ಸಂಸದನಾಗಿ ಆಯ್ಕೆಯಾಗಲು ಆಗುತ್ತಿರಲಿಲ್ಲ ಎಂದು ಡಾ.ಕೆ. ಸುಧಾಕರ್ ನನ್ನ ಬಳಿ ಹೇಳಿದ್ದಾರೆ. ಅವರನ್ನು ಸಂಸದರನ್ನಾಗಿಸುವಲ್ಲಿ ಜೆಡಿಎಸ್ ಕಾರ್ಯಕರ್ತರ ಶ್ರಮ ಅಪಾರ ಎಂದು ನಿಖಿಲ್ ತಿಳಿಸಿದರು. ಸುಧಾಕರ್ ಸಹ ಈ ವಿಚಾರವನ್ನು ಸ್ಮರಿಸುತ್ತಾರೆ. 2019ರ ಲೋಕಸಭೆ ಚುನಾವಣೆಯ ವೇಳೆ ಜೆಡಿಎಸ್ ಮತ್ತು ಕಾಂಗ್ರೆಸ್ ಮೈತ್ರಿ ಆಗಿತ್ತು.

ಆಗ ಕಾಂಗ್ರೆಸ್ ಮಂಡ್ಯ ಮತ್ತು ತುಮಕೂರಿನಲ್ಲಿ ನಮ್ಮ ಬೆನ್ನಿಗೆ ಚೂರಿ ಹಾಕಿತು ಎಂದು ಟೀಕಿಸಿದರು. ಶಾಸಕ ಎ.ಮಂಜು, ಬಿ.ಎನ್. ರವಿಕುಮಾರ್, ವಿಧಾನ ಪರಿಷತ್ ಮಾಜಿ ಸದಸ್ಯ ತೂಪಲ್ಲಿ ಚೌಡರೆಡ್ಡಿ, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಮುನಿಯಪ್ಪ, ಕಾರ್ಯಾಧ್ಯಕ್ಷ ಕೆ.ಆರ್. ರೆಡ್ಡಿ, ಪ್ರಭಾ ನಾರಾಯಣ ಗೌಡ, ರೋಷನ್ ಅಬ್ಬಾಸ್, ಸಾದಿಕ್ ಪಾಷ, ಅನ್ವರ್, ಮೇಲೂರು ಅಮರ್, ಕೊಳವನಹಳ್ಳಿ ಮುನಿರಾಜು, ಅರುಣಾ ಶ್ರೀನಿವಾಸ್, ಕಿಸಾನ್ ಕೃಷ್ಣಪ್ಪ, ಯಲುವಳ್ಳಿ ಸೊಳ್ಳೇಗೌಡ ಮತ್ತಿತರರು ಪಾಲ್ಗೊಂಡಿದ್ದರು. ಈ ಪ್ರವಾಸದಿಂದ ನಿಖಿಲ್ ಜೆಡಿಎಸ್ ರಾಜ್ಯ ಘಟಕದ ಅಧ್ಯಕ್ಷರಾಗಲು ವೇದಿಕೆ ಸಿದ್ಧವಾಗುತ್ತಿದೆ ಎನ್ನುವ ಮಾತುಗಳು ಕೇಳುತ್ತಿವೆ. ಆದರೆ ನನಗೆ ಆ ಆಸೆ ಇಲ್ಲ. ಎಲ್ಲಕ್ಕಿಂತ ಮುಖ್ಯವಾಗಿ ಪಕ್ಷ ಸಂಘಟನೆ ಆಗಬೇಕು. ಯಾವುದೇ ಕಾರಣಕ್ಕೂ ಜೆಡಿಎಸ್ ಅನ್ನು ಸುಲಭವಾಗಿ ತೆಗೆದುಹಾಕಲು ಸಾಧ್ಯವಿಲ್ಲ ಎಂದು ಗುಡುಗಿದರು. ಪಕ್ಷದಿಂದ ಹೆಚ್ಚು ಶಾಸಕರು ಆಯ್ಕೆಯಾಗುತ್ತಿಲ್ಲ. ವಿಧಾನಸಭೆ ಚುನಾವಣೆ ಐದಾರು ತಿಂಗಳು ಇದೆ ಎನ್ನುವಾಗ ಎಚ್.ಡಿ. ಕುಮಾರಸ್ವಾಮಿ ಅವರು ನಾಲ್ಕು ಟ್ರಿಪ್ ಮಾಡಿದರೆ ಮತ ಹಾಕುತ್ತಾರೆ ಎನ್ನುವ ಭಾವನೆ ಇದೆ. ಆದರೆ ಆ ರೀತಿ ಆಗುವುದಿಲ್ಲ. ವಿಧಾನಸಭೆ ಚುನಾವಣೆಗೆ ಕೇವಲ 1 ಸಾವಿರ ದಿನಗಳ ಮಾತ್ರ ಬಾಕಿ ಇವೆ. ಈಗಲೇ ಪಕ್ಷ ಸಂಘಟನೆ ಮಾಡಬೇಕು ಎಂದರು. ಬಿಜೆಪಿ ಜೆಡಿಎಸ್ ಮೈತ್ರಿ ಶಾಶ್ವತವಾಗಿ ಮುಂದುವರಿಯುತ್ತದೆ. ಇದರಲ್ಲಿ ಯಾರಿಗೂ ಅನುಮಾನವೇ ಬೇಡ ಎಂದು ಹೇಳಿದರು.

**ಕ್ಷೇತ್ರಕ್ಕೆ ನಾಯಕತ್ವ ಶೀಘ್ರ ನೀಡಿ**

**2004ರಿಂದ ಇಲ್ಲಿಯವರೆಗಿನ ಚುನಾವಣೆಗಳನ್ನು ನೋಡುವುದಾದರೆ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ ಪಕ್ಷಕ್ಕೆ 50 ಸಾವಿರ ಮತಗಳ ಇಡಗಂಟು ಇದೆ. ಇಲ್ಲಿನ ಒಂದು ಕೊರತೆ ಅಂದರೆ ನಿಮ್ಮ ಜೊತೆ ಒಬ್ಬ ಸಮರ್ಥ ದಂಡನಾಯಕ ಇಲ್ಲ. ಶೀಘ್ರದಲ್ಲಿಯೇ ಇಲ್ಲಿಗೆ ಪಕ್ಷದಿಂದ ಒಬ್ಬ ನಾಯಕನನ್ನು ನೀಡಲಾಗುವುದು ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದರು.**

**ನಮ್ಮ ಕಾರ್ಯಕರ್ತರ ಶ್ರಮ ಸ್ಮರಿಸುವ ಸುಧಾಕರ್**

**ಜೆಡಿಎಸ್ ಕಾರ್ಯಕರ್ತರು ವರಿಷ್ಠರು ಇಲ್ಲದಿದ್ದರೆ ನಾನು ಸಂಸದನಾಗಿ ಆಯ್ಕೆಯಾಗಲು ಆಗುತ್ತಿರಲಿಲ್ಲ ಎಂದು ಡಾ.ಕೆ.ಸುಧಾಕರ್ ನನ್ನ ಬಳಿ ಹೇಳಿದ್ದಾರೆ. ಅವರನ್ನು ಸಂಸದರನ್ನಾಗಿಸುವಲ್ಲಿ ಜೆಡಿಎಸ್ ಕಾರ್ಯಕರ್ತರ ಶ್ರಮ ಅಪಾರ ಎಂದು ನಿಖಿಲ್ ತಿಳಿಸಿದರು. ಸುಧಾಕರ್ ಸಹ ಈ ವಿಚಾರವನ್ನು ಸ್ಮರಿಸುತ್ತಾರೆ. 2019ರ ಲೋಕಸಭೆ ಚುನಾವಣೆಯ ವೇಳೆ ಜೆಡಿಎಸ್ ಮತ್ತು ಕಾಂಗ್ರೆಸ್ ಮೈತ್ರಿ ಆಗಿತ್ತು. ಆಗ ಕಾಂಗ್ರೆಸ್ ಮಂಡ್ಯ ಮತ್ತು ತುಮಕೂರಿನಲ್ಲಿ ನಮ್ಮ ಬೆನ್ನಿಗೆ ಚೂರಿ ಹಾಕಿತು ಎಂದು ಟೀಕಿಸಿದರು.**

ಅಂತರಾಳದಿಂದ... EDITORIAL

# ಡಿಜಿಟಲ್ ಇಂಡಿಯಾಗೆ ಹತ್ತು ವರ್ಷ: ಪರಿವರ್ತನೆ ಸಾಕಷ್ಟು, ಬೇಕಿದೆ ಇನ್ನಷ್ಟು

ಡಿಜಿಟಲ್ ಇಂಡಿಯಾ' ಅಭಿಯಾನ ಶುರುವಾಗಿ ಈ ತಿಂಗಳಿಗೆ 10 ವರ್ಷಗಳು ಪೂರ್ಣಗೊಂಡಿವೆ. ಈ ಅಭಿಯಾನವು ವ್ಯಾಪಾರ ವಹಿವಾಟು ನಡೆಯುವ ಬಗೆಯನ್ನು ಹಾಗೂ ದೇಶದ ಕೋಟ್ಯಂತರ ಜನರ ಬದುಕಿನ ರೀತಿಯನ್ನು ಬದಲಾಯಿಸಿದೆ. ಆಡಳಿತದಲ್ಲಿ ಸುಧಾರಣೆ ತರುವ ಉದ್ದೇಶದಿಂದ, ಸರ್ಕಾರ ಮತ್ತು ಜನರ ನಡುವಿನ ಅಂತರವನ್ನು ತಂತ್ರಜ್ಞಾನದ ಮೂಲಕ ತಗ್ಗಿಸಲು ನೆರವಾಗುವ ಗುರಿಯೊಂದಿಗೆ ಈ ಅಭಿಯಾನವನ್ನು ಆರಂಭಿಸಲಾಯಿತು. ಆ ಕೆಲಸ ಈಗಲೂ ಚಾಲ್ತಿಯಲ್ಲಿದೆ. ಆದರೆ, 'ಡಿಜಿಟಲ್ ಇಂಡಿಯಾ' ಅಭಿಯಾನವು, ಸರ್ಕಾರದ ನೀತಿಗಳ ಬೆಂಬಲದೊಂದಿಗೆ ಜಾರಿಗೆ ಬಂದ ಇತರ ಹಲವು ಯೋಜನೆಗಳಿಗಿಂತ ಹೆಚ್ಚಿನ ಪರಿಣಾಮವನ್ನು ಬಹಳ ಕಡಿಮೆ ಅವಧಿಯಲ್ಲಿ ಜನರ ಮೇಲೆ ಬೀರಿದೆ ಎಂದರೆ ಅತಿಶಯೋಕ್ತಿ ಆಗಲಾರದು. 2014ರಲ್ಲಿ, ದೇಶದಲ್ಲಿ 25 ಕೋಟಿ ಜನರಿಗೆ ಇಂಟರ್‌ನೆಟ್ ಸೇವೆ ಲಭ್ಯವಿತ್ತು. ಆದರೆ, ಎರಡು ವರ್ಷಗಳ ಹಿಂದೆ, 97 ಕೋಟಿಗೂ ಹೆಚ್ಚು ಜನರಿಗೆ ಇಂಟರ್‌ನೆಟ್ ಸೌಲಭ್ಯ ಲಭ್ಯವಾಗಿದೆ. ಎಲ್ಲಾ ಬಗೆಯ ಡಿಜಿಟಲ್ ಪಾವತಿಗಳು ಭಾರಿ ಪ್ರಮಾಣದಲ್ಲಿ ಹೆಚ್ಚಳ ಕಂಡಿವೆ. 2022-23ರಲ್ಲಿ ಯುಪಿಐ ವ್ಯವಸ್ಥೆ ಮೂಲಕ 139 ಲಕ್ಷ ಕೋಟಿ ಮೊತ್ತದ ಒಟ್ಟು 8,375 ಕೋಟಿ ಪಾವತಿಗಳನ್ನು ಮಾಡಲಾಗಿದೆ. 2017-18ರಲ್ಲಿ ಯುಪಿಐ ವ್ಯವಸ್ಥೆಯ ಮೂಲಕ ಆದ ಪಾವತಿಗಳ ಸಂಖ್ಯೆ 92 ಕೋಟಿ ಮಾತ್ರವೇ ಆಗಿತ್ತು. ಈಗ ಯುಪಿಐ ವ್ಯವಸ್ಥೆ ಮೂಲಕ ಆಗುವ ಪಾವತಿಗಳ ಸಂಖ್ಯೆಯು ಇನ್ನೂ ಹೆಚ್ಚಾಗಿರಬಹುದು.ಸರ್ಕಾರದ ವಿವಿಧ ಯೋಜನೆಗಳ ಪ್ರಯೋಜನವು ಅರ್ಹರಿಗೆ 'ನೇರ ನಗದು ವರ್ಗಾವಣೆ' (ಡಿಬಿಟಿ) ರೂಪದಲ್ಲಿ ದೊರೆತ ಕಾರಣದಿಂದಾಗಿ ಈ ಅಭಿಯಾನವು ಬಹಳಷ್ಟು ಜನರಿಗೆ ಪ್ರಯೋಜನಕಾರಿ ಆಯಿತು. 44 ಲಕ್ಷ ಕೋಟಿ ಮೊತ್ತವು ಅರ್ಹ ಫಲಾನುಭವಿಗಳಿಗೆ ಸರ್ಕಾರದಿಂದ ನೇರವಾಗಿ ವರ್ಗಾವಣೆ ಆಗುವುದಕ್ಕೆ 'ಡಿಬಿಟಿ' ಸಹಾಯ ಮಾಡಿತು. ಇದರಿಂದಾಗಿ, ಯೋಜನೆಗಳ ಲಾಭವನ್ನು ತಲುಪಿಸುವ ಪ್ರಕ್ರಿಯೆಯಲ್ಲಿ ಆಗುತ್ತಿದ್ದ 3.48 ಲಕ್ಷ ಕೋಟಿ ಸೋರಿಕೆ ತಡೆಯಲು ಸಾಧ್ಯವಾಗಿದೆ.

**ದೇಶದಾದ್ಯಂತ 42 ಲಕ್ಷ ಕಿ.ಮೀ.ಗಿಂತ ಹೆಚ್ಚಿನ ಉದ್ದದ ಆಪ್ಟಿಕಲ್ ಫೈಬರ್ ಕೇಬಲ್ ಜಾಲದ ಅಳವಡಿಕೆ ಆಗಿದೆ; 4.8 ಲಕ್ಷ 5ಜಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಹಿಂದೆ ಇಂಟರ್‌ನೆಟ್ ಲಭ್ಯವಾಗದಿದ್ದ ಹಲವು ಸ್ಥಳಗಳಲ್ಲಿ ಈಗ ವೇಗದ ಇಂಟರ್‌ನೆಟ್ ಸಂಪರ್ಕ ಸಿಗುತ್ತಿದೆ. ಇ ಆಡಳಿತ ಮತ್ತು ಡಿಜಿಟಲ್ ಸಾಕ್ಷರತೆಯ ಕಾರಣದಿಂದಾಗಿ ಹೆಚ್ಚಿನ ಮಟ್ಟದ ಪಾರದರ್ಶಕತೆ ಹಾಗೂ ದಕ್ಷತೆಯು ಸಾಧ್ಯವಾಗಿದೆ.**

ಸರ್ಕಾರದ ಕೆಲಸವು ಹೆಚ್ಚು ಪರಿಣಾಮಕಾರಿ ಆಯಿತು, ನಷ್ಟ ಮತ್ತು ಸೋರಿಕೆಯ ಪ್ರಮಾಣ ಕಡಿಮೆ ಆಯಿತು, ಹಣಕಾಸು ವ್ಯವಸ್ಥೆಯು ಹೆಚ್ಚು ಜನರನ್ನು ತಲುಪಿತು. ಹಣಕಾಸು ಮಾತ್ರವೇ ಅಲ್ಲದೆ, ಡಿಜಿಟಲ್ ಇಂಡಿಯಾ'ಅಭಿಯಾನವು ಸಾರಿಗೆ ಮತ್ತು ಸಂವಹನ, ಆರೋಗ್ಯ, ಶಿಕ್ಷಣ, ಕೈಗಾರಿಕೆ, ಕೃಷಿ ಮತ್ತು ಮನರಂಜನಾ ವಲಯದಲ್ಲಿ ಬಹಳಷ್ಟು ಬದಲಾವಣೆಗಳನ್ನು ತಂದಿದೆ. ಈ ಎಲ್ಲಾ ವಲಯಗಳಲ್ಲಿನ ಚಟುವಟಿಕೆಗಳನ್ನು ನಡೆಸುವುದಕ್ಕೆ ಹೊಸದೊಂದು ವಿಧಾನ ದೊರಕಿದೆ. ಗಮನಾರ್ಹ ಯಶಸ್ಸಿನ ನಂತರವೂ ಡಿಜಿಟಲ್ ರಸ್ತೆಯಲ್ಲಿ ದೇಶವು ಸಾಗಬೇಕಾದ ಹಾದಿಯು ಇನ್ನೂ ಸುದೀರ್ಘವಾಗಿಯೇ ಇದೆ. ಮುಂದಿನ ದಿನಗಳಲ್ಲಿ ಎದುರಿಸ ಬೇಕಿರುವ ಸವಾಲುಗಳು ಕೂಡ ಬಹಳಷ್ಟಿವೆ. ಡಿಜಿಟಲ್ ಸೇವೆಗಳ ಲಭ್ಯತೆಯಲ್ಲಿ, ಗುಣಮಟ್ಟದ ಸೇವೆಗಳ ಲಭ್ಯತೆಯಲ್ಲಿ ಗ್ರಾಮೀಣ ಪ್ರದೇಶಗಳು ಹಾಗೂ ನಗರ ಪ್ರದೇಶಗಳ ನಡುವಿನ ಅಂತರವು ದೊಡ್ಡದಾಗಿಯೇ ಇದೆ. ಸಮೀಕ್ಷೆಯೊಂದರ ಪ್ರಕಾರ, ನಗರ ಪ್ರದೇಶಗಳ ಶೇ 66ರಷ್ಟು ಮನೆಗಳಿಗೆ ಗುಣಮಟ್ಟದ ಇಂಟರ್‌ನೆಟ್ ಲಭ್ಯತೆ ಇದೆ. ಗ್ರಾಮೀಣ ಪ್ರದೇಶಗಳ ಶೇ 24ರಷ್ಟು ಮನೆಗಳಿಗೆ ಮಾತ್ರ ಈ ಲಭ್ಯತೆ ಇದೆ. ಗ್ರಾಮೀಣ ಪ್ರದೇಶ ಗಳಲ್ಲಿ ಇರುವ ಮಹಿಳೆಯರ ಪೈಕಿ ಶೇ 50ರಷ್ಟು ಮಂದಿಯ ಬಳಿ ಮೊಬೈಲ್ ಫೋನ್ ಇಲ್ಲ, ಶೇ 57ರಷ್ಟು ಶಾಲೆಗಳಲ್ಲಿ ಮಾತ್ರ ಕೆಲಸ ಮಾಡುತ್ತಿರುವ ಕಂಪ್ಯೂಟರ್‌ಗಳು ಇವೆ, ಶೇ 53ರಷ್ಟು ಶಾಲೆಗಳಿಗೆ ಮಾತ್ರ ಇಂಟರ್‌ನೆಟ್ ಸಂಪರ್ಕ ಇದೆ. ಹಳ್ಳಿಗಳಿಗೆ ಬ್ರಾಡ್‌ಬ್ಯಾಂಡ್ ಇಂಟರ್‌ನೆಟ್ ಸೌಲಭ್ಯ ಒದಗಿಸುವ 'ಭಾರತ್‌ನೆಟ್' ಯೋಜನೆಯು ನಿಗದಿತ ಗುರಿಯನ್ನು ತಲುಪಿಲ್ಲ. ಸೈಬರ್ ಅಪರಾಧಗಳು ಹಾಗೂ ವಂಚನೆಗಳು ಹೆಚ್ಚುತ್ತಿವೆ. ಇಂತಹ ವಂಚನೆಗಳಿಗೆ ಸಿಲುಕಿ ಜನರು ಭಾರಿ ಪ್ರಮಾಣದಲ್ಲಿ ಹಣ ಕಳೆದುಕೊಂಡಿದ್ದಾರೆ. ವೈಯಕ್ತಿಕ ದತ್ತಾಂಶ ಹಾಗೂ ಖಾಸಗೀತನದ ರಕ್ಷಣೆಗೆ ಪರಿಣಾಮಕಾರಿ ಕಾನೂನು ಚೌಕಟ್ಟು ಇಲ್ಲದ ಕಾರಣದಿಂದಾಗಿ ಅವುಗಳ ಸುರಕ್ಷತೆಯ ಬಗ್ಗೆ ಗಂಭೀರ ಕಳವಳಗಳೂ ಇವೆ.





# ಪೂರ್ವ ಬೆಂಗಳೂರಿನಲ್ಲಿ 1,000 ಕೋಟಿ ರೂಪಾಯಿ ಮೌಲ್ಯದ ವಸತಿ ಯೋಜನೆಗೆ ಪುರವಂಕರ ಗ್ರೂಪ್ ಚಾಲನೆ

• **ಉದಯವಾಹಿನಿ, ಬೆಂಗಳೂರು,**

ರಿಯಲ್ ಎಸ್ಟೇಟ್ ಕ್ಷೇತ್ರದ ಪ್ರಮುಖ ಸಂಸ್ಥೆಯಾಗಿರು ಪುರವಂಕರ ಗ್ರೂಪ್, ಪೂರ್ವ ಬೆಂಗಳೂರಿನ ಬಾಲಗೆರೆಯಲ್ಲಿ ಸುಮಾರು 1,000 ಕೋಟಿ ರೂಪಾಯಿ ಮೌಲ್ಯದ ಬೃಹತ್ ವಸತಿ ಯೋಜನೆಯನ್ನು ಅಭಿವೃದ್ಧಿ ಪಡಿಸಲು ಭೂಮಾಲೀಕರೊಬ್ಬರೊಂದಿಗೆ ಕಾರ್ಯತಂತ್ರದ ಸಹಭಾಗಿತ್ವ ಘೋಷಿಸಿದೆ. ಈ ಕುರಿತು ಸರ್ಕಾರದ ನಿಯಂತ್ರಕ ಸಂಸ್ಥೆಗಳಲ್ಲಿ (ರೆಗ್ಯುಲೇಟರಿ ಫೈಲಿಂಗ್) ಅಧಿಕೃತ ಘೋಷಣೆ ಮಾಡಲಾಗಿದೆ.

ಈ ಯೋಜನೆಯು 5.5 ಎಕರೆ ಭೂಮಿಯ ಜಂಟಿ ಅಭಿವೃದ್ಧಿ ಒಪ್ಪಂದವನ್ನು ಒಳಗೊಂಡಿದೆ. ಇದರ ಸಂಭಾವ್ಯ ಒಟ್ಟು ಅಭಿವೃದ್ಧಿ ಮೌಲ್ಯ 1,000 ಕೋಟಿ ರೂಪಾಯಿಗಳನ್ನು ಮೀರಲಿದೆ. ಈ ವಸತಿ ಯೋಜನೆಯ ಒಟ್ಟು ಮಾರಾಟ ಮಾಡಬಹುದಾದ ವಿಸ್ತೀರ್ಣ 0.83 ಮಿಲಿಯನ್ ಚದರ ಅಡಿ ಎಂದು ಪುರವಂಕರ ಗ್ರೂಪ್ ತಿಳಿಸಿದೆ. ಯೋಜನೆಯಲ್ಲಿ ಭಾಗಿಯಾಗಿರುವ ಭೂಮಾಲೀಕರ ಹೆಸರನ್ನು ಸದ್ಯಕ್ಕೆ ಬಹಿರಂಗಪಡಿಸಲಾಗಿಲ್ಲ. ಅಲ್ಲದೆ, ಆದಾಯ ಅಥವಾ ಲಾಭ ಹಂಚಿಕೆಯ ರಚನೆಯ ವಿವರಗಳನ್ನು ಪುರವಂಕರ ಬಿಡುಗಡೆ ಮಾಡಿಲ್ಲ. ಬಾಲಗೆರೆಯಲ್ಲಿ ಕಾರ್ಯತಂತ್ರವಾಗಿ ನೆಲೆಗೊಂಡಿರುವ ಈ ಯೋಜನೆಯು ಮುಂದಿನ 6-9 ತಿಂಗಳುಗಳಲ್ಲಿ ಪ್ರಾರಂಭವಾಗುವ ನಿರೀಕ್ಷೆಯಿದೆ.

ಪುರವಂಕರದ ವ್ಯವಸ್ಥಾಪಕ ನಿರ್ದೇಶಕ ಆಶಿಶ್ ಪುರವಂಕರ ಅವರು, ಕಂಪನಿಯ ನಿರಂತರ ಬೆಳವಣಣಿಗೆಗೆ ತಾವು ಬದ್ಧರಾಗಿದ್ದು, ಪೂರ್ವ ಬೆಂಗಳೂರಿನ ಅಭಿವೃದ್ಧಿ ಹೊಂದುತ್ತಿರುವ ಸೂಕ್ಷ್ಮ-ಮಾರುಕಟ್ಟೆಯಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಈ ವರ್ಷದ ಆರಂಭದಲ್ಲಿ, ಪುರವಂಕರ ಬೆಂಗಳೂರಿನ ಇತರ ಪ್ರಮುಖ ಪ್ರದೇಶಗಳಲ್ಲಿ ಗಮನಾರ್ಹ ಭೂ ಸ್ವಾಧೀನಗಳನ್ನು ಮಾಡಿತ್ತು.

**ಪುರವಂಕರ ಲಿಮಿಟೆಡ್‌ನ ದಕ್ಷಿಣದ ಸಿಇಒ ಮಲ್ಲಣ್ಣ ಸಾಸಲು ಮಾತನಾಡಿ, ಬಾಲಗೆರೆಯು ಪ್ರಮುಖ ಐಟಿ ಕೇಂದ್ರಗಳಿಗೆ ಸಮೀಪದಲ್ಲಿರುವುದು ಮತ್ತು ಉತ್ತಮ ಮೂಲಸೌಕರ್ಯ ಹೊಂದಿರುವುದರಿಂದ ಉನ್ನತ ಸಾಮರ್ಥ್ಯದ ವಸತಿ ಸೂಕ್ಷ್ಮ-ಮಾರುಕಟ್ಟೆಯಾಗಿ ಹೊರಹೊಮ್ಮುತ್ತಿದೆ ಎಂದು ಹೇಳಿದರು. ಈ ಜಂಟಿ ಅಭಿವೃದ್ಧಿ ಒಪ್ಪಂದವು ಪುರವಂಕರದ ದೀರ್ಘಕಾಲೀನ ವಿಸ್ತರಣಾ ತಂತ್ರವನ್ನು ಪ್ರತಿಬಿಂಬಿಸುತ್ತದೆ ಮತ್ತು ಕಂಪನಿಯ ಬಂಡವಾಳ-ದಕ್ಷ ಬೆಳವಣಿಗೆಯ ವಿಧಾನಕ್ಕೆ ಇದು ಸಾಕ್ಷಿಯಾಗಿದೆ ಎಂದು ಅಭಿಪ್ರಾಯಪಟ್ಟರು.**



ಕಂಪನಿಯು ಪ್ರಸ್ತುತ ಒಂಬತ್ತು ನಗರಗಳಲ್ಲಿ 53 ಮಿಲಿಯನ್ ಚದರ ಅಡಿಗಳಿಗಿಂತಲೂ ಹೆಚ್ಚಿನ ಯೋಜನೆಗಳನ್ನು ಪೂರ್ಣಗೊಳಿಸುವ ಮೂಲಕ ತನ್ನ ವ್ಯಾಪ್ತಿಯನ್ನು ವಿಸ್ತರಿಸುತ್ತಿದೆ.

# ಶ್ರೀ ಗುರುರಾಯರ ದರ್ಶನ ಪಡೆಯಲು ಸಹಸ್ರಾರು ಭಕ್ತರ ಆಗಮನ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಗುರುಪೌರ್ಣಮಿ ಪ್ರಯುಕ್ತ ವಿಶೇಷ ಕಾರ್ಯಕ್ರಮಗಳು ಏರ್ಪಡಿಸಿತ್ತು.

ಬೆಳಗ್ಗೆ ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ ಶ್ರೀ ಸತ್ಯನಾರಾಯಣ ಪೂಜೆ, ಮಹಾಮಂಗಳಾರತಿ, ಅನ್ನದಾನ ಸೇವೆಗಳು ಜರುಗಿದವು. ಬೆಳಗ್ಗೆ ಐದು ಗಂಟೆಯಿಂದಲೇ ಭಕ್ತಾದಿಗಳು ಗುರುಗಳ ದರ್ಶನಕ್ಕೆ ಬರಲು ಆರಂಭಿಸಿದರು. ಮಧ್ಯಾಹ್ನ ಮೂರು ಗಂಟೆಯವರೆಗೂ ಸುಮಾರು 10,000 ಸಾವಿರ ಹೆಚ್ಚಿನ ಭಕ್ತಾದಿಗಳು ಸೇರಿ ಗುರುಗಳ ದರ್ಶನ ಪಡೆದು ಅವರ ಅನುಗ್ರಹಕ್ಕೆ ಪಾತ್ರರಾದರು ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದರು ಗುರುಗಳ ದರ್ಶನಕ್ಕೆ ಆಗಮಿಸಿದ ಭಕ್ತರ ಕ್ಷೇಮಕ್ಕಾಗಿ ಸ್ವಪ್ರೇರಣೆಯಿಂದ ಜಯನಗರದ ಪೊಲೀಸ್ ಸಿಬ್ಬಂದಿ ಹಾಗೂ ಜೆಪಿ ನಗರದ ಪೊಲೀಸ್ ಸಿಬ್ಬಂದಿ ವರ್ಗದವರು ಕೂಡ ಆಗಮಿಸಿ ಶ್ರೀ ಮಠದ ಸಹಕಾರದೊಂದಿಗೆ ಶ್ರೀ ಗುರು ಯರಾಯರ ಸೇವೆಯಲ್ಲಿ ಭಾಗವಹಿಸಿ ಭಕ್ತರಿಗೂ, ಗಣ್ಯರಿಗೂ ಸರದಿ ಸಾಲಿನಲ್ಲಿ ಬರುವುದಕ್ಕಾಗಿ ಅಚ್ಚುಕಟ್ಟಾದ ವ್ಯವಸ್ಥೆಯನ್ನು ಮಾಡಲಾಗಿದ್ದು ಎಲ್ಲಾ ಭಕ್ತರು ಕೂಡ ಸಹಕರಿಸಿ ರಾಯರ ದರ್ಶನ ಪಡೆದು ಪ್ರಸಾದವನ್ನು ಸ್ವೀಕರಿಸಿ ಶ್ರೀ ಗುರುರಾಯರ ಅನುಗ್ರಹಕ್ಕೆ ಪಾತ್ರರಾದರು, ಈ ಅಚ್ಚುಕಟ್ಟಾದ ವ್ಯವಸ್ಥೆಯನ್ನು ಕಂಡ ಭಕ್ತರು ಶ್ರೀ ಗುರುರಾಯರ ಆರಾಧನೆಯೋ ಎಂಬಂತೆ ಭಾಸವಾಗುತ್ತಿತ್ತು ಎಂದು ಸಂತೋಷವನ್ನು ವ್ಯಕ್ತಪಡಿಸುತ್ತಾ ಗುರುರಾಯರ ಅನುಗ್ರಹಕ್ಕೆ ಪಾತ್ರರಾದರು ಈ ಸಂದರ್ಭದಲ್ಲಿ ಗಣ್ಯರ ಆಗಮನ : ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರ ಮಗ ಶ್ರೀ ಹೆಚ್. ಡಿ. ರೇವಣ್ಣ, ಚಲನಚಿತ್ರ ಕಲಾವಿದರುಗಳಾದ ಶ್ರೀ ದೀಪಕ್, ಶ್ರೀ ಕಿರಣ್ ಆರ್ಯನ್ ಮುಂತಾದ ಗಣ್ಯರು ಗುರುಗಳ ದರ್ಶನ ಪಡೆದರು.

**ಗುರುಪೌರ್ಣಮಿ ಪ್ರಯುಕ್ತ ವಿಶೇಷ ಕಾರ್ಯಕ್ರಮ**

# ದೇವನಹಳ್ಳಿ- ಚನ್ನರಾಯಪಟ್ಟಣ ರೈತ ಸಮಿತಿ ಆಗ್ರಹ

• **ಉದಯವಾಹಿನಿ, ಬೆಂಗಳೂರು,**

ದೇವನಹಳ್ಳಿ ಸುತ್ತಮುತ್ತ ಹೈಟೆಕ್ ಡಿಫೆನ್ಸ್ ಮತ್ತು ಎರೋಸ್ಪೇಸ್ ಪಾರ್ಕ್ ನಿರ್ಮಾಣಕ್ಕೆ ಭೂಮಿ ಕೊಡುವ ರೈತರಿಗೆ ಸೂಕ್ತ ರೀತಿಯಲ್ಲಿ ಮಾರುಕಟ್ಟೆ ದರ ನೀಡಿ ನ್ಯಾಯ ದೊರಕಿಸಿಕೊಡಬೇಕು. ಯಾವುದೇ ಕಾರಣಕ್ಕೂ ಈ ಭಾಗವನ್ನು ಹಸಿರು ವಲಯವನ್ನಾಗಿ ಘೋಷಿಸಬಾರದು ಎಂದು ದೇವನಹಳ್ಳಿ ಚನ್ನರಾಯಪಟ್ಟಣ ರೈತ ಸಮಿತಿ ಆಗ್ರಹಿಸಿದೆ. ಸ್ವಾಧೀನಪಡಿಸಿಕೊಳ್ಳುವ ಭೂಮಿಗೆ ಮಾರುಕಟ್ಟೆ ದರ ನೀಡುವಂತೆ ಆಗ್ರಹಿಸಿ ಜು.12 ರಂದು ಫ್ರೀಡಂ ಪಾರ್ಕ್ ನಲ್ಲಿ ಬೃಹತ್ ಪ್ರತಿಭಟನೆ ನಡೆಸುವುದಾಗಿ ಹೇಳಿದ್ದಾರೆ.

ಕೆ.ಐ.ಎ.ಡಿ.ಬಿ.ಉದ್ದೇಶಿಸಿರುವ ದೇವನಹಳ್ಳಿ ತಾಲ್ಲೂಕು ಚನ್ನರಾಯಪಟ್ಟಣ ಬಳಿ ಕೈಗಾರಿಕಾ ಅಭಿವೃದ್ಧಿಗಾಗಿ ಭೂಸ್ವಾಧೀನ ಪಡಿಸಿಕೊಳ್ಳುವುದನ್ನು ಬೆಂಬಲಿಸುತ್ತೇವೆ. ಮಾರುಕಟ್ಟೆಯ ಮಾದರಿಯಲ್ಲಿ ದರ ನಿಗದಿ ಮಾಡಬೇಕು. ಇಲ್ಲವಾದಲ್ಲಿ ಅಭಿವೃದ್ಧಿಪಡಿಸಿದ ಭೂಮಿ ಒದಗಿಸಬೇಕು ಎಂದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಮಿತಿ ಸಂಚಾಲಕರುಗಳಾದ ಶ್ರೀನಿವಾಸ್, ಡೊಡ್ಡೇಗೌಡ, ರಂಗಣ್ಣ, ಜಗದೀಶ್, ಭರತ್, ದೇವರಾಜ್, ಲಕ್ಷ್ಮಿನಾರಾಯಣ್, ರಾಜ್ಯ ಸರ್ಕಾರ ದೇವನಹಳ್ಳಿ ತಾಲೂಕಿನ ಚನ್ನರಾಯಪಟ್ಟಣ ಹೋಬಳಿಯ 13 ಗ್ರಾಮಗಳ ವ್ಯಾಪ್ತಿಯ 1777ಎಕರೆಯನ್ನು ಸ್ವಾಧಿನಪಡಿಸಿಕೊಳ್ಳುವ ಬಗ್ಗೆ ನಮ್ಮ ತಕರಾರಿಲ್ಲ. ಆದರೆ ಈಗಿನ ಮಾರುಕಟ್ಟೆ ದರವನ್ನು ನೀಡಬೇಕು. ರೈತ ಈ ದೇಶದ ಬೆನ್ನೆಲುಬು. ರೈತ ಉಳಿದರೆ ಮಾತ್ರ ದೇಶದ ಜನರು ಉಳಿಯುತ್ತಾರೆ ಎಂದರು. ಶ್ರೀನಿವಾಸ್ ಮಾತನಾಡಿ, ಅಭಿವೃದ್ಧಿ ಮಾಡಬೇಡಿ ಏನ್ನುವುದಿಲ್ಲ. ಅದರೆ ರೈತನಿಗೆ ನ್ಯಾಯಕೊಡಿ. ಪರ್ಯಾಯ ಜಮೀನು ನೀಡುವುದು ಅಥವಾ ಉತ್ತಮ ಬೆಲೆ ಜಮೀನಿಗೆ ನೀಡುವುದು ಹಾಗೂ ಸರ್ಕಾರಿ ಉದ್ಯೋಗ ಅಥವಾ ರೈತನ ಜಮೀನಿನಲ್ಲಿ ನಿರ್ಮಾಣವಾದ ಕಾರ್ಖಾನೆ, ಸಂಸ್ಥೆಯಲ್ಲಿ ಜಮೀನು ಕಳೆದುಕೊಂಡವರಿಗೆ ಉದ್ಯೋಗ ನೀಡುವುದು ಮಾಡಿದರೆ ಮಾತ್ರ ಸಹಕಾರ ನೀಡುತ್ತೇವೆ. ಇಲ್ಲದೆ ಹೋದರೆ ಸರ್ಕಾರದ ವಿರುದ್ಧ ನಿರಂತರ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದರು. ಚನ್ನಕೇಶವ ಮಾತನಾಡಿ ನಿಜವಾದ ರೈತ ಯಾರು ಎಂಬುದು ನಮ್ಮ ಆರ್.ಟಿ.ಸಿ.ಯನ್ನು ಪರಿಶೀಲಿಸಿದರೆ ತಿಳಿಯುತ್ತದೆ. ಕೆ.ಐ.ಎ.ಡಿ.ಬಿ.ಗೆ ಜಮೀನು ಬಿಟ್ಟು ಕೊಡಲು ಸಿದ್ದರಿದ್ದೇವೆ. ಸರ್ಕಾರಕ್ಕೆ ಭೂಮಿ ಕೊಡಲು ಯಾವುದೇ ಅಕ್ಷೇಪಣೆ ಇಲ್ಲ. ನಮ್ಮ ಮಕ್ಕಳಿಗೆ ಉದ್ಯೋಗ ಅವಕಾಶ ಬೇಕಾಗಿದೆ. ಎಸ್.ಇ.ಝಡ್ ಮಾಡಿದ್ದಲ್ಲಿ ನಮಗೆ ವ್ಯವಸಾಯ ಮಾಡಲು ನೀರಿನ ಕೊರತೆ ಇದೆ. ಕೊಳವೆ ಬಾವಿಗಳಲ್ಲಿ 1600 ಅಡಿ ಕೊರೆಸಿದರೂ ನೀರು ಸಿಗುವುದಿಲ್ಲ. ಆದರೆ ಭೂಮಿ ಕೊಡುವುದಿಲ್ಲ ಎಂದು ಧರಣಿ ನಡುಸುತ್ತಿರುವವರು ನಿಜವಾದ ರೈತರಲ್ಲ. ಅವರೆಲ್ಲ ರಾಜಕಾರಣಿಗಳು, ರಿಯಲ್ ಎಸ್ಟೇಟ್ ಮಾಫಿಯ ಕುಮ್ಮಕ್ಕಿನಿಂದ ಹೋರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.



ಉದಯವಾಹಿನಿ ಚಿತ್ರ

**ಡೊಡ್ಡೇಗೌಡ ಮಾತನಾಡಿ, ರೈತನಿಗೆ ನ್ಯಾಯ ಸಿಗಬೇಕು. ಜಮೀನು ಕೊಟ್ಟ ಮೇಲೆ ನಮಗೆ ಬೇರೆ ಕೆಲಸ ಮಾಡಲು ಗೊತ್ತಿಲ್ಲ. ಉದ್ಯೋಗ ಭರವಸೆ ದೊರೆಯಬೇಕು. ಜಮೀನು ಕೊಟ್ಟವರಿಗೆ ಉತ್ತಮ ಮಾರುಕಟ್ಟೆ ಬೆಲೆ ಸಿಗಬೇಕು ಅಥವಾ ಬೇರೆ ಕಡೆ ಜಮೀನು ಕೊಟ್ಟರು ಸರಿ. ಈ ಕುರಿತು ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗುವುದು ಎಂದು ಹೇಳಿದರು.**

# ತೆರಿಗೆ ಪಾವತಿಸಲು ನೋಟಿಸ್: ವ್ಯಾಪಾರಿಗಳ ಆಕ್ರೋಶ

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿ ಬೇಕರಿ, ಜ್ಯೂಸ್ ಅಂಗಡಿ, ಕಾಂಡಿಮೆಂಟ್ಸ್ ಅಂಗಡಿ ನಡೆಸುತ್ತಿರುವ ವ್ಯಾಪಾರಿಗಳಿಗೆ ವಾಣಿಜ್ಯ ತೆರಿಗೆ ಪಾವತಿಸುವಂತೆ ಸೂಚಿಸಿ ವಾಣಿಜ್ಯ ತೆರಿಗೆ ಇಲಾಖೆ ನೋಟಿಸ್ ಜಾರಿ ಮಾಡಿದೆ.

ನೋಟಿಸ್ ಜಾರಿ ಮಾಡಿರುವುದಕ್ಕೆ ವ್ಯಾಪಾರಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಣ್ಣಪುಟ್ಟ ವ್ಯಾಪಾರಿಗಳ ಹೊಟ್ಟೆಯ ಮೇಲೆ ತೆರಿಗೆ ಇಲಾಖೆಯ ಅಧಿಕಾರಿಗಳು ಹೊಡೆದಿದ್ದಾರೆ ಎಂದು ವ್ಯಾಪಾರಿಗಳು ನೋವು ತೋಡಿಕೊಂಡಿದ್ದಾರೆ. ಬ್ಯಾಂಕ್ ದಾಖಲೆ ಸಹಿತ ನೂರಾರು ಸಣ್ಣ ವ್ಯಾಪಾರಿಗಳು ವಾಣಿಜ್ಯ ತೆರಿಗೆ ಇಲಾಖೆ ಕಚೇರಿಗೆ ಗುರುವಾರ ಬಂದಿದ್ದರು. ಗ್ರಾಹಕರಿಂದ ಗೂಗಲ್ ಪೇ, ಫೋನ್ ಪೇ, ಪೇಟಿಎಂ ಮೂಲಕ ಹಣ ಸ್ವೀಕರಿಸಿದ್ದೆವು. ವ್ಯಾಪಾರ ಆರಂಭಿಸಿದ್ದ ದಿನದಿಂದಲೂ ಯಾವುದೇ ತೊಂದರೆ ಆಗಿರಲಿಲ್ಲ. ಇದೀಗ ನೋಟಿಸ್ ನೀಡಲಾಗಿದೆ.





ಆನ್‌ಲೈನ್ ಮೂಲಕ ಇದುವರೆಗೂ ವಹಿವಾಟು ನಡೆಸಿರುವುದಕ್ಕೆ ವಾಣಿಜ್ಯ ತೆರಿಗೆ ಕಟ್ಟಬೇಕು ಎಂದು ಇಲಾಖೆ ನೋಟಿಸ್‌ನಲ್ಲಿ ಸೂಚಿಸಿದೆ. ದುಬಾರಿ ತೆರಿಗೆ ವಿಧಿಸಲಾಗಿದೆ' ಎಂದು ಆಕ್ರೋಶ ಹೊರಹಾಕಿದರು. ದಿಢೀರ್ ನೋಟಿಸ್ ಕೊಟ್ಟಿದ್ದಾರೆ. ರೂ 41 ಲಕ್ಷ ಪಾವತಿಸುವಂತೆ ಉಲ್ಲೇಖಿಸಿದ್ದಾರೆ. ಶೇಕಡ 99ರಷ್ಟು ಆನ್ ಲೈನ್ ಮೂಲಕವೇ ವಹಿವಾಟು ನಡೆಯುತ್ತಿದೆ. ಈಗ ಅದಕ್ಕೆ ತೆರಿಗೆ ಪಾವತಿಸುವಂತೆ ಸೂಚಿಸಿದ್ದಾರೆ' ಎಂದು ವ್ಯಾಪಾರಿಯೊಬ್ಬರು ಅಳಲು ತೋಡಿಕೊಂಡರು.



# ರಾಮಾಯಣ

## ಭರತನ ಸೇನೆಯ ನ್ನು ಕಂಡು ಲಕ್ಷ್ಮಣನ ಕೋಪ

• ಹಿಂದಿನ ಸಂಚಿಕೆಯಿಂದ **96 ನೆಯ ಅಧ್ಯಾಯ**

ಆದ್ದರಿಂದ ನೀನು ಪುಣ್ಯಾತ್ಮರಾಗಿಯೂ ಶಮ ದಮ ಗುಣಸಂಪತ್ತಿಯುಳ್ಳವರಾಗಿಯೂ ಇರುವ ತಪೋನಿಷ್ಠರಾದ ಸಿದ್ದರಿಂದ ಸೇವಿಸಲ್ಪಟ್ಟ ಮಂದಾಕಿನೀನದಿಯಲ್ಲಿ ನಿನ್ನ ಸಖಿಯರೊಡನೆ ಸ್ನಾನ ಮಾಡುವಂತೆ ನನ್ನೊಡನೆ ಸ್ನಾನವನ್ನು ಮಾಡು. ಕೊಳಗಳು ನಿನಗೆ ಕೈಗಾಣಿಕೆಯನ್ನು ಕೊಡುವುವೋ ಎಂಬಂತೆ ಮನೋಹರವಾದ ಕಮಲಗಳಿಂದ ಒಪ್ಪುತ್ತಿವೆ. ಅಂಥ ಕೊಳಗಳುಳ್ಳ ಈ ಪರ್ವತವನ್ನು ನಿನ್ನ ಸೇವಕಜನರಿಂದಿಟ್ಟಣಿಸಿರುವ ಅಯೋಧ್ಯಾಪಟ್ಟಣದಂತೆ ಕಾಣು. ಮಂದಾಕಿನೀನದಿಯನ್ನು ಪಟ್ಟಣದಲ್ಲಿರುವ ಸರಯೂ ನದಿಯಂತೆ ಕಾಣು. ಜಾನಕಿ, ನನ್ನ ಆಜ್ಞೆಯನ್ನು ಮೀರದೆ ನನ್ನ ಸೇವೆಯನ್ನು ಮಾಡಿಕೊಂಡಿರುವ ಧರ್ಮಾತ್ಮನಾದ ಲಕ್ಷ್ಮಣನು ನನಗೆ ಅನುಕೂಲ ವಾಗಿ ನಡೆಯುವನು. ನೀವಿಬ್ಬರೂ ನನಗೆ ಈ ವನದಲ್ಲಿ ಮನೋಹರ್ಷವನ್ನು ಮಾಡುತ್ತಿದ್ದರೆ ನಾನು ಕಾಲತ್ರಯಗಳಲ್ಲಿಯೂ ಸ್ನಾನಮಾಡಿ ಜೇನುತುಪ್ಪ ಕಂದಮೂಲಫಲಾದಿಗಳನ್ನು ಆಹಾರ ಮಾಡಿಕೊಂಡು ನಿನ್ನ ಸಹವಾಸದಿಂದ ರಾಜ್ಯಾಧಿಪತ್ಯವನ್ನು ಬಯಸದಿರುವೆನು. ಕಾಡಾನೆ ಸಿಂಹ ವಾನರಗಳೇ ಮೊದಲಾದ ಕಾಡುಮೃಗ ಸಮೂಹಗಳಿಂದ ಇಟ್ಟಣಿಸಿ ಪುಷ್ಪಿತವಾದ ಇಕ್ಕೆಲದ ವೃಕ್ಷಗಳಿಂದಲೂ ಸೇವಿಸಲ್ಪಟ್ಟ ಈ ಮಂದಾಕಿನೀನದಿಯ ತೀರದಲ್ಲಿರುವವರು ಸುಖವಾಗಿರುವರಲ್ಲದೆ ಹಸಿವು ತೃಷೆಗಳಿಂದ ಕಂಗೆಡರು. ಈ ರೀತಿಯಲ್ಲಿ ಮಂದಾಕಿನೀನದಿಯ ಮಹಿಮೆಯನ್ನೂ ಚಿತ್ರಕೂಟಗಿರಿಯ ಮಹಿಮೆಯನ್ನೂ ವರ್ಣಿಸುತ್ತ ಕಥಾಪ್ರಸಂಗಗಳನ್ನು ಹೇಳುತ್ತ ಆ ಗಿರಿಯ ಸಮೀಪದಲ್ಲಿ ಸೀತಾಲಕ್ಷ್ಮಣಸಮೇತನಾಗಿ ಸಂಚರಿಸುತ್ತಿದ್ದನು.

**ಭರತನ ಸೇನೆಯನ್ನು ಕಂಡು ಲಕ್ಷ್ಮಣನ ಕೋಪ**

ಆಮೇಲೆ ಶ್ರೀರಾಮನು ಚಿತ್ರಕೂಟಪರ್ವತದ ತಪ್ಪಲಲ್ಲಿ ಕುಳಿತುಕೊಂಡು ಸೀತಾದೇವಿಗೆ ಆಹಾರದ ಕವಳಗಳನ್ನು ತೋರಿಸುತ್ತ ಇದು ಪವಿತ್ರವಾದದ್ದು : ಇದು ಮಹಾ ಸ್ವಾದುವುಳ್ಳದ್ದು : ಇದು ಅಗ್ನಿಯಿಂದ ಚೆನ್ನಾಗಿ ಪಾಕವಾದಂಥಾದ್ದು ಎಂದು ಬೇರ್ಪಡಿಸಿ ಕೊಡುತ್ತ ಸೀತಾಲಕ್ಷ್ಮಣ ಸಹಿತನಾಗಿ ಕುಳಿತಿದ್ದನು. ಆ ಸಮಯದಲ್ಲಿ ಸಮೀಪಕ್ಕೆ ಬರುತ್ತಿದ್ದ ಭರತನ ಸೇನೆಯಿಂದೆದ್ದ ಕೆಂಧೂಳು ಕಾಣಿಸತೊಡಗಿತು. ಆಮೇಲೆ ಆ ಸೇನೆಯಲ್ಲಿದ್ದ ಜನರ ಕೋಲಾಹಲಧ್ವನಿಯು ಕೇಳಿಸಿತು. ಆ ವನದಲ್ಲಿದ್ದ ಮೃಗಪಕ್ಷಿಗಳು ಆ ಕೋಲಾಹಲಧ್ವನಿಗಳನ್ನು ಕೇಳಿ ಬೆದರಿ ಓಡ ತೊಡಗಿದವು. ಅದನ್ನು ಕಂಡು ಶ್ರೀರಾಮನು ತೇಜಸ್ವಿಯಾದ ಲಕ್ಷ್ಮಣನನ್ನು ನೋಡಿ ಎಲೈ ಲಕ್ಷ್ಮಣ, ಭೂಮಿಯು ಗುಡುಗುವಂತೆ ಭಯಂಕರವಾದ ಧ್ವನಿಯು ಕೇಳಿಸುತ್ತಿದೆ. ಅರಣ್ಯದಲ್ಲಿರುವ ಮೃಗಪಕ್ಷಿಗಳು ಸಿಂಹದಿಂದ ಭಯಪಡುವಂತೆ ಓಡುತ್ತಿವೆ. ಇವು ಸಿಂಹಗಳಿಗೆ ಅಂಜಿಕೊಂಡು ಓಡುತ್ತಿರುವುವೋ ಏನೋ ತಿಳಿಯಲಿಲ್ಲ. ಇದೇನೆಂದು ವಿಚಾರಿಸು. ಈ ಚಿತ್ರಕೂಟಗಿರಿಯು ಸಮಸ್ತ ಮೃಗಪಕ್ಷಿಗಳಿಗೂ ಆಧಾರವಾದದ್ದು. ಆದ್ದರಿಂದ ನೀನು ಶೀಘ್ರವಾಗಿ ಈ ವಿಷಯವನ್ನು ತಿಳಿ ಎಂದು ಹೇಳಿದನು. ಲಕ್ಷ್ಮಣನು ಒಂದು ಉನ್ನತವಾದ ಮರವನ್ನೇರಿ ನಾಲ್ಕು ದಿಕ್ಕುಗಳಲ್ಲಿಯೂ ನೋಡುತ್ತ ಬಡಗಣ ದಿಕ್ಕಿನಲ್ಲಿ ಚತುರಂಗಬಲಸಮೇತವಾದ ಸೇನೆಯನ್ನು ಕಂಡು ಶ್ರೀರಾಮನನ್ನು ಕರೆದು ಶ್ರೀರಾಮ ಈ ಆಶ್ರಮದಲ್ಲಿರುವ ಅಗ್ನಿಯನ್ನು ಶಮನಮಾಡು.

ಮುಂದುವರಿಯುವುದು...

# ಒತ್ತಡದ ನೆರಳಲ್ಲಿ ಪಿಯುಸಿ ಕನಸುಗಳು

**ವಿಶ್ವಾಸ್.ಡಿ.ಗೌಡ**

• **ಉದಯವಾಹಿನಿ, ವಿಶೇಷ**



ಇಂದಿನ ಪಿಯುಸಿ (ಪ್ರಿ-ಯೂನಿವರ್ಸಿಟಿ) ಹಂತದ ವಿದ್ಯಾರ್ಥಿಗಳು ಅತ್ಯಂತ ಸಂಕೀರ್ಣ ಹಾಗೂ ತೀವ್ರ ಮಿಶ್ರ ಭಾವನೆಯ ದಶೆ ಅನುಭವಿಸುತ್ತಿದ್ದಾರೆ. ಅವರು ಜೀವನದ ದಿಕ್ಕು ತೀರ್ಮಾನಿಸಬೇಕಾದ ಮಹತ್ವದ ಹಂತದಲ್ಲಿ ನಿಂತಿದ್ದಾರೆ. ಇದು ಕೇವಲ ಶಾಲೆಯಿಂದ ಕಾಲೇಜಿಗೆ ನಡೆಯುವ ಶೈಕ್ಷಣಿಕ ಸಂಕ್ರಾಂತಿಯಾಗಿಲ್ಲ; ಇದು ಅವರ ವ್ಯಕ್ತಿತ್ವ, ಭವಿಷ್ಯ, ಮತ್ತು ಮಾನಸಿಕ ಸಮತೋಲನವನ್ನು ರೂಪಿಸುವ ಗಂಭೀರ ಹಾದಿ.

**ಶೈಕ್ಷಣಿಕ ಒತ್ತಡ ಪರೀಕ್ಷೆಗಳ ಪೆಟ್ಟಿಗೆ:** ಈ ದಿನಗಳಲ್ಲಿ ಪಿಯುಸಿ ಶಿಕ್ಷಣವು ಸ್ಪರ್ಧಾತ್ಮಕ ಮ್ಯಾರಥಾನ್ ಆಗಿದೆ. ಮಕ್ಕಳು NEET, JEE, CET ACU ಅಥವಾ ಅಂ ತರಹದ ವೃತ್ತಿಪರ ಪ್ರವೇಶ ಪರೀಕ್ಷೆಗಳ ಸಿದ್ಧತೆಯಲ್ಲಿ ಮಗ್ನರಾಗಿದ್ದಾರೆ. ಸಾಮಾನ್ಯವಾಗಿ, ಪಿಯುಸಿ ವಿದ್ಯಾರ್ಥಿಗಳು ಶಾಲೆಯ ಪಾಠಗಳ ಜೊತೆಗೆ ಕೋಚಿಂಗ್ ಸೆಂಟರ್‌ಗಳಲ್ಲಿಯೂ ವ್ಯಸ್ತರಾಗಿದ್ದಾರೆ. ದಿನಕ್ಕೆ 10-12 ಗಂಟೆಗಳ ವ್ಯಾಸಂಗವು ಸಾಮಾನ್ಯ. ಈ ತೀಕ್ಷ್ಣ ಪಠ್ಯಕ್ರಮ ಮಕ್ಕಳನ್ನು ಯಂತ್ರಗಳಂತಾಗಿ ರೂಪಿಸುತ್ತಿದೆ. ಪಾಠಪಾಠಾಂತರದ ಮಧ್ಯೆ ಅವರು ತಮ್ಮ ಕೌಶಲ್ಯ, ಶ್ರುಷ್ಟಿ, ಆಸಕ್ತಿಗಳನ್ನು ಅರಿತು ಬೆಳೆಸಿಕೊಳ್ಳುವ ಅವಕಾಶವಿಲ್ಲದೆ ಹೋಗುತ್ತಿದೆ.

**ಅಂಕಪ್ರದಾನ ವ್ಯವಸ್ಥೆಯ ಮರೆಚುಂಬಿ:** ನಮ್ಮ ಶಿಕ್ಷಣ ವ್ಯವಸ್ಥೆಯಲ್ಲಿ ಅಂಕ ಎಂಬ ಅಳತೆಯೆ ಏಕೆಂದರೆ ಜೀವನದ ಏಳುಗೆಯೇ ಅಂಕರ ಮೇಲೆ ನಿಂತಿರೋ ಹಾಗೆ ಪ್ರತೀತಿಯಿದೆ. ಪಿಯುಸಿ ವಿದ್ಯಾರ್ಥಿಗಳ ವ್ಯಕ್ತಿತ್ವ, ಸಾಮರ್ಥ್ಯ, ನೈಪುಣ್ಯತೆಗಳಿಗಿಂತಲೂ ಹೆಚ್ಚಾಗಿ ಶೇ. 95 ಶೇ. 98 ಅಂಕಗಳಿಗೆ ಹೆಚ್ಚು ಒತ್ತುಗೆಯಿದೆ. ಈ ನಿರೀಕ್ಷೆಗಳು ಮಕ್ಕಳ ಮೇಲೆ ಭಾರೀ ಮನೋವೈಜ್ಞಾನಿಕ ಒತ್ತಡವನ್ನು ಹೇರುತ್ತವೆ. ಇನ್ನು ಉತ್ತಮವಾಗಬಹುದು, ಅವನು ಹೀಗೆ ಮಾಡಿದ, ನೀನು ಏಕೆ ಇಲ್ಲ?'' ಎಂಬ ಮಾತುಗಳು ಮಕ್ಕಳ ಆತ್ಮಸ್ಥೈರ್ಯವನ್ನು ಕುಗ್ಗಿಸುತ್ತವೆ.

**ತಂತ್ರಜ್ಞಾನ ಆಶೀರ್ವಾದ ಅಥವಾ ಅಶಾಂತಿ:** ಇಂದಿನ ಪಿಯುಸಿ ವಿದ್ಯಾರ್ಥಿಗಳು ಮೊಬೈಲ್, ಇಂಟರ್ನೆಟ್, ಸ್ಮಾರ್ಟ್ ಕ್ಲಾಸ್, ಯೂಟ್ಯೂಬ್ ತರಹದ learning platforms ನೊಂದಿಗೆ ಬೆಳೆದು ಬರುವ ತಲೆಮಾರು. ತಂತ್ರಜ್ಞಾನ ಶಿಕ್ಷಣಕ್ಕೆ ಸಹಾಯ ಮಾಡುತ್ತಿದೆ ಎಂಬುದರಲ್ಲಿ ಸಂದೇಹವಿಲ್ಲ. ಆದರೆ ಈ ತಂತ್ರಜ್ಞಾನವೇ distraction ಆಗಿ ಪರಿಣಮಿಸುತ್ತಿದೆ. ಸೋಷಿಯಲ್ ಮೀಡಿಯಾ, ಗೇಮಿಂಗ್, ರೀಲ್‌ಗಳ ನಶೆ ವಿದ್ಯಾರ್ಥಿಗಳನ್ನು ಅಧ್ಯಯನದಿಂದ ದೂರವಿಟ್ಟು ಅವಧಿ ಬಡಿದೆಯೆಂಬ ಅರಿವಿಲ್ಲದಂತೆ ಮಾಡುತ್ತದೆ. ಇಂತಹಲ್ಲಿ ಸಮಯ ನಿರ್ವಹಣೆಯ ಶಿಸ್ತು ಬಹಳ ಅವಶ್ಯಕ.

**ಭಾವನಾತ್ಮಕ ಮತ್ತು ಮಾನಸಿಕ ಬೆಳವಣಿಗೆಯ ಹಾದಿ :** ಪಿಯುಸಿ ವಿದ್ಯಾರ್ಥಿಗಳ ಮನಸ್ಸು ಈ ಹಂತದಲ್ಲಿ ತೀವ್ರ ಬದಲಾವಣೆಗಳನ್ನು ಅನುಭವಿಸುತ್ತದೆ. ಸ್ನೇಹ, ಪ್ರೀತಿಯ ಪ್ರಾರಂಭಿಕ ಅನುಭವಗಳು, ಸ್ವಪ್ನಗಳು ಮತ್ತು ಆತ್ಮ ಗುರುತಿನ ಹುಡುಕಾಟ ಇವೆಲ್ಲವೂ ಅವರ ಚಿಂತನೆಗಳಲ್ಲಿರುತ್ತವೆ. ಆದರೆ ಈ ವಿಷಯಗಳ ಬಗ್ಗೆ ಪೋಷಕರು, ಶಿಕ್ಷಕರು ಮಾತನಾಡಲು ಮುಕ್ತವಾಗಿಲ್ಲ. ತಕ್ಷಣ 'ಅವಧು', 'ತಪ್ಪು' ಎಂಬ ಮುದ್ರೆ ಹಾಕಲಾಗುತ್ತದೆ. ಇದರಿಂದ ಮಕ್ಕಳು withdrawn ಆಗುತ್ತಾರೆ, ಯಾವತ್ತೂ ಒಬ್ಬಂಟಿಯಾಗಿ ತ್ಯಜಿಸಿ ಹೋಗುತ್ತಾರೆ. ಇದು ತೀವ್ರವಾದ ಮಾನಸಿಕ ಸಂಕಟಕ್ಕೆ ದಾರಿ ಮಾಡುತ್ತದೆ.

**ಸಮಾಜ, ಕುಟುಂಬದ ಬಲವಂತದ ನಿರೀಕ್ಷೆಗಳು:** ಡಾಕ್ಟರ್ ಆಗ್ಬೇಕು ಇಂಜಿನಿಯರ್ ಆಗ್ಬೇಕು, ಅನ್ನ ತಮ್ಮನಂತೆ IAS ಆಗು ಇವು ಕುಟುಂಬ, ಶ್ರೇಣಿಕತೆಯ, ಅಥವಾ ಪಕ್ಕದ ಮನೆಯಲ್ಲಿನ ಹೋಲಿಕೆಯ ಫಲಿತಾಂಶಗಳು. ಮಕ್ಕಳು ತಮ್ಮ ಆಸಕ್ತಿಗೆ ತಕ್ಕ ಹಾದಿಯನ್ನು ತೀರ್ಮಾನಿಸಿಕೊಳ್ಳುವ ಅವಕಾಶವಿಲ್ಲದೆ, imposed ambitions ನತ್ತ ಎಳೆದೊಯ್ಯಲ್ಪಡುತ್ತಿದ್ದಾರೆ. ಈ ಒತ್ತಡದ ಮಧ್ಯೆ ಮಕ್ಕಳ ವೈಯಕ್ತಿಕ ಆಸಕ್ತಿಗಳು, ಕಲ್ಪನೆಗಳು ಮತ್ತು ಭವಿಷ್ಯದ ಕನಸುಗಳು ನುಜ್ಜುಗೊಳ್ಳುತ್ತವೆ.

**ಪರಿಹಾರ ಮತ್ತು ಮಾರ್ಗಗಳು:** ಪೋಷಕರಲ್ಲಿ ಸ್ಪಂದನೆ: ಪೋಷಕರು open communication ನಡೆಸುವುದು ಅತ್ಯಾವಶ್ಯಕ. ಮಕ್ಕಳ ಭಯ, ಒತ್ತಡ, ಕನಸುಗಳನ್ನು ಕೇಳಿ, ಮನವಿ ಮಾಡಿ, ಸಮಾಧಾನದಿಂದ ನಿರ್ಧಾರ ತೆಗೆದುಕೊಳ್ಳಲು ಸಹಾಯ ಮಾಡಬೇಕು. **ಸಮತೋಲನದ ಶಿಕ್ಷಣ:** ಪಠ್ಯ ಪಾಠದ ಜೊತೆಗೆ ಕೌಶಲ್ಯಾಭಿವೃದ್ಧಿ, ವ್ಯಕ್ತಿತ್ವ ವಿಕಾಸ ತರಗತಿಗಳು ಅನಿವಾರ್ಯ. ಈ ಮೂಲಕ ಮಕ್ಕಳು ಪಠ್ಯದಿಂದ ಹೊರಗೆ ಲೋಕವನ್ನು ಅರಿಯುವ ಅವಕಾಶ ಪಡೆಯುತ್ತಾರೆ.

**ಮಾನಸಿಕ ಆರೋಗ್ಯದ ಬಗ್ಗೆ ಜಾಗೃತಿ:** ವಿದ್ಯಾರ್ಥಿಗಳಿಗೆ ಖಾಸಗಿ ಕೌನ್ಸೆಲಿಂಗ್, ಶಾಲಾ ಮಟ್ಟದ well-being workshops ಅಗತ್ಯ. ಪ್ರತಿಯೊಂದು ಕಾಲೇಜು ಮನೋವೈಜ್ಞಾನಿಕ ಸಲಹೆಗಾರನನ್ನು ಹೊಂದಬೇಕು.

**ಆಸಕ್ತಿಗೆ ತಕ್ಕ ದಿಕ್ಕು:** ವಿದ್ಯಾರ್ಥಿಯು ವಿಜ್ಞಾನದಲ್ಲಿ ಅಲ್ಲ, ಬದಲಾಗಿ ಸಾಹಿತ್ಯದಲ್ಲಿ ಪ್ರಗತಿಶೀಲರೆಂದರೆ ಆ ಹಾದಿಗೆ ಒತ್ತಾಸೆ ನೀಡಬೇಕು. ಕನಸು ಅವರದು ಆದ್ದರಿಂದ ಆಯ್ಕೆಗೂ ಅವರಿಗೇ ಆದ್ಯತೆ ಇರಬೇಕು. ಈಗ ಪಿಯುಸಿ ಓದುತ್ತಿರುವ ತಲೆಮಾರು ಅತ್ಯಂತ ಬುದ್ಧಿವಂತ, ಪ್ರಜ್ಞಾವಂತ ಮತ್ತು ನಿರಂತರ ಆತ್ಮಪರಿಶೀಲನೆಯ ಹಾದಿಯಲ್ಲಿ ಸಾಗುತ್ತಿದೆ. ಅವರು ಪುಸ್ತಕಗಳ ಹೊರಗಾದ ಜಗತ್ತನ್ನು ಅರಿಯುವ ಕನಸು ಹೊತ್ತಿದ್ದಾರೆ.

ಆದರೆ ಈ ಕನಸುಗಳು ಒತ್ತಡ, ಹೋಲಿಕೆ, ನಿರೀಕ್ಷೆ ಎಂಬ ಹಗ್ಗಗಳಲ್ಲಿ ಕಟ್ಟಿಹಾಕಲ್ಪಡದಂತಿರಲಿ. ಪೋಷಕರು, ಶಿಕ್ಷಕರು, ಸಮಾಜ ಎಲ್ಲಾರೂ ಮೌನವಲ್ಲ, ಸ್ಪಂದನೆಯೊಂದಿಗೆ, ಸಹಾಯ ಮಾಡುವ ಹಸ್ತವಿಟ್ಟು ಈ ಮಕ್ಕಳ ಪಾಠದೊಳಗಿನ ಭವಿಷ್ಯವನ್ನು ಪ್ರಜ್ವಲಿಸಲು ಜೊತೆಯಾಗಬೇಕು.



**ಶಿಕ್ಷಕರ ಪಾತ್ರ ಮಾರ್ಗದರ್ಶಕರಾಗಲೇ ಬೇಕೆ**

**ಪದವಿಪೂರ್ವ ಶಿಕ್ಷಣ ಹಂತದಲ್ಲಿ ಶಿಕ್ಷಕರು ಕೇವಲ ಪಾಠ ಹೇಳಿಕೊಡುವವರು ಅಲ್ಲ. ಅವರು ಮಕ್ಕಳನ್ನು ಬದುಕಿನ ಪಾಠಕ್ಕೂ ತಯಾರಾಗಿಸಲು ಸಾಧ್ಯವಾಗಬೇಕು. ಆದರೆ ಕೆಲವೊಮ್ಮೆ ಶಿಕ್ಷಕರಿಗೆ ಕಾಲಾವಕಾಶವಿಲ್ಲ, ಸಂವೇದನೆ ಇಲ್ಲ, ಅಥವಾ ನಿಜವಾದ ಮೌಲ್ಯಾಧಾರಿತ ಶಿಕ್ಷಣದ ಅರಿವು ಕಡಿಮೆ. ವಿದ್ಯಾರ್ಥಿಗೆ ಉತ್ತಮ ಶಿಕ್ಷಕ ಸಿಕ್ಕರೆ ಅದು ಅವರ ಬದುಕಿನ ದಿಕ್ಕೇ ಬದಲಾಯಿಸಬಲ್ಲದು. ಹೀಗಾಗಿ ಶಿಕ್ಷಣ ಸಂಸ್ಥೆಗಳೂ ಶಿಕ್ಷಕರ ಸಾಮರ್ಥ್ಯವನ್ನೂ ಈ ಹಂತದಲ್ಲಿ ಶ್ರದ್ಧೆಯಿಂದ ರೂಪಿಸಬೇಕು.**

# ರಾಜ್ಯೋತ್ಸವಕ್ಕೆ 2 ಕೋಟಿ ಅನುದಾನ ಕೊಡಿ: ಕನ್ನಡ ಹೋರಾಟಗಾರರ ಒತ್ತಾಯ

• **ಉದಯವಾಹಿನಿ, ಬೆಳಗಾವಿ**

ಲಕ್ಷಾಂತರ ಕನ್ನಡಿಗರು ಸೇರಿ ಬೆಳಗಾವಿಯಲ್ಲಿ ಅದ್ದೂರಿಯಾಗಿ ಆಚರಿಸುವ ಕರ್ನಾಟಕ ರಾಜ್ಯೋತ್ಸವಕ್ಕೆ ರಾಜ್ಯ ಸರ್ಕಾರದಿಂದ ಪ್ರತಿ ವರ್ಷ 2 ಕೋಟಿ ಅನುದಾನ ನೀಡಬೇಕು. ನಾಡವಿರೋಧಿ ಚಟುವಟಿಕೆ ಕೈಗೊಳ್ಳುವ ಮಹಾರಾಷ್ಟ್ರ ಏಕೀಕರಣ ಸಮಿತಿ ಅನ್ನು ರಾಜ್ಯದಿಂದ ನಿಷೇಧಿಸಬೇಕು ಎಂದು ಕನ್ನಡ ಹೋರಾಟಗಾರರು ಒತ್ತಾಯಿಸಿದರು. ಇಲ್ಲಿನ ಸರ್ಕಾರಿ ಪ್ರವಾಸಿ ಮಂದಿರದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರಷೋತ್ತಮ ಬಿಳಿಮಲೆ ಅಧ್ಯಕ್ಷತೆಯಲ್ಲಿ ಗುರುವಾರ ಆಯೋಜಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಗಡಿ ಹಿತರಕ್ಷಣೆ ಕಾಪಾಡಲು ರಚಿಸಿರುವ ಆಯೋಗ ಮತ್ತು ಪ್ರಾಧಿಕಾರಗಳು ಮೂರು ತಿಂಗಳಿಗೊಮ್ಮೆ ಬೆಳಗಾವಿಯಲ್ಲಿ ಸಭೆ ನಡೆಸಿ, ಕನ್ನಡಿಗರ ಅಹವಾಲು ಕೇಳಬೇಕು' ಎಂದು ಆಗ್ರಹಿಸಿದರು. ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಅಶೋಕ ಚಂದರಗಿ, ಕರ್ನಾಟಕ ಗಡಿ ಮತ್ತು ನದಿಗಳ ಸಂರಕ್ಷಣಾ ಆಯೋಗ, ಕರ್ನಾಟಕ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಪ್ರಾದೇಶಿಕ


ಉದಯವಾಹಿನಿ ಚಿತ್ರ

ಕಚೇರಿಗಳನ್ನು ಸುವರ್ಣ ವಿಧಾನಸೌಧದಲ್ಲಿ ಆರಂಭಕ್ಕೆ ಸರ್ಕಾರ ಕ್ರಮ ವಹಿಸಬೇಕು. ಇದರಿಂದ ಗಡಿ ಕನ್ನಡಿಗರ ಅಹವಾಲುಗಳನ್ನು ಬೇಗ ಬಗೆಹರಿಸಲು ಮತ್ತು ಮನವಿ ಸಲ್ಲಿಕೆಗಾಗಿ ಕನ್ನಡಿಗರು ರಾಜಧಾನಿಗೆ ಅಲೆದಾಡುವುದು ತಪ್ಪುತ್ತದೆ ಎಂದರು.

ಜಿಲ್ಲೆ, ತಾಲ್ಲೂಕು, ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕನ್ನಡ ಜಾಗೃತಿ ಸಮಿತಿ ರಚಿಸಿ, ಅದರ ಪದಾಧಿಕಾರಿಗಳಿಗೆ ಕೆಡಿಪಿ ಸಭೆಗಳಿಗೆ ಹಾಜರಾಗಲು ಅವಕಾಶ ನೀಡಬೇಕು ಎಂದು ಒತ್ತಾಯಿಸಿದರು. ಮುಖಂಡ ಮಹಾದೇವ ತಳವಾರ, ರಾಜ್ಯದಲ್ಲಿ ಇದೇ ಶೈಕ್ಷಣಿಕ ವರ್ಷದಿಂದ 4 ಸಾವಿರ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಇಂಗ್ಲಿಷ್ ಮಾಧ್ಯಮ ಆರಂಭಕ್ಕೆ ಮುಂದಾಗಿರುವ ಸರ್ಕಾರ ಸರಿಯಲ್ಲ. ಇದರ ಬದಲಿಗೆ ಕನ್ನಡ ಶಾಲೆಗಳನ್ನೇ ಸಬಲೀಕರಣಗೊಳಿಸುವ ಕೆಲಸವಾಗಬೇಕು. ಅವುಗಳಿಗೆ ಶೌಚಗೃಹ ಸೇರಿ ಮೂಲಸೌಕರ್ಯ ಕಲ್ಪಿಸಬೇಕು' ಎಂದು ಒತ್ತಾಯಿಸಿದರು. ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದ ಅಧ್ಯಕ್ಷ ದೀಪಕ ಗುಡಗನಟ್ಟಿ, ಗಡಿಯಲ್ಲಿ ಕನ್ನಡದ ಉಳಿವಿಗೆ ಹೋರಾಟ ಮಾಡಿದವರಿಗೆ ರೌಡಿಶೀಟರ್ ಪಟ್ಟಿ, ಕೇಸು ಹಾಕುವ ಪ್ರಯತ್ನ ನಡೆಯುತ್ತಿದೆ. ಇದಕ್ಕೆ ಕಡಿವಾಣ ಹಾಕಿ, ಕನ್ನಡ ಹೋರಾಟಗಾರರ ಮೇಲೆ ದಾಖಲಿಸಿದ ಕೇಸುಗಳನ್ನು ರದ್ದುಪಡಿಸಬೇಕು. ಸದಾ ನಾಡವಿರೋಧಿ ಕೆಲಸ ಮಾಡುತ್ತಿರುವ ಎಂಇಎಸ್ ನಿಷೇಧಿಸಬೇಕು. ಜತೆಗೆ ಕನ್ನಡಕ್ಕೆ ಧಕ್ಕೆ ತರುವವರನ್ನು ಗಡೀಪಾರು ಮಾಡಬೇಕು ಎಂದು ಆಗ್ರಹಿಸಿದರು.

ತಮ್ಮ ಬೇಡಿಕೆಗಳನ್ನು ಸರ್ಕಾರದ ಗಮನಕ್ಕೆ ತಂದು ಈಡೇರಿಸಲು ಪ್ರಯತ್ನಿಸಬೇಕು. ಮುಂದಿನ ದಿನಗಳಲ್ಲಿ ಕನ್ನಡ ಸಂಘಟನೆಗಳ ಪದಾಧಿಕಾರಿಗಳ ಜತೆ ಸುಧೀರ್ಘವಾಗಿ ಸಭೆ ನಡೆಸುತ್ತೇವೆ ಎಂದು ಬಿಳಿಮಲೆ ಪುರುಷೋತ್ತಮ ಭರವಸೆ ಕೊಟ್ಟರು.

**ಸಭೆಯಲ್ಲಿ ಕೇಳಿಬಂದ ಬೇಡಿಕೆಗಳು**

- ಮೈಸೂರು ದಸರಾ ಮಾದರಿಯಲ್ಲಿ ಬೆಳಗಾವಿಯಲ್ಲಿ ಕರ್ನಾಟಕ ರಾಜ್ಯೋತ್ಸವ ಆಚರಿಸಬೇಕು.
- ಅಂಗಡಿ-ಮುಂಗಟ್ಟುಗಳ ನಾಮಫಲಕ ಮತ್ತು ಜಾಹೀರಾತು ಫಲಕಗಳಲ್ಲಿ ಆದ್ಯತೆ ಮೇಲೆ ಕನ್ನಡ ಬಳಸದವರ ವಿರುದ್ಧ ಕ್ರಮವಾಗಬೇಕು.
- ಸಾಂಬ್ರಾ ವಿಮಾನ ನಿಲ್ದಾಣಕ್ಕೆ ಕಿತ್ತೂರು ರಾಣಿ ಚನ್ನಮ್ಮನ ಹೆಸರು ನಾಮಕರಣ ಮಾಡಬೇಕು.
- ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಹೆಸರನ್ನು ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯವೆಂದು ಬದಲಿಸಬೇಕು.
- ಕನ್ನಡ ಕಲಾವಿದರನ್ನು ಪ್ರೋತ್ಸಾಹಿಸುವ ಕೆಲಸವಾಗಬೇಕು.



## ಮಿನಿ ನ್ಯೂಸ್

### ಯಲ್ಲಮ್ಮಗುಡ್ಡ: 3 ತಿಂಗಳಲ್ಲಿ 3.81 ಕೋಟಿ ರೂ.ಕಾಣಿಕೆ

• **ಉದಯವಾಹಿನಿ, ಉಗರಗೋಳ**

ಯಲ್ಲಮ್ಮನಗುಡ್ಡದ ಯಲ್ಲಮ್ಮ ದೇವಸ್ಥಾನದ ಹುಂಡಿಗಳ ಎಣಿಕೆ ಮುಗಿದಿದ್ದು, ಮೂರು ತಿಂಗಳಲ್ಲಿ 3.81 ಕೋಟಿ ಮೌಲ್ಯದ ಕಾಣಿಕೆ ಸಂಗ್ರಹವಾಗಿದೆ. ಇದರಲ್ಲಿ 3.39 ಕೋಟಿ ನಗದು, 32.94 ಲಕ್ಷ ಮೌಲ್ಯದ 340 ಗ್ರಾಂ ಚಿನ್ನಾಭರಣ, 9.79 ಲಕ್ಷ ಮೌಲ್ಯದ 8 ಕೆ.ಜಿ ಬೆಳ್ಳಿ ಆಭರಣ ಸೇರಿವೆ. 2025ರ ಏ. 1ರಿಂದ ಜೂ. 30ರ ಅವಧಿಯಲ್ಲಿ ಹಾಕಿದ್ದ ಕಾಣಿಕೆಯನ್ನು ಐದು ಸುತ್ತುಗಳಲ್ಲಿ ಎಣಿಕೆ ಮಾಡಲಾಯಿತು. 2023ರಲ್ಲಿ 1.65 ಕೋಟಿ ಮತ್ತು 2024ರಲ್ಲಿ 1.96 ಕೋಟಿ ಕಾಣಿಕೆ ಸಂಗ್ರಹವಾಗಿತ್ತು ಎಂದು ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಅಶೋಕ ದುಡಗುಂಟಿ ತಿಳಿಸಿದರು.

### ಅರಸೀಕೆರೆ ಶಾಸಕ ಶಿವಲಿಂಗೇಗೌಡರ ಅಧ್ಯಕ್ಷತೆಯಲ್ಲಿ ಜನಸಂಪರ್ಕ ಸಭೆ

• **ಉದಯವಾಹಿನಿ, ಅರಸೀಕೆರೆ**



ಶುಕ್ರವಾರ ನಡೆಯಲಿರುವ ಜನ ಸಂಪರ್ಕ ಸಭೆ ಅರಸೀಕೆರೆ ವಿಧಾನಸಭಾ ಕ್ಷೇತ್ರದಲ್ಲಿ ನಾಗರೀಕರಿಗೆ ರೈತರಿಗೆ ಸರ್ಕಾರದಿಂದ ದೊರೆಯಬಹುದಾದ ಸೌಲಭ್ಯಗಳ ಬಗ್ಗೆ, ಹಲವಾರು ಇಲಾಖೆಗಳ ತಾಂತ್ರಿಕ ದೋಷದಿಂದ ಸೌಲಭ್ಯಗಳು ವಿಳಂಬವಾದ ಅಂತಹ ಸಮಸ್ಯೆಗಳನ್ನು ಶೀಘ್ರವಾಗಿ ಪರಿಹರಿಸುವುದುಕ್ಕಾಗಿ ಅರಸೀಕೆರೆ ಕ್ಷೇತ್ರದ ಶಾಸಕರು ಹಾಗೂ ಗೃಹ ಮಂಡಳಿ ಅಧ್ಯಕ್ಷರಾದ ಕೆಎಂ ಶಿವಲಿಂಗೇಗೌಡರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದ್ದು ಇದರ ಸದುಪಯೋಗವನ್ನು ತಾಲೂಕಿನ ನಾಗರೀಕರು ಉಪಯೋಗಿಸಿಕೊಳ್ಳಬಹುದಾಗಿದೆ.

ನಗರಸಭೆ ವತಿಯಿಂದ ಬಿ ಖಾತಾ ವಿತರಣೆ ಎಂ ಸಮೀವುಲ್ಲಾ ಶುಕ್ರವಾರ ನಡೆಯಲಿರುವ ಜನ ಸಂಪರ್ಕ ಸಭೆಯಲ್ಲಿ ಅರಸೀಕೆರೆ ನಗರದ ನಾಗರೀಕರ ಬಹಳ ದಿನಗಳ ಸಮಸ್ಯೆಯಾಗಿದ್ದ ಕಂದಾಯ ನಿವೇಶನಗಳಿಗೆ ನಗರಸಭೆ ವತಿಯಿಂದ ಬಿ ಖಾತೆಗೆ ಅರ್ಜಿ ಸಲ್ಲಿಸಿ ಕಾಯುತ್ತಿದ್ದ ಸುಮಾರು 180 ಫಲಾನುಭವಿಗಳಿಗೆ ಅರಸೀಕೆರೆ ಕ್ಷೇತ್ರದ ಶಾಸಕರು, ಕರ್ನಾಟಕ ಸರ್ಕಾರದ ಗೃಹ ಮಂಡಳಿ ಅಧ್ಯಕ್ಷರಾದ ಕೆ ಎಮ್ ಶಿವಲಿಂಗೇಗೌಡರ ಸಮ್ಮುಖದಲ್ಲಿ ನಗರಸಭೆ ವತಿಯಿಂದ ವಿತರಿಸಲಾಗುವುದೆಂದು ಅರಸೀಕೆರೆ ನಗರಸಭೆಯ ಅಧ್ಯಕ್ಷರಾದ ಎಮ್ ಸಮೀವುಲ್ಲಾ ತಿಳಿಸಿದರು.

### ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರಕ್ಕೆ ಪುಸ್ತಕ ಆಹ್ವಾನ

• **ಉದಯವಾಹಿನಿ, ಗದಗ**

ಪಂ. ಪುಟ್ಟರಾಜ ಸೇವಾ ಸಮಿತಿಯು ತ್ರಿಭಾಷಾ ಕವಿ ಗುರು ಪುಟ್ಟರಾಜರ ಸಾಹಿತ್ಯ ಸೇವೆಯ ಸ್ಮರಣೆಯಲ್ಲಿ 23 ವರ್ಷಗಳಿಂದ ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರ ರಾಜ್ಯ ಪ್ರಶಸ್ತಿ ನೀಡುತ್ತಾ ಬಂದಿದೆ. ಅದರಂತೆ ಈ ವರ್ಷ ಕೂಡ ಈ ಪ್ರಶಸ್ತಿಗಾಗಿ 2024-25ನೇ ಸಾಲಿನಲ್ಲಿ ಪ್ರಕಟವಾದ ಕನ್ನಡ, ಹಿಂದಿ, ಸಂಸ್ಕೃತ ಭಾಷೆಯ ಸಾಹಿತ್ಯದ ಎಲ್ಲಾ ಪ್ರಕಾರಗಳ ಕೃತಿಗಳನ್ನು ಆಹ್ವಾನಿಸಲಾಗಿದೆ. ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರ ರಾಜ್ಯ ಪ್ರಶಸ್ತಿಗೆ ಕನ್ನಡದ ಕೃತಿಗಳನ್ನು ಮಾತ್ರ ಆಯ್ಕೆ ಮಾಡಲಾಗುವುದು. ಹಿಂದಿ, ಸಂಸ್ಕೃತ ಕೃತಿಗಳಲ್ಲಿ ಉತ್ತಮ ಕೃತಿ ಆಯ್ಕೆಮಾಡಿ ಉತ್ತಮ ಕೃತಿಕರ್ತರಿಗೆ 'ಪುಟ್ಟರಾಜ ಸಾಹಿತ್ಯ ಸಮ್ಮಾನ ಪ್ರಶಸ್ತಿ ನೀಡಲಾಗುವುದು.

ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರ ರಾಜ್ಯ ಪ್ರಶಸ್ತಿಯು 5ಸಾವಿರ ನಗದು, ಸ್ಮರಣಿಕೆ ಮತ್ತು ಪ್ರಶಸ್ತಿಪತ್ರ ಒಳಗೊಂಡಿದೆ. ಪ್ರಶಸ್ತಿಗೆ ಆಯ್ಕೆಯಾದ ಕೃತಿ ಕರ್ತರಿಗೆ ದಾಂಡೇಲಿಯಲ್ಲಿ ನಡೆಯುವ ಪಂ. ಪುಟ್ಟರಾಜರ ಪುಣ್ಯಸ್ಮರಣೋತ್ಸವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಇದೇ ಸಂದರ್ಭದಲ್ಲಿ ಪ್ರಶಸ್ತಿಗೆ ಸಮೀಪದ ಪ್ರತಿಸ್ಪರ್ಧಿಯಾದ ವಿವಿಧ ಪ್ರಕಾರದ 10 ಕೃತಿಗಳನ್ನು ಗುರುತಿಸಿ, ವರ್ಷದ ಶ್ರೇಷ್ಠ ಕೃತಿ ರತ್ನ ಸಮ್ಮಾನ ನೀಡಿ ಗೌರವಿಸಲಾಗುವುದು ಎಂದು ಸೇವಾ ಸಮಿತಿಯ ರಾಜ್ಯ ಸಂಚಾಲಕ, ಸಾಹಿತ್ಯ ಪುರಸ್ಕಾರ ಆಯ್ಕೆ ಸಮಿತಿಯ ಸದಸ್ಯ ಸಂಚಾಲಕಿ ಸುಮಾ ಹಡಪದ ಹಳಿಯಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆಸಕ್ತ ಲೇಖಕರು ತಮ್ಮ ಭಾವಚಿತ್ರ ಸಹಿತ ಪರಿಚಯ ಪತ್ರ, 2024ರ ಏಪ್ರಿಲ್ 1ರಿಂದ 2025ರ ಮಾರ್ಚ್ 31ರ ಒಳಗೆ ಪ್ರಕಟವಾದ 3 ಕೃತಿಗಳೊಂದಿಗೆ ಆಗಸ್ಟ್ 15ರ ಒಳಗಾಗಿ ತಲುಪುವಂತೆ ಕಳಿಸಿಕೊಡಲು ಕೋರಲಾಗಿದೆ.

**ಪುಸ್ತಕಗಳನ್ನು ಕಳಿಸಿಕೊಡಬೇಕಾದ ವಿಳಾಸ:** ಸಿ.ಕೆ.ಎಚ್ ಶಾಸ್ತ್ರೀ (ಕಡಣಿ), ಸದಸ್ಯರು, ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರ ಪ್ರಶಸ್ತಿ ಆಯ್ಕೆ ಸಮಿತಿ, ಸಮನ್ವಯ 332, ಕೆಎಚ್ ಬಿ ಕಾಲೋನಿ, ರಾಜೀವ್‌ಗಾಂಧಿ ನಗರ, ಗದಗ -582101. : 98867 17732 ಸಂಪರ್ಕಿಸಬಹುದು.

### ಹುಣಸಗಿ: ಮುಖ್ಯ ರಸ್ತೆ ದುರಸ್ತಿಗೊಳಿಸಿದ ಗ್ರಾಮಸ್ಥರು

• **ಉದಯವಾಹಿನಿ, ಹುಣಸಗಿ**

ತಾಲ್ಲೂಕಿನ ತೆಗ್ಗಳ್ಳಿ ಗ್ರಾಮದ ಗ್ರಾಮಸ್ಥರು ತಾವೇ ಹಣ ಸಂಗ್ರಹಿಸಿ ಗ್ರಾಮದ ರಸ್ತೆಯನ್ನು ದುರಸ್ತಿಗೊಳಿಸಿದ್ದಾರೆ. ಕೆಲ ವರ್ಷಗಳ ಹಿಂದೆ ಈ ಗ್ರಾಮದ ರಸ್ತೆಯನ್ನು ನಿರ್ಮಿಸಲಾಗಿತ್ತು. ಆ ಬಳಿಕ ಯಾವುದೇ ದುರಸ್ತಿ ಕಾರ್ಯ ಕೈಗೊಂಡಿರಲಿಲ್ಲ. ಇದರಿಂದಾಗಿ ನಿತ್ಯ ಸಂಚಾರಕ್ಕೆ ಸಾಕಷ್ಟು ಪರದಾಡುವಂತಾಗಿತ್ತು.



ಸುಮಾರು ಮೂರು ಕಿ.ಮೀಟರ್ ರಸ್ತೆಯನ್ನು ಕ್ರಮಿಸಲು ಹರಸಾಹಸ ಪಡುವಂತಾಗಿತ್ತು. ಹದೆಗೆಟ್ಟ ರಸ್ತೆಯಲ್ಲಿ ಒಂದು ಬಾರಿ ಹೆರಿಗೆ ಕೂಡಾ ಆಗಿತ್ತು. ಆದ್ದರಿಂದ ಗ್ರಾಮಸ್ಥರು ಕೂಡಿಕೊಂಡು ಮನೆಗೆ ಐದು ಸಾವಿರದಂತೆ ಸಂಗ್ರಹಿಸಿ ಸುಮಾರು 1.50 ಲಕ್ಷ ವೆಚ್ಚದಲ್ಲಿ ರಸ್ತೆಯ ಗುಂಡಿಗಳನ್ನು ಮುಚ್ಚಲಾಗಿದೆ ಎಂದು ಶಿವಪುತ್ರಪ್ಪ ಮುಕ್ಕಣ್ಣರ, ಬಸನಗೌಡ ಮೇಟಿ, ಅಮರೇಶ ಮುಕ್ಕಣ್ಣರ, ಭೀಮರಾಯ ದೊಡ್ಡಮನಿ ತಿಳಿಸಿದರು.

ಗ್ರಾಮದ ಭಗಿರಥ ವೃತ್ತದಿಂದ ಬೈಚಬಾಳ ಗ್ರಾಮದವರೆಗೆ ಅಗತೀರ್ಥ ಬೈಚಬಾಳ ಮುಖ್ಯರಸ್ತೆಗೆ ಸಂಪರ್ಕ ಕಲ್ಪಿಸುವ ಈ ರಸ್ತೆಯನ್ನು ದುರಸ್ತಿ ಮಾಡಿ ಮುರಮ್ ಹಾಕಲಾಗಿದೆ ಎಂದು ಭೀಮರಾಯ ಸಾಧೂ, ಮಹಾದೇವಪ್ಪ ಕಾಚಾಪುರ, ಹಳ್ಳಪ್ಪ ಹಾಗೂ ಗ್ರಾಮಸ್ಥರು ಹೇಳಿದರು. ಇನ್ನಾದರೂ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ನಮ್ಮ ಗ್ರಾಮಕ್ಕೆ ಭೇಟಿ ನೀಡಿ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಮುಂದಾಗಲಿ ಎಂದು ಒತ್ತಾಯಿಸಿದ್ದಾರೆ.

# ನದಿ ಹರಿವು ಹೆಚ್ಚಳ: ಮೂರು ಸೇತುವೆ ಮುಳುಗಡೆ

## ಬ್ಯಾಡಗಿ, ರಾಣೆಬೆನ್ನೂರು, ರಟ್ಟಿಹಳ್ಳಿ ತಾಲ್ಲೂಕಿನಲ್ಲಿ ವಾಡಿಕೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಮಳೆ

• **ಉದಯವಾಹಿನಿ, ಹಾವೇರಿ**

ಜಿಲ್ಲೆಯಲ್ಲಿ ಹರಿಯುವ ವರದಾ ಹಾಗೂ ತುಂಗಭದ್ರಾ ನದಿಗಳಲ್ಲಿ ನೀರಿನ ಮಟ್ಟ ಕ್ರಮೇಣ ಹೆಚ್ಚಳವಾಗುತ್ತಿದ್ದು, ಈಗಾಗಲೇ ಮೂರು ಸೇತುವೆಗಳು ಮುಳುಗಡೆಯಾಗಿವೆ. ಇದರಿಂದಾಗಿ ಆರು ಗ್ರಾಮಗಳ ಜನರು, ತಮ್ಮ ನಿತ್ಯದ ಕೆಲಸಕ್ಕಾಗಿ ಪರ್ಯಾಯ ರಸ್ತೆಗಳ ಮೂಲಕ ಸಂಚರಿಸುತ್ತಿದ್ದಾರೆ. ಪಶ್ಚಿಮ ಘಟ್ಟಗಳ ಜಿಲ್ಲೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗುತ್ತಿದ್ದು, ಅದೇ ನೀರು ವರದಾ, ತುಂಗಭದ್ರಾ ನದಿಗಳ ಮೂಲಕ ಹಾವೇರಿಗೆ ಬರುತ್ತಿದೆ. ಹಾವೇರಿ ಜಿಲ್ಲೆಯಲ್ಲಿಯೂ ಕೆಲದಿನಗಳಿಂದ ಉತ್ತಮ ಮಳೆಯಾಗುತ್ತಿದ್ದು, ಇಲ್ಲಿ ಸಂಗ್ರಹವಾದ ನೀರು ಸಹ ನದಿಗಳಿಗೆ ಸೇರುತ್ತಿದೆ. ಮಳೆ ಪ್ರಮಾಣ ಹೆಚ್ಚಾಗಿರುವುದರಿಂದ ನದಿ ನೀರಿನ ಮಟ್ಟವೂ ಹೆಚ್ಚಳವಾಗುತ್ತಿವೆ. ಇದರಿಂದಾಗಿ ಮೂರು ಸೇತುವೆಗಳು ಮುಳುಗಡೆಯಾಗಿದ್ದು, ಸಂಚಾರ ಸಂಪರ್ಕ ಕಡಿತಗೊಂಡಿದೆ. ನದಿ ಸುತ್ತಮುತ್ತಲಿನ ಗ್ರಾಮಗಳು ಮುಳುಗಡೆ ಭೀತಿ ಎದುರಿಸುತ್ತಿವೆ.

ಹಾವೇರಿ ತಾಲ್ಲೂಕಿನ ನಾಗನೂರು ಹಾಗೂ ಕೂಡಲ ಗ್ರಾಮದ ನಡುವಿರುವ ವರದಾ ನದಿಯ ಕಿರು ಸೇತುವೆ ಮುಳುಗಡೆಯಾಗಿದ್ದು, 2 ಗ್ರಾಮಗಳ ಜನರು ಪರ್ಯಾಯ ಮಾರ್ಗವನ್ನು ಬಳಸುತ್ತಿದ್ದಾರೆ. ಸವಣೂರು ತಾಲ್ಲೂಕಿನ ಕಳಸೂರು ಗ್ರಾಮದಿಂದ ಕೋಳೂರು ಮೂಲಕ ದೇವಗಿರಿಗೆ ಸಂಪರ್ಕ ಕಲ್ಪಿಸುವ ಮಾರ್ಗದಲ್ಲಿರುವ ವರದಾ ನದಿಯ ಸೇತುವೆ ಸಹ ಮುಳುಗಡೆಯಾಗಿ ಹಲವು ದಿನಗಳಾಗಿವೆ. ಈ ಕಿರು ಸೇತುವೆ ಮೂಲಕ ಕೆಲ ನಿಮಿಷಗಳಲ್ಲಿ ಹಾವೇರಿ ತಲುಪುತ್ತಿದ್ದ ಗ್ರಾಮಸ್ಥರು, ಈಗ ಪರ್ಯಾಯ ಮಾರ್ಗದಲ್ಲಿ ಗಂಟೆಗಟ್ಟಲೇ ಪ್ರಯಾಣ ಮಾಡಬೇಕಾದ ಸ್ಥಿತಿ ನಿರ್ಮಾಣವಾಗಿದೆ. ಹಾನಗಲ್ ತಾಲ್ಲೂಕಿನ ಲಕಮಾಪುರ ಗ್ರಾಮದಿಂದ ಬಾಳಂಬೀಡ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಮಾರ್ಗದಲ್ಲಿರುವ ವರದಾ ನದಿ ಸಹ ತುಂಬಿ ಹರಿಯುತ್ತಿದೆ. ಈ ನದಿಯಲ್ಲಿ ನಿರ್ಮಿಸಿದ್ದ ಕಿರುಸೇತುವೆ ಸಹ ಮುಳುಗಡೆಯಾಗಿದ್ದು, ಸ್ಥಳೀಯರು ಪರ್ಯಾಯ ಮಾರ್ಗದಲ್ಲಿ ಸಂಚರಿಸುತ್ತಿದ್ದಾರೆ. 2024ರಲ್ಲಿ ಪಶ್ಚಿಮ ಘಟ್ಟಗಳಲ್ಲಿ ವಿಪರೀತ ಮಳೆಯಾಗಿದ್ದರಿಂದ, ವರದಾ, ತುಂಗಭದ್ರಾ ಎರಡೂ ನದಿಗಳು ತುಂಬಿ ಹರಿದಿದ್ದವು. ನದಿ ನೀರಲಗಿ, ಸವೂರು, ಚಿಕ್ಕ ಲಿಂಗದಹಳ್ಳಿ, ಕೋಣನತಂಬಗಿ ಸೇರಿದಂತೆ ಹಲವು ಗ್ರಾಮಗಳಲ್ಲಿ ಭಾಗಶಃ ನೀರು ನುಗ್ಗಿತ್ತು. ಬಂಕಾಪುರ ಬಳಿಯ ಸವೂರು ಸೇರಿದಂತೆ ಹಲವು ಗ್ರಾಮಗಳ ಜನರನ್ನು ಕಾಳಜಿ ಕೇಂದ್ರದಲ್ಲಿ ಇರಿಸಲಾಗಿತ್ತು. ಈ ವರ್ಷವೂ ಇದೇ ಪರಿಸ್ಥಿತಿ ಎದುರಾಗುವ ಮುನ್ಸೂಚನೆ ಇರುವುದಾಗಿ ನದಿ ತೀರದ ಗ್ರಾಮಗಳ ಜನರು ಹೇಳುತ್ತಿದ್ದಾರೆ.


ಉದಯವಾಹಿನಿ ಚಿತ್ರ

**ಶಾಲೆ, ಅಂಗನವಾಡಿಯ 5 ಕಟ್ಟಡಕ್ಕೆ ಹಾನಿ**

**ಜಿಲ್ಲೆಯಲ್ಲಿರುವ ಶಾಲೆ ಹಾಗೂ ಅಂಗನವಾಡಿಗೆ ಸಂಬಂಧಪಟ್ಟಂತೆ 5 ಕಟ್ಟಡಗಳಿಗೆ ಹಾನಿಯಾಗಿದೆ. 2043 ವಿದ್ಯುತ್ ಕಂಬಗಳು, 24 ಟ್ರಾನ್ಸ್‌ಫಾರ್ಮಗಳು, 2 ವಿದ್ಯುತ್ ಹೈಟೆನ್ಷನ್ ಟವರ್‌ಗಳು, 4.39 ಕಿ.ಮೀ. ವಿದ್ಯುತ್ ತಂತಿ ಸೇರಿ 299.55 ಲಕ್ಷದಷ್ಟು ಹಾನಿ ಆಗಿರುವುದಾಗಿ ಅಂದಾಜಿಸಲಾಗಿದೆ.**

**148.57 ಹೆಕ್ಟೇರ್ ಬೆಳೆ ಹಾನಿ**

**ಹಾವೇರಿ ಜಿಲ್ಲೆಯಲ್ಲಿ ಪೂರ್ವ ಮುಂಗಾರು ಹಾಗೂ ಮುಂಗಾರು ಮಳೆಯಿಂದಾಗಿ 148.57 ಹೆಕ್ಟೇರ್ ಪ್ರದೇಶದಲ್ಲಿದ್ದ ಬೆಳೆ ಹಾನಿಯಾಗಿದೆ, ಬೆಳೆ ಹಾನಿ ಬಗ್ಗೆ ಮಾಹಿತಿ ನೀಡಿರುವ ಜಿಲ್ಲಾಧಿಕಾರಿ ಬೆಳೆ ಹಾನಿ ಬಗ್ಗೆ ಜಂಟಿ ಸಮೀಕ್ಷೆಯಿಂದ ವರದಿ ಸಿದ್ಧಪಡಿಸಲಾಗಿದೆ. 102.80 ಹೆಕ್ಟೇರ್ ಪ್ರದೇಶದಲ್ಲಿದ್ದ ಕೃಷಿ ಬೆಳೆ ಹಾಗೂ 45.47 ಹೆಕ್ಟೇರ್ ಪ್ರದೇಶದಲ್ಲಿದ್ದ ತೋಟಗಾರಿಕೆ ಬೆಳೆ ಹಾನಿಯಾಗಿದೆ, ಬೆಳೆ ಪರಿಹಾರ ತಂತ್ರಾಂಶದಲ್ಲಿ 121.17 ಹೆಕ್ಟೇರ್ ಪ್ರದೇಶದ ಹಾನಿಗೆ ಸಂಬಂಧಪಟ್ಟ ಮಾಹಿತಿ ದಾಖಲಿಸಲಾಗಿದೆ. ಉಳಿದ 27.40 ಹೆಕ್ಟೇರ್ ಪ್ರದೇಶದ ಹಾನಿ ಮಾಹಿತಿಯನ್ನು ಕೆಲ ಕಾರಣಗಳಿಂದಾಗಿ ನಮೂದಿಸಲು ಸಾಧ್ಯವಾಗಿಲ್ಲ. ಪರಿಹಾರ ವಿತರಣೆಯೂ ಬಾಕಿಯಿದೆ**

**-ವಿಜಯಕುಮಾರ ದಾನಮ್ಮನವರ, ಜಿಲ್ಲಾಧಿಕಾರಿ**

**24 ಗಂಟೆಯಲ್ಲಿ 0.77 ಸೆ.ಮೀ. ಮಳೆ:** ಹಾವೇರಿ ಜಿಲ್ಲೆಯಾದ್ಯಂತ ಕೆಲ ದಿನಗಳಿಂದ ಉತ್ತಮ ಮಳೆಯಾಗುತ್ತಿದೆ. ಜುಲೈ 8ರ ಬೆಳಿಗ್ಗೆ 8.30 ಗಂಟೆಯಿಂದ ಜುಲೈ 9ರ ಬೆಳಿಗ್ಗೆ 8.30 ಗಂಟೆಯವರೆಗೆ 0.66 ಸೆಂ.ಮೀ. ವಾಡಿಕೆ ಮಳೆಯಿತ್ತು. ಆದರೆ, 0.77 ಸೆಂ.ಮೀ. ಮಳೆಯಾಗಿದೆ. ಶೇ 16.67ರಷ್ಟು ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿರುವುದು ಮಾಪಕದಲ್ಲಿ ದಾಖಲಾಗಿದೆ.

**ವಾಡಿಕೆಗಿಂತ ಶೇ 19.20ರಷ್ಟು ಮಳೆ ಕಡಿಮೆ:** ಜಿಲ್ಲೆಯಲ್ಲಿ ಜುಲೈ 1ರಿಂದ 9ರವರೆಗಿನ ಮಳೆ ಸುರಿದ ಪ್ರಮಾಣ ಗಮನಿಸಿದರೆ, ವಾಡಿಕೆಗಿಂದ ಶೇ 19.20ರಷ್ಟು ಕಡಿಮೆ ಮಳೆಯಾಗಿದೆ. ಜಿಲ್ಲೆಯಲ್ಲಿ 4.74 ಸೆಂ.ಮೀ. ಮಳೆಯಾಗಬೇಕಿತ್ತು. ಆದರೆ, ಕೇವಲ 3.83 ಸೆಂ.ಮೀ. ಮಳೆಯಾಗಿದೆ. ಶೇ 19.20ರಷ್ಟು ಮಳೆ ಕುಸಿತ ಕಂಡಿದೆ. ಮುಂಬರುವ ದಿನಗಳಲ್ಲಿ ಉತ್ತಮ ಮಳೆಯ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬ್ಯಾಡಗಿ, ರಾಣೆಬೆನ್ನೂರು, ರಟ್ಟಿಹಳ್ಳಿ ತಾಲ್ಲೂಕಿನಲ್ಲಿ ವಾಡಿಕೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗಿದೆ. ಹಾನಗಲ್, ಹಾವೇರಿ, ಹಿರೇಕೆರೂರು, ಸವಣೂರು, ಶಿಗ್ಗಾವಿ ತಾಲ್ಲೂಕಿನಲ್ಲಿ ವಾಡಿಕೆಗಿಂತಲೂ ಕಡಿಮೆ ಮಳೆಯಾಗಿದೆ ಎಂದು ಹೇಳಿವೆ.

# ಸಾಂಪ್ರದಾಯಿಕ ಕುರಿಗಾಹಿಗಳ ಹಿತರಕ್ಷಣೆ ಕಾಯ್ದೆ ಜಾರಿಗೆ ಒತ್ತಾಯ

• **ಉದಯವಾಹಿನಿ, ಜಮಖಂಡಿ**

ಸಾಂಪ್ರದಾಯಿಕ ಕುರಿಗಾಹಿಗಳ ಹಿತರಕ್ಷಣೆ ಕಾಯ್ದೆ ರೂಪಿಸಿ ಜಾರಿಗೆ ತರಬೇಕು ಎಂದು ಒತ್ತಾಯಿಸಿ ಕುರಿಗಾಹಿಗಳು, ಮುಖಂಡರು ನಗರದ ದೇಸಾಯಿ ವೃತ್ತದಿಂದ ಕುರಿಗಳ ಜೊತೆ ತಾಲ್ಲೂಕು ಆಡಳಿತ ಸೌಧದವರೆಗೆ ಪ್ರತಿಭಟನೆ ನಡೆಸಿ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು. ಮುಖಂಡ ಅರ್ಜುನ ದಳವಾಯಿ ಮಾತನಾಡಿ, 'ಕುರಿಗಾರರ ಮೇಲೆ ನಿರಂತರ ದೌರ್ಜನ್ಯ, ಹಲ್ಲೆ, ಜೀವ ಬೇದರಿಕೆ, ಕೊಲೆ, ಅತ್ಯಾಚಾರ, ಕುರಿ ಕಳ್ಳತನ, ಅರಣ್ಯಾಧಿಕಾರಿಗಳ ಲಂಚದ ಬೇಡಿಕೆ ಅಧಿಕ ಪ್ರಮಾಣದಲ್ಲಿ ನಡೆಯುತ್ತಿವೆ. ಸರ್ಕಾರವು ಎಲ್ಲಾ ವರ್ಗದ ಮಹಿಳೆಯರ ಪರ, ಮಕ್ಕಳ ಪರ, ಶೋಷಿತ ಸಮುದಾಗಳ ಪರ ಹಾಗೂ ವಿವಿಧ ವೃತ್ತಿಪರರ ಹಿತರಕ್ಷಣೆಗೆ ವಿಶೇಷ ಕಾಯ್ದೆಗಳನ್ನು ಜಾರಿ ಮಾಡಿ ಅವರ ರಕ್ಷಣೆ ಮಾಡಬೇಕು ಎಂದರು.

ಮುಖಂಡ ಹೂವಪ್ಪ ಉಷಾಕರ ಮಾತನಾಡಿ, ಗುಡ್ಡುಗಾಡು ಪ್ರದೇಶಗಳಲ್ಲಿ ಕುರಿ ಮೇಯಿಸಲು ಹೋದಾಗ ಅರಣ್ಯ ಇಲಾಖೆಯ ಅಧಿಕಾರಿಗಳಿಂದ ಹಾಗೂ ಸಿಬ್ಬಂದಿಗಳಿಂದ ನಿರಂತರ ಕಿರುಕುಳ,


ಉದಯವಾಹಿನಿ ಚಿತ್ರ

ದೌರ್ಜನ್ಯ ನಡೆಯುತ್ತಿವೆ, ಕುರಿಗಾರಿಕೆ ಮೂಲಕ ಕುಟುಂಬದ ಆರ್ಥಿಕ ಪರಿಸ್ಥಿತಿ ನಿಭಾಯಿಸುವ ಸಾಂಪ್ರದಾಯಿಕ ಕುಲ ಕಸಬಾಗಿದೆ, ಬೆಟ್ಟ-ಗುಡ್ಡಗಳನ್ನು ಒಳಗೊಂಡಂತೆ ಆಯಾ ಪ್ರದೇಶಕ್ಕೆ ಅನುಗುಣವಾಗಿ ಸ್ಥಳೀಯವಾಗಿ ಹಾಗೂ ಸಂಚರಿಸುವ ಮೂಲಕ ಪಾಲನೆ ಮಾಡುತ್ತಿದ್ದು, ಬಡವರ ಪಾಲಿಗೆ ಕುರಿಗಾರಿಕೆ ವರದಾನವಾದೆ' ಎಂದು ತಿಳಿಸಿದರು.

ಮುಖಂಡ ಯಲ್ಲಪ್ಪ ಹೆಗಡೆ ಮಾತನಾಡಿ, ಈಚೆಗೆ ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಉಗಲವಾಟ ಗ್ರಾಮದ ಕುರಿಗಾಯಿ ಶರಣಪ್ಪ ಚಿಮ್ಮನಕಟ್ಟಿ, ಬೀದರ ಜಿಲ್ಲೆಯ ಬಸವ ಕಲ್ಯಾಣ ತಾಲ್ಲೂಕಿನ ಕುರಿಗಾಯಿ ಪ್ರಭು ಮೇತ್ರಿ ಅವರನ್ನು ಕುರಿಗಳ್ಳರು ಕೊಲೆ ಮಾಡಿದ್ದು ಹಾಗೂ ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿನಲ್ಲಿ ಲಕ್ಷ್ಮೀ ಕಳ್ಳಮನಿ ಎಂಬ ಕುರಿಗಾಯಿ ಮಹಿಳೆಯನ್ನು ಅತ್ಯಾಚಾರ ಮಾಡಿ ಕೊಲೆ ಮಾಡಿರುವ ನಿದರ್ಶನಗಳು ನಮ್ಮ ಮುಂದಿವೆ ಎಂದರು.

**ಕುರಿ ಕಾಯಲು ಕುರಿಗಾಹಿಗಳಿಗೆ ಸರ್ಕಾರ ಅನುಕೂಲ ಮಾಡಬೇಕು. ಅರಣ್ಯ ಪ್ರದೇಶದಲ್ಲಿ ಬಿಟ್ಟರೆ ಅರಣ್ಯ ಇಲಾಖೆಯವರು ತೊಂದರೆ ಮಾಡುತ್ತಿದ್ದಾರೆ, ಆದ್ದರಿಂದ ಸರ್ಕಾರ ಶಾಶ್ವತ ಪರಿಹಾರ ನೀಡಬೇಕು. ಅರಣ್ಯ ಇಲಾಖೆ ಸಚಿವ ಈಶ್ವರ ಖಂಡ್ರೆಯವರ ಜೊತೆ ಮಾತನಾಡಿ ಶಾಶ್ವತ ಪರಿಹಾರಕ್ಕೆ ಮನವಿ ಮಾಡಲಾಗುವುದು, ಸ್ಥಳೀಯ ಸಮಸ್ಯೆಗಳ ಬಗ್ಗೆ ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿ ಸಮಸ್ಯೆಗಳನ್ನು ಪರಿಹರಿಸಲಾಗುವುದು**

**- ಆನಂದ ನ್ಯಾಮಗೌಡ, ಮಾಜಿ ಶಾಸಕ**

# ಮಳೆಗಾಗಿ ಕೆರೆ ಅಂಗಳದಲ್ಲಿ ಗಂಗಾ ಪೂಜೆ

• **ಉದಯವಾಹಿನಿ, ರೋಣ**

ತಾಲ್ಲೂಕಿನಾದ್ಯಂತ ಮುಂಗಾರು ಮಳೆ ಕೈಕೊಟ್ಟಿದ್ದು, ಇದರಿಂದ ಕಂಗಾಲಾದ ರೈತರು ದೇವರ ಮೊರೆ ಹೋಗುತ್ತಿದ್ದಾರೆ. ತಾಲ್ಲೂಕಿನ ಬಾಚಲಾಪುರ ಗ್ರಾಮದಲ್ಲಿ ಮಹಿಳೆಯರು ಮಳೆಗಾಗಿ ಕೆರೆಯಲ್ಲಿ ಗಂಗಾಪೂಜೆ ಕೈಗೊಂಡಿದ್ದು ಅದರ ಭಾಗವಾಗಿ ಗುರ್ಜಿ ಆಡಿ ದವಸಧಾನ್ಯ ಸಂಗ್ರಹ ಮಾಡಿ ಪ್ರಸಾದ ವಿತರಣೆ ಮಾಡಿದರು. ಉತ್ತರ ಕರ್ನಾಟಕದ ಮಳೆ ತರುವ ಸಾಂಪ್ರದಾಯಿಕ ದೇವರು ಎಂಬ ನಂಬಿಕೆ ಗುರ್ಜಿಗೆ ಇದ್ದು ಪ್ರತಿವರ್ಷ ಭಾದ್ರಪದ ಆಶ್ವೇಜ ಮಾಸಗಳಲ್ಲಿ ಹಳ್ಳಿಗಳಲ್ಲಿ ಮಳೆಯಾಗದೇ ಇದ್ದಾಗ ಗುರ್ಜಿ ಆಡುವುದು ಸಾಮಾನ್ಯ. ಗುರ್ಜಿ ಆಡಿ ಹೋದ ಏಳೆಂಟು ದಿನಗಳಲ್ಲಿ ಮಳೆ ಬರುತ್ತದೆ ಎಂಬ ಬಲವಾದ ನಂಬಿಕೆ ಇಲ್ಲಿನ ಜನರಲ್ಲಿದೆ.

ರೊಟ್ಟಿ ಬೇಯಿಸುವ ಹೆಂಚಿನ ಮೇಲೆ ಸಗಣಿಯಿಂದ ಗುರ್ಜಿ ತಯಾರಿಸಿ ಗರಿಕೆಯಿಂದ ಶೃಂಗರಿಸುತ್ತಾರೆ. ಅದನ್ನು ಹೆಂಚಿನ ಮೇಲಿಟ್ಟುಕೊಂಡು, ತಲೆಯ ಮೇಲೆ ಹೊತ್ತುಕೊಂಡು ಗ್ರಾಮದ ಓಣಿಗಳಲ್ಲಿ ತಿರುಗುತ್ತಾರೆ. ಆಗ ಮನೆಯವರು ತಂಬಿಗೆಯಲ್ಲಿ ನೀರು ತಂದು ಗುರ್ಜಿಯ ಮೇಲೆ ಸುರಿಯುತ್ತಾರೆ. ನೀರು ಹಾಕುವಾಗ ಗುರ್ಜಿ ಹೊತ್ತುಕೊಂಡ ಮಕ್ಕಳು ಗರಗರನೇ ತಿರುಗುತ್ತಾರೆ. ಆಗ ಪಕ್ಕದಲ್ಲಿನ ಯುವಕರು, ಮಕ್ಕಳು, ಮಹಿಳೆಯರು ಸೇರಿ ಗುರ್ಜಿಯ ಜಾನಪದ ಹಾಡು ಹಾಡುತ್ತಾರೆ. ನಂತರ ಗುರ್ಜಿಯಿಂದ ಸಂಗ್ರಹಿಸಿದ ಜೋಳವನ್ನು ಗಿರಣಿಯಲ್ಲಿ ಒಡೆಸಿ ಊರ ದೇಗುಲದ ಆವರಣದಲ್ಲಿಯೇ ನುಚ್ಚು, ಸಾರು ತಯಾರಿಸಿ ಮೇಘರಾಜನಿಗೆ ನೈವೇದ್ಯ ಮಾಡಿ ಪೂಜೆ ಮಾಡುತ್ತಾರೆ. ಪ್ರಸಕ್ತ ಸಾಲಿನಲ್ಲಿ ರೋಣ ತಾಲ್ಲೂಕಿನ ಹಲವು ಗ್ರಾಮಗಳಲ್ಲಿ ಮುಂಗಾರು ಮಳೆ ಕೊರತೆಯಾಗಿದ್ದು, ಈಗಾಗಲೇ ಹೆಸರು, ಮೆಕ್ಕೆಜೋಳ, ಈರುಳ್ಳಿ, ಶೇಂಗಾ ಬೆಳೆದಿರುವ ರೈತರಲ್ಲಿ ಬರ ಆವರಿಸುವ ಭೀತಿ ಉಂಟಾಗಿದೆ. ಅನಿವಾರ್ಯವಾಗಿ ಬಾಸಲಾಪುರ ಗ್ರಾಮದ ರೈತರು ದೇವರ ಮೊರೆ ಹೋಗುವಂತಾಗಿದೆ.


ಉದಯವಾಹಿನಿ ಚಿತ್ರ

**ಕೈ ಕೊಟ್ಟ ಮುಂಗಾರು**

# ಅನುಭವ ಮಂಟಪಕ್ಕೆ ಅಗತ್ಯ ಹಣ ಬಿಡುಗಡೆ ಭರವಸೆ

• **ಉದಯವಾಹಿನಿ, ಬಸವಕಲ್ಯಾಣ**

ನಗರದಲ್ಲಿನ ಅನುಭವ ಮಂಟಪ ನಿರ್ಮಾಣಕ್ಕೆ ಹಣದ ಕೊರತೆ ಆಗುವುದಿಲ್ಲ. ಹಂತಹಂತವಾಗಿ ಅನುದಾನ ನೀಡಲಾಗುತ್ತದೆ ಎಂದು ಕಂದಾಯ ಇಲಾಖೆ ಮುಖ್ಯ ಕಾರ್ಯದರ್ಶಿ ರಾಜೇಂದ್ರಕುಮಾರ ಕಠಾರಿಯಾ ಭರವಸೆ ನೀಡಿದ್ದಾರೆ. ಬಸವಕಲ್ಯಾಣ ಅಭಿವೃದ್ಧಿ ಮಂಡಳಿಯ ಸಭಾಂಗಣದಲ್ಲಿ ಆಯೋಜಿಸಿದ್ದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.ಮಂಟಪದ ಕಾಮಗಾರಿಗೆ ಮೊದಲು 612 ಕೋಟಿ ಅನುದಾನವಿತ್ತು. ರಾಜ್ಯ ಸರ್ಕಾರ ಈಚೆಗೆ ಮತ್ತೆ 132 ಕೋಟಿ ಹೆಚ್ಚಿಸಿ 742 ಕೋಟಿಯ ಪರಿಷ್ಕೃತ ಪಟ್ಟಿಗೆ ಅನುಮೋದನೆ ನೀಡಿದೆ. ಸಂಬಂಧಿತರು ಗುಣಮಟ್ಟದ ಕಾರ್ಯ ಕೈಗೊಳ್ಳಬೇಕು. ನಿಗದಿತ ಅವಧಿಯಲ್ಲಿ ಕೆಲಸ ಪೂರ್ಣಗೊಳಿಸಬೇಕು ಎಂದರು. ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಅಭಿವೃದ್ಧಿ ಮಂಡಳಿ ಆಯುಕ್ತ ಜಗನ್ನಾಥರೆಡ್ಡಿ, ಉಪ ವಿಭಾಗಾಧಿಕಾರಿ ಮುಕುಲ್ ಜೈನ್, ತಹಶೀಲ್ದಾರ್ ದತ್ತಾತ್ರೇಯ ಗಾದಾ ಮತ್ತಿತರರು ಉಪಸ್ಥಿತರಿದ್ದರು. ಸಭೆ ಬಳಿಕ ಮುಖ್ಯ ಕಾರ್ಯದರ್ಶಿಯವರು ಅನುಭವ ಮಂಟಪದ ಸ್ಥಳಕ್ಕೂ ಭೇಟಿ ನೀಡಿ ಪರಿಶೀಲಿಸಿದರು.


ಉದಯವಾಹಿನಿ ಚಿತ್ರ

**ಲ್ಯಾಪ್ ಟಾಪ್ ವಿತರಣೆ:** ಕಂದಾಯ ಇಲಾಖೆ ಮುಖ್ಯ ಕಾರ್ಯದರ್ಶಿ ರಾಜೇಂದ್ರಕುಮಾರ ಕಠಾರಿಯಾ ಅವರು ತಹಶೀಲ್ದಾರ್ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಸಭೆಯಲ್ಲಿ ಗ್ರಾಮ ಆಡಳಿತ ಅಧಿಕಾರಿಗಳಿಗೆ ಲ್ಯಾಪ್ ಟಾಪ್ ವಿತರಿಸಿದರು. ಅಭಿಲೇಖಾಲಯಕ್ಕೆ ಭೇಟಿ ನೀಡಿ ಕಂಪ್ಯೂಟರೀಕರಣ ವ್ಯವಸ್ಥೆ ಪರಿಶೀಲಿಸಿದರು.

**ನಾಡ ಕಚೇರಿ ಪರಿಶೀಲನೆ:** ತಾಲ್ಲೂಕಿನ ಮಂಠಾಳದ ನಾಡ ಕಚೇರಿಗೆ ರಾಜೇಂದ್ರಕುಮಾರ ಕಠಾರಿಯಾ ಭೇಟಿ ನೀಡಿ ಪರಿಶೀಲಿಸಿದರು. ಸರ್ಕಾರದ ಭೂಮಿ ಅತಿಕ್ರಮಣ ಆಗುವುದನ್ನು ತಡೆಯಬೇಕು. ಗ್ರಾಮಸ್ಥರಿಗೆ ನಿಗದಿತ ಸಮಯದಲ್ಲಿ ಸೌಲಭ್ಯ ಒದಗಿಸಬೇಕು ಎಂದು ಸಲಹೆ ನೀಡಿದರು.

# ಉದ್ಯೋಗ ಸೃಷ್ಟಿ ಗುರಿ: ಪರಿಪುರನ ನಾಥ

• **ಉದಯವಾಹಿನಿ, ಹುಬ್ಬಳ್ಳಿ**

ಕೇಂದ್ರ ಸಚಿವ ಸಂಪುಟವು ಉದ್ಯೋಗ ಆಧಾರಿತ ಪ್ರೋತ್ಸಾಹಧನ ಯೋಜನೆಗೆ ಅನುಮೋದನೆ ನೀಡಿದ್ದು, ಇದರಿಂದ ಉತ್ಪಾದನಾ ವಲಯಕ್ಕೆ, ಉದ್ಯೋಗಿಗಳಿಗೆ ಪ್ರೋತ್ಸಾಹಧನ ದೊರೆಯಲಿದೆ ಎಂದು ಹುಬ್ಬಳ್ಳಿ ವಲಯದ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ (ಗ್ರೇಡ್-1) ಪರಿಪುರನನಾಥ ಹೇಳಿದರು. ನಗರದ ಭವಿಷ್ಯ ನಿಧಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಅವರು, ಎಲ್ಲಾ ಕ್ಷೇತ್ರಗಳಲ್ಲಿ ಉದ್ಯೋಗ ಸೃಷ್ಟಿ ಉದ್ಯೋಗಿಗಳ ಸಾಮಾಜಿಕ ಭದ್ರತೆ ಹೆಚ್ಚಿಸುವುದು ಈ ಯೋಜನೆಯ ಉದ್ದೇಶವಾಗಿದೆ ಎಂದರು. ಆಗಸ್ಟ್ 1, 2025ರಿಂದ ಜುಲೈ 31, 2027ರ ನಡುವೆ ಸೃಷ್ಟಿಯಾಗುವ ಉದ್ಯೋಗಿಗಳಿಗೆ ಈ ಯೋಜನೆಯ ಲಾಭದೊರೆಯಲಿದೆ. ಈ ಎರಡು ವರ್ಷಗಳ ಅವಧಿಯಲ್ಲಿ ದೇಶದಲ್ಲಿ 3.5 ಕೋಟಿಗೂ ಹೆಚ್ಚು ಹೊಸ ಉದ್ಯೋಗಗಳು ಸೃಷ್ಟಿಸುವ ಗುರಿ ಹೊಂದಲಾಗಿದೆ ಎಂದರು. ಮೊದಲ ಬಾರಿಗೆ ಉದ್ಯೋಗ ಪಡೆಯುವ ಉದ್ಯೋಗಿಗಳಿಗೆ



ವರ್ಷದಲ್ಲಿ ಎರಡು ಕಂತುಗಳಲ್ಲಿ ಗರಿಷ್ಠ 15 ಸಾವಿರ ಪ್ರೋತ್ಸಾಹಧನ ನೀಡಲಾಗುತ್ತದೆ.

ಇದರೊಂದಿಗೆ ಉದ್ಯೋಗದಾತರಿಗೆ ಹೆಚ್ಚುವರಿ ಉದ್ಯೋಗ ಸೃಷ್ಟಿಗಾಗಿ ಎರಡು ವರ್ಷಗಳವರೆಗೆ ಪ್ರೋತ್ಸಾಹಧವನ್ನೂ ನೀಡಲಾಗುತ್ತದೆ ಎಂದರು. ಗರಿಷ್ಠ 1 ಲಕ್ಷವರೆಗಿನ ವೇತನ ಹೊಂದಿರುವ ಉದ್ಯೋಗಿಗಳಿಗೆ ಸಂಬಂಧಿಸಿದಂತೆ ಉದ್ಯೋಗದಾತರು ಈ ಪ್ರೋತ್ಸಾಹಧನ ಪಡೆಯುತ್ತಾರೆ. ಕನಿಷ್ಠ ಆರು ತಿಂಗಳವರೆಗೆ ಉದ್ಯೋಗ ಹೊಂದಿರುವ ಪ್ರತಿ ಹೆಚ್ಚುವರಿ ಉದ್ಯೋಗಿಗೆ ಸರ್ಕಾರವು ತಿಂಗಳಿಗೆ 3,000 ಪ್ರೋತ್ಸಾಹಧನ ನೀಡಲಿದೆ. ಇದನ್ನು ಎರಡು ವರ್ಷಗಳ ವರೆಗೆ ನೀಡಲಾಗುತ್ತದೆ. ತಯಾರಿಕಾ ವಲಯಕ್ಕೆ ಪ್ರೋತ್ಸಾಹಧನವನ್ನು 3, 4ನೇ ವರ್ಷಗಳ ತನಕ ವಿಸ್ತರಿಸಲಾಗುವುದು. ಇದರಿಂದ ಸುಮಾರು 2.60 ಕೋಟಿ ಜನರಿಗೆ ಹೆಚ್ಚುವರಿ ಉದ್ಯೋಗ ಸೃಷ್ಟಿಸಲು ಉದ್ಯೋಗದಾತರನ್ನು ಪ್ರೋತ್ಸಾಹಿಸುವ ನಿರೀಕ್ಷೆ ಇದೆ ಎಂದರು. 10 ಸಾವಿರ ತನಕ ಇಪಿಎಫ್ ವೇತನ ಹೊಂದಿರುವ ಉದ್ಯೋಗಿಗಳಿಗೆ ಅನುಗುಣವಾಗಿ ಪ್ರೋತ್ಸಾಹಧನ ಸಿಗಲಿದೆ ಎಂದರು. ಉದ್ಯೋಗಿಗಳಲ್ಲಿ ಉಳಿತಾಯ ಮನೋಭಾವ ಉತ್ತೇಜಿಸಲು ಹಾಗೂ ಉದ್ಯೋಗದಾತರಿಗೆ ಹೆಚ್ಚಿನ ಉದ್ಯೋಗಗಳನ್ನು ಸೃಜಿಸಲು ಅನುಕೂಲವಾಗುವ ನಿಟ್ಟಿನಲ್ಲಿ ಈ ಯೋಜನೆ ಸಹಾಯಕವಾಗಲಿದೆ ಎಂದು ವಿವರಿಸಿದರು.

**ಮೊದಲ ಕಂತಿನ ಪ್ರೋತ್ಸಾಹಧನವನ್ನು 6 ತಿಂಗಳ ಸೇವೆಯ ನಂತರ ಮತ್ತು 2ನೇ ಕಂತನ್ನು 12 ತಿಂಗಳ ಸೇವೆಯ ನಂತರ ನೇರವಾಗಿ ಉದ್ಯೋಗಿಯ ಖಾತೆಗೆ ಪಾವತಿಸಲಾಗುತ್ತದೆ, ಈ ಯೋಜನೆಯು ಎರಡು ಭಾಗಗಳನ್ನು ಒಳಗೊಂಡಿದೆ. ಮೊದಲ ಭಾಗವು ಉದ್ಯೋಗಿಗಳಿಗೆ ಪ್ರೋತ್ಸಾಹ ನೀಡುವಲ್ಲಿ ಗಮನ ಹರಿಸಿದರೆ, ಎರಡನೇ ಭಾಗವು ಉದ್ಯೋಗದಾತರ ಮೇಲೆ ಗಮನ ಹರಿಸಲಿದೆ ಎಂದರು.**

## ಅನಿರೀಕ್ಷಿತ ಭೇಟಿ, ಅಧಿಕಾರಿಗಳು ತಲ್ಲಣ ಪುರಸಭೆ ಅಧಿಕಾರಿಗಳ ವಿರುದ್ಧ ದೂರು

# ನೂತನ ಜಿಲ್ಲಾಧಿಕಾರಿಗಳ ಸುರೇಶ್ ಇಟ್ನಾಳ್ ಮಿಂಚಿನ ಸಂಚಾರ

• **ಉದಯವಾಹಿನಿ ಸುದ್ದಿ**

**ಕಾರಟಗಿ:** ಜಿಲ್ಲಾಧಿಕಾರಿಗಳಾದ ಸುರೇಶ್ ಇಟ್ನಾಳ್ ಇವರು ಗುರುವಾರ ಕಾರಟಗಿ ಪಟ್ಟಣಕ್ಕೆ ಭೇಟಿ ನೀಡಿದರು ಪುರಸಭೆಯ ನಗರೋಸ್ಥಾನದ ಅನುದಾನದಲ್ಲಿ ನಡೆಸಿದ ಕಾಮಗಾರಿಗಳ ವೀಕ್ಷಣೆಗಾಗಿ ಅನಿರೀಕ್ಷಿತವಾಗಿ ಪಟ್ಟಣಕ್ಕೆ ಭೇಟಿ ನೀಡಿರುವುದು ಅಧಿಕಾರಿಗಳಲ್ಲಿ ತಲ್ಲಣ ಮೂಡಿಸಿತು. ಪಟ್ಟಣದ ಪುರುಷರ ಬ್ಯಾಡ್ಮಿಂಟನ್ ಒಳಾಂಗಣ ಕ್ರೀಡೆಯ ಕಟ್ಟಡವನ್ನು ವೀಕ್ಷಿಸಿದರು.

ನಿರ್ಮಾಣ ಹಂತದ ಇಂದಿರಾ ಕ್ಯಾಂಟೀನ್ ಪರಿಶೀಲನೆ ನಡೆಸಿ ಕಾಮಗಾರಿ ಪೂರ್ಣಗೊಳಿಸಲು ಉಳಿದಿರುವ ಬಾಕಿ ಕೆಲಸ ಕಾರ್ಯಗಳನ್ನು ಆದಷ್ಟು ಬೇಗ ಪೂರ್ಣಗೊಳಿಸುವಂತೆ ಪುರಸಭೆ ಅಧಿಕಾರಿಗಳಿಗೆ ತಿಳಿಸಿದರು. ನಂತರ ಸಂತೆ ಮಾರುಕಟ್ಟೆ ಹತ್ತಿರದ ನಿರ್ಮಾಣ ಮಾಡಿರುವ ಪುರ ಸಭೆ ಮಳಿಗೆಗಳ ಪರಿಶೀಲಿಸಿದರು.



ಪಟ್ಟಣದಲ್ಲಿ ನಿರ್ಮಾಣ ಮಾಡಿರುವ ಮಳಿಗೆಗಳನ್ನು ಆದಷ್ಟು ಬೇಗ ಟೆಂಡರ್ ಕರೆದು ಅವುಗಳ ಸದುಪಯೋಗ ಪಡಿಸಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ತದನಂತರ ನೇರವಾಗಿ ಕಾರಟಗಿ ಕಂದಾಯ ಕಚೇರಿಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು


ಉದಯವಾಹಿನಿ ಚಿತ್ರ

ಕಂದಾಯ ಇಲಾಖೆಯ ಅಭಿಲೇಖಾಲಯ, ಭೂಮಿ ಕೇಂದ್ರ, ಪಹಣಿ ವಿತರಣೆ ಸಿಬ್ಬಂದಿ ವರ್ಗ ವಿಭಾಗಗಳಿಗೆ ಭೇಟಿ ನೀಡಿದರು ಈ ಸಂದರ್ಭದಲ್ಲಿ ಅಧಿಕಾರಿ ವರ್ಗದವರಿಗೆ ಸಾರ್ವಜನಿಕ ಹಿತಾಸಕ್ತಿಯ ಕುರಿತು ಆಡಳಿತಾತ್ಮಕ ಸಲಹೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಸಾಮಾಜಿಕ ಹೋರಾಟಗಾರ ಸುಂದರರಾಜ್ ಇವರು ಕಾರಟಗಿ ಪುರಸಭೆ ಅಧಿಕಾರಿಗಳ ವಿರುದ್ಧ ಜಿಲ್ಲಾಧಿಕಾರಿಗಳಿಗೆ ದೂರು ನೀಡಿದರು. ಪತ್ರಕರ್ತ ಮಂಜುನಾಥ್ ರವರು ಸಹ ಕಾಂಪೌಂಡ್ ನಿರ್ಮಾಣದಲ್ಲಿ ಆಗುತ್ತಿರುವ ಲೋಪದೋಷಗಳನ್ನು, ಹಳೆಯ ಬುನಾದಿಮೇಲೆ ನಿರ್ಮಾಣ ಮಾಡಿರುವ ಕಾಂಪೌಂಡ್ ನಿರ್ಮಾಣ ವಿರುದ್ಧ ವರದಿ ಮಾಡಿದ್ದರು. ಪಟ್ಟಣದ ಹಳೆ ಬಸ್ ಸ್ಟಾಂಡ್ ಹತ್ತಿರದ ಸರ್ಕಾರಿ ಬಾಲಕ ಬಾಲಕಿಯರ ಹಿರಿಯ ಪ್ರಾಥಮಿಕ ಶಾಲೆಯ ಹತ್ತಿರ ನಿರ್ಮಾಣಗೊಂಡಿರುವ ಶಾಲಾ ಕಾಂಪೌಂಡ್ 10 ಲಕ್ಷ ಕಾಮಗಾರಿಯಲ್ಲಿ ಅಧಿಕಾರಿಗಳು ಅಂದಾಜು ಪತ್ರಿಕೆಯ ಪ್ರಕಾರ ಕಾಮಗಾರಿ ನಡೆಸದೆ ಹಳೆಯ ಬುನಾದಿಯ ಮೇಲೆ ಕಾಂಪೌಂಡ್ ನಿರ್ಮಾಣ ಮಾಡಿ ಸುಮಾರು 03 ಲಕ್ಷಕ್ಕೂ ಅಧಿಕ ಹಣ ಭ್ರಷ್ಟಾಚಾರ ಮಾಡಿದ್ದಾರೆ ಈ ಕುರಿತು ಅಂದಿನ ಮುಖ್ಯಾಧಿಕಾರಿಗಳ ಗಮನಕ್ಕೂ ತಂದರೂ ಕೂಡ ಯಾವುದೇ ಪ್ರಯೋಜನವಾಗಿಲ್ಲ ಬುನಾದಿ ನಿರ್ಮಾಣಕ್ಕೆ ಮೀಸಲಿರಿಸಿದ ಹಣ ಅಧಿಕಾರಿಗಳು ಗುತ್ತಿಗೆದಾರರಿಗೆ ನೀಡಿದ್ದಾರೆ ಆದ್ದರಿಂದ ಈ ಕುರಿತು ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಮತ್ತು ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳುವಂತೆ ದೂರು ನೀಡಿದರು ಇದಕ್ಕೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳುವ ಭರವಸೆ ನೀಡಿದರು

**03 ಲಕ್ಷಕ್ಕೂ ಅಧಿಕ ಹಣ ಭ್ರಷ್ಟಾಚಾರ**

**ಪುರಸಭೆ ಮಳಿಗೆಗಳಿಗೆ ಸಂಬಂಧಿಸಿದಂತೆ ಟೆಂಡರ್ ಹೆಚ್ಚಿಗೆ ಆಗಿರುವುದರಿಂದ ಯಾರು ಮುಂದೆ ಬರ್ತಾ ಇಲ್ಲ ಆ ಕಾರಣಕ್ಕಾಗಿ ನಾವು ಸರ್ಕಾರದ ಗಮನಕ್ಕೆ ತಂದು ಶೇಕಡ 25ರಷ್ಟು ಟೆಂಡರ್‌ನಲ್ಲಿ ಕಡಿತಗೊಳಿಸಿ ಹೊಸದಾಗಿ ಟೆಂಡರ್ ಕರೆಯುತ್ತೇವೆ ಅದೇ ರೀತಿಯಾಗಿ ಕಳೆದ ಬಾರಿ ಆಲಿಕಲ್ಲು ಮಳೆಗೆ ಬೆಳೆ ಹಾನಿಯಾದ ರೈತರಿಗೆ ಬರಬೇಕಾದ ಬೆಳೆ ಪರಿಹಾರ ಕೆಲವು ತಾಂತ್ರಿಕ ದೋಷಗಳಿಂದ ಬಿಡುಗಡೆಯಾಗಿಲ್ಲ ಆದಷ್ಟು ಬೇಗ ಸರಿಪಡಿಸಿ ರೈತರಿಗೆ ಬೆಳೆ ಪರಿಹಾರ ನೀಡುತ್ತೇವೆ**

**-ಸುರೇಶ್ ಇಟ್ನಾಳ್, ನೂತನ ಜಿಲ್ಲಾಧಿಕಾರಿ**

**ತಹಶೀಲ್ ಕಚೇರಿಯಿಂದ ಹೊರ ಬಂದ ಜಿಲ್ಲಾಧಿಕಾರಿಗಳಿಗೆ ಪತ್ರಕರ್ತರು ತಾಲ್ಲೂಕಿಗೆ ಸಂಬಂಧಿಸಿದಂತೆ, ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದಂತೆ ಹಲವು ಪ್ರಶ್ನೆಗಳನ್ನು ಕೇಳ ಬಹುದಾಗಿತ್ತು ಆದರೆ ಕೇಳಿದ್ದು ಎರಡೇ ಎರಡು ಪ್ರಶ್ನೆ ಒಂದು ಪುರಸಭೆ ವಾಣಿಜ್ಯ ಮಳಿಗೆ ಸಂಬಂಧಿಸಿದಂತೆ ಇನ್ನೊಂದು ರೈತರ ಆಲಿಕಲ್ಲು ಮಳೆ ಬೆಳೆ ಹಾನಿಗೆ ಪರಿಹಾರ ಸಂಬಂಧಿಸಿದಂತೆ ಪ್ರಶ್ನೆಗಳನ್ನು ಕೇಳಿದರು**

40 ಬ್ಯಾಂಕ್ ಅಕೌಂಟ್, 106 ಕೋಟಿ ಆಸ್ತಿ; ಮತಾಂತರ ಗ್ಯಾಂಗ್ ಲೀಡರ್ ಚಂಗೂರ್ ಬಾಬಾ ಸಾಮ್ರಾಜ್ಯ ಕೆಡವಿದ ಯೋಗಿ ಸರ್ಕಾರ

# ಮತಾಂತರಕ್ಕೆ ಆಮಿಷವೊಡ್ಡುತ್ತಿದ್ದ ಚಂಗೂರ್ ಬಾಬಾ ಬಂಧನ

**ಲಖನೌ:** ಧಾರ್ಮಿಕ ಮತಾಂತರ ಗ್ಯಾಂಗ್‌ನ ಮಾಸ್ಟರ್‌ಮೈಂಡ್ ಜಮಾಲುದ್ದೀನ್ ಅಲಿಯಾಸ್ ಚಂಗೂರ್ ಬಾಬಾನನ್ನು ಉತ್ತರ ಪ್ರದೇಶ ಪೊಲೀಸರು ಬಂಧಿಸಿದ್ದಾರೆ. ಇಷ್ಟೇ ಅಲ್ಲದೇ ಆತನ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳುವ, ಬುಲ್ಡೋಜರ್‌ನಿಂದ ಧ್ವಂಸಗೊಳಿಸುವ ಕಾರ್ಯ ಕೂಡ ಮುಂದುವರೆದಿದೆ. ಈ ಚಂಗೂರ್ ಬಾಬಾನ ಒಟ್ಟು ಆಸ್ತಿ ಮತ್ತು ಆತನ ಬ್ಯಾಂಕ್ ಬ್ಯಾಲೆನ್ಸ್ ನೋಡಿ, ಖುದ್ದು ಉತ್ತರ ಪ್ರದೇಶ ಪೊಲೀಸರು ದಂಗಾಗೂಗಿ ಹೋಗಿದ್ದಾರೆ.



ಒಂದು ಕಾಲದಲ್ಲಿ ಸೈಕಲ್‌ನಲ್ಲಿ ಉಂಗುರ ಮತ್ತು ತಾಯತಗಳನ್ನು ಮಾರಾಟ ಮಾಡುತ್ತಿದ್ದ ಜಮಾಲುದ್ದೀನ್ ಈಗ ಬರೋಬ್ಬರಿ 106 ಕೋಟಿ ರೂ. ಹಣ, 2 ಕೋಟಿ ರೂ. ಮೌಲ್ಯದ ಆಸ್ತಿಯ ಮಾಲೀಕನಾಗಿದ್ದಾನೆ. ಚಂಗೂರ್ ಬಾಬಾ ಬಳಿ ಒಟ್ಟು 40 ಬ್ಯಾಂಕ್ ಅಕೌಂಟ್‌ಗಳಿದ್ದು, ಬಹುತೇಕ ಹಣವು ಮಧ್ಯಪ್ರಾಚ್ಯದಿಂದ ಬರುತ್ತಿದೆ ಎಂಬ ಸಂಗತಿ ತನಿಖೆಯಿಂದ ಬಯಲಾಗಿದೆ. ಉತ್ತರ ಪ್ರದೇಶದ ಬಲರಾಂಪುರ ಜಿಲ್ಲೆಯಲ್ಲಿ ಇತ್ತೀಚೆಗೆ ಪತ್ತೆಯಾದ ಮತಾಂತರ ದಂಧೆಗೆ ಸಂಬಂಧಿಸಿದಂತೆ, ಚಂಗೂರ್ ಬಾಬಾ, ಅವನ ಆಪ್ತ ಸಹಚರ ನೀತು ಅಲಿಯಾಸ್ ನಸ್ರೀನ್ ಅವರನ್ನು, ಕಳೆದ ಲಖನೌ ಹೋಟೆಲ್‌ನಲ್ಲಿ ಬಂಧಿಸಲಾಯಿತು.

ಪೊಲೀಸ್ ತನಿಖೆ ಆರಂಭವಾಗುತ್ತಿದ್ದಂತೇ, ಜಮಾಲುದ್ದೀನ್ ಸುತ್ತಲೂ ಕುಣಿಕೆ ಬಿಗಿಯಾಗುತ್ತಿದೆ. ಚಂಗೂರ್ ಬಾಬಾ, ಆತನ ಸಹಚರರು ಬಡವರು, ಅಸಹಾಯಕ ಕಾರ್ಮಿಕರು, ದುರ್ಬಲ ವರ್ಗದವರು ಮತ್ತು ವಿಧವೆಯ ಮಹಿಳೆಯರಿಗೆ ಪ್ರೋತ್ಸಾಹ ಧನ, ಆರ್ಥಿಕ ನೆರವು, ವಿವಾಹದ ಭರವಸೆ ಅಥವಾ ಬಲವಂತದ ಬೆದರಿಕೆಯ ಮೂಲಕ ಆಮಿಷವೊಡ್ಡಿದ್ದಾರೆ. ಇದು ಧಾರ್ಮಿಕ ಮತಾಂತರಕ್ಕೆ ಸ್ಥಾಪಿತ ಕಾರ್ಯವಿಧಾನಗಳನ್ನು ಉಲ್ಲಂಘಿಸಿದೆ ಎಂದು ಉತ್ತರ ಪ್ರದೇಶ ಪೊಲೀಸರ ಅಧಿಕೃತ ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ. ಚಂಗೂರ್ ಬಾಬಾ ನೇತೃತ್ವದ ಗ್ಯಾಂಗ್‌ಗೆ ಯಾವುದೇ ಭಯೋತ್ಪಾದಕ ಸಂಬಂಧಗಳಿವೆಯೇ ಎಂದು ಯುಪಿ ಭಯೋತ್ಪಾದನಾ ನಿಗ್ರಹ ದಳ ತನಿಖೆ ನಡೆಸುತ್ತಿದೆ. ಗ್ಯಾಂಗ್ ವಿರುದ್ಧ ಪ್ರಕರಣ ದಾಖಲಿಸಿರುವ ಯುಪಿ ವಿಶೇಷ ಕಾರ್ಯಪಡೆ (ಎಸ್‌ಟಿಎಫ್) ಕೂಡ, ಈ ಕುರಿತು ತನಿಖೆ ಮಾಡುತ್ತಿದೆ. ಬಲರಾಂಪುರದಲ್ಲಿ ಗ್ಯಾಂಗ್‌ನಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಇತರ ವ್ಯಕ್ತಿಗಳ ಬಗ್ಗೆಯೂ, ಸ್ಥಳೀಯ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಈ ಮೂರು ಸಂಸ್ಥೆಗಳಲ್ಲದೆ, ಪೀರ್ ಬಾಬಾ ಎಂದೂ ಕರೆಯಲ್ಪಡುವ ಚಂಗೂರ್ ಬಾಬಾನ ಇತರೆ ಗಳಿಕೆಯನ್ನು ತನಿಖೆ ಮಾಡಲು, ಜಾರಿ ನಿರ್ದೇಶನಾಲಯ (ಇಡಿ) ಕೂಡ ಪ್ರತ್ಯೇಕ ಪ್ರಕರಣ ದಾಖಲಿಸಿದೆ.

ಇಡಿಯ ಲಖನೌ ಘಟಕವು ಚಂಗೂರ್ ಬಾಬಾನ ಆಸ್ತಿಯಲ್ಲಿ ಹಠಾತ್ ಏರಿಕೆಗೆ ಕಾರಣಗಳನ್ನು ಪತ್ತೆ ಮಾಡುತ್ತಿದೆ. ಈ ಹಣವನ್ನು ಯಾರು ಮತ್ತು ಯಾವ ಕಾರಣಕ್ಕೆ ಕಳುಹಿಸಿದ್ದಾರೆ ಎಂಬುದನ್ನು ಪತ್ತೆಮಾಡಲು ಇಡಿ ತನಿಖೆ ಆರಂಭಿಸಿದೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿಆದಿತ್ಯನಾಥ್, ಆರಂಭಿಕ ತನಿಖೆಯಲ್ಲಿ ಆರೋಪಿ ಜಮಾಲುದ್ದೀನ್, ಆತನ ಸಂಗಡಿಗರ ಚಟುವಟಿಕೆಗಳು ಸಮಾಜದ ವಿರುದ್ಧ ಮಾತ್ರವಲ್ಲ, ರಾಷ್ಟ್ರದ ವಿರುದ್ಧವೂ ಇವೆ ಎಂಬುದರತ್ತ ಬೊಟ್ಟು ಮಾಡುತ್ತಿವೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಕಾನೂನು, ಸುವ್ಯವಸ್ಥೆಗೆ ಸಂಬಂಧಿಸಿದ ವಿಷಯಗಳಲ್ಲಿ ಯಾವುದೇ ದಯೆ ಇರುವುದಿಲ್ಲ ಎಂದು ಪುನರುಚ್ಚಿಸಿರುವ ಯೋಗಿ ಆದಿತ್ಯನಾಥ್, ಆರೋಪಿಗಳು, ಅವರ ಗ್ಯಾಂಗ್‌ಗೆ ಸಂಬಂಧಿಸಿದ ಇತರರ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು, ಅವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ.

**ಅಧಿಕಾರಿಗಳ ಮೇಲೂ ಕಣ್ಣು**

**ಚಂಗೂರ್ ಬಾಬಾನ ಅಕ್ರಮ ಕೆಲಸದಲ್ಲಿ ಸಹಾಯ ಮಾಡುತ್ತಿದ್ದ ಸರ್ಕಾರಿ ವ್ಯವಸ್ಥೆಯಲ್ಲಿರುವ ಏಜೆಂಟರು, ಅಧಿಕಾರಿಗಳು ಮತ್ತು ಉದ್ಯೋಗಿಗಳ ಮೇಲೂ ತನಿಖಾ ಸಂಸ್ಥೆಗಳು ಕಣ್ಣಿಟ್ಟಿವೆ. ಚಂಗೂರ್ ಬಾಬಾ ಮತ್ತು ಆತನ ಗ್ಯಾಂಗ್ ಎಷ್ಟು ಜನರನ್ನು ಮತಾಂತರಿಸಿದ್ದಾರೆ ಮತ್ತು ಅವರು ಪಡೆದ ಹಣವನ್ನು ರಾಷ್ಟ್ರವಿರೋಧಿ ಚಟುವಟಿಕೆಗಳಲ್ಲಿ ಬಳಸಲಾಗಿದೆಯೇ ಎಬುದನ್ನು ಏಜೆನ್ಸಿಗಳು ತನಿಖೆ ನಡೆಸುತ್ತಿವೆ.**

**ಚಂಗೂರ್ ಬಾಬಾ ಸಾಮ್ರಾಜ್ಯ**

**ಚಂಗೂರ್ ಬಾಬಾ ಹಿಂದೊಮ್ಮೆ ಸೈಕಲ್‌ನಲ್ಲಿ ಉಂಗುರಗಳು ಮತ್ತು ತಾಯತಗಳನ್ನು ಮಾರಾಟ ಮಾಡುತ್ತಿದ್ದ. ನಂತರ ಆತ ಚಂಗೂರ್ ಗ್ರಾಮದಲ್ಲಿ ಗಣ್ಯ ವ್ಯಕ್ತಿಯಾಗಿ ಗುರುತಿಸಿಕೊಂಡ. ಬಡವರಿಗೆ ಸಹಾಯ ಮಾಡುವ ನೆಪದಲ್ಲಿ ಹಂತ ಹಂತವಾಗಿ ಮೇಲೆರಿದ ಚಂಗೂರ್ ಬಾಬಾ, ಮತಾಂತರ ಕಾರ್ಯ ಆರಂಭಿಸಿದ್ದಲ್ಲದೇ ಇದಕ್ಕಾಗಿ ವಿದೇಶಗಳಿಂದಲೂ ಆರ್ಥಿಕ ನೆರವು ಪಡೆಯಲಾರಂಭಿಸಿದ. ಇಲ್ಲಿಯವರೆಗೆ ದೊರೆತ ದಾಖಲೆಗಳ ಆಧಾರದ ಮೇಲೆ, ಚಂಗೂರ್ ಬಾಬಾ ಬಳಿ 40 ವಿಭಿನ್ನ ಬ್ಯಾಂಕ್ ಖಾತೆಗಳಿವೆ. ಈ ಖಾತೆಗಳಲ್ಲಿ 106 ಕೋಟಿ ರೂ. ಮೌಲ್ಯದ ಹಣವನ್ನು ಜಮಾ ಮಾಡಲಾಗಿದೆ. ಪೊಲೀಸ್ ತನಿಖೆಯ ಪ್ರಕಾರ, ಈ ಎಲ್ಲಾ ಹಣವು ಮಧ್ಯಪ್ರಾಚ್ಯದ ಇಸ್ಲಾಮಿಕ್ ದೇಶಗಳಿಂದ ಬಂದಿದೆ.**

**ಯಾವುದೇ ದಯೆ ಇರುವುದಿಲ್ಲ**

## ಏಡ್ಸ್ ನಿಯಂತ್ರಣಕ್ಕೆ ಅಮೆರಿಕ ನೆರವು ಸ್ಥಗಿತದಿಂದ ಸಂಕಷ್ಟ: ವಿಶ್ವಸಂಸ್ಥೆ

**ಲಂಡನ್:** 'ಏಡ್ಸ್' ನಿಯಂತ್ರಣ ಕಾರ್ಯಕ್ರಮಕ್ಕೆ ಅಮೆರಿಕ ಹಠಾತ್ತನೆ ಹಣಕಾಸು ನೆರವು ಸ್ಥಗಿತಗೊಳಿಸಿರುವುದರಿಂದ ಏಡ್ಸ್ ರೋಗಿಗಳಿಗೆ ಸಂಕಷ್ಟ ಎದುರಾಗಿದೆ ಎಂದು ವಿಶ್ವಸಂಸ್ಥೆ ಕಳವಳ ವ್ಯಕ್ತಪಡಿಸಿದೆ. ಆರು ತಿಂಗಳಿಂದ ಆರ್ಥಿಕ ನೆರವನ್ನು ಅಮೆರಿಕ ಹಿಂಪಡೆದಿದೆ. ಇದು ವ್ಯವಸ್ಥಿತ ಆಘಾತಕ್ಕೆ ಕಾರಣವಾಗಿದೆ ಎಂದು ವಿಶ್ವಸಂಸ್ಥೆಯ ಅಧಿಕಾರಿಗಳು ಹೇಳಿದ್ದಾರೆ. ಆರ್ಥಿಕ ನೆರವನ್ನು ಅಮೆರಿಕ ಮುಂದುವರಿಸದಿದ್ದರೆ 2029ರ ವೇಳೆಗೆ 40 ಲಕ್ಷಕ್ಕೂ ಹೆಚ್ಚು ಜನರು ಏಡ್ಸ್ ಸಂಬಂಧಿತ ರೋಗಗಳಿಗೆ ಬಲಿಯಾಗಲಿದ್ದಾರೆ. ಅಲ್ಲದೆ 60 ಲಕ್ಷಕ್ಕೂ ಹೆಚ್ಚು ಜನರು ಎಚ್‌ಐವಿ ಸೋಂಕಿಗೆ ತುತ್ತಾಗುವ ಸಾಧ್ಯತೆಗಳಿವೆ ಎಂದು ಅವರು ಅಂಕಿ ಅಂಶ ನೀಡಿದ್ದಾರೆ. ಹಲವು ವರ್ಷಗಳಿಂದ ಅಮೆರಿಕ ನೀಡುತ್ತಿದ್ದ ನೆರವಿನಿಂದ ಈ ಕಾಯಿಲೆಯಿಂದ ಮೃತಪಡುವವರ ಸಂಖ್ಯೆ ಗಣನೀಯವಾಗಿ ತಗ್ಗಿತ್ತು. ವಿಶ್ವದಾದ್ಯಂತ ದುರ್ಬಲರ ಜೀವ ಉಳಿಸಲು ಇದು ನೆರವಾಗಿತ್ತು ಎಂದು ಅವರು ಹೇಳಿದ್ದಾರೆ. ಆರ್ಥಿಕ ಕೊರತೆಯ ಕಾರಣ ಹಲವು ಆರೋಗ್ಯ ಸೌಲಭ್ಯಗಳನ್ನು ಮುಚ್ಚಲಾಗುತ್ತಿದೆ. ಸಾವಿರಾರು ಆರೋಗ್ಯ ಚಿಕಿತ್ಸಾಲಯಗಳಲ್ಲಿ ಸಿಬ್ಬಂದಿ ಇಲ್ಲವಾಗಿದ್ದಾರೆ. ಎಚ್‌ಐವಿ ಪರೀಕ್ಷಾ ಕಾರ್ಯಗಳಿಗೆ ಅಡ್ಡಿಯಾಗಿದ್ದು, ಏಡ್ಸ್ ನಿಯಂತ್ರಣ ಚಟುವಟಿಕೆಗಳಿಗೆ ಹಿನ್ನಡೆಯಾಗಿದೆ. ಅಲ್ಲದೆ ಈ ಕಾರ್ಯದಲ್ಲಿ ತೊಡಗಿದ್ದ ಹಲವು ಸಮುದಾಯಿಕ ಸಂಸ್ಥೆಗಳು ಚಟುವಟಿಕೆಗಳನ್ನು ಕಡಿಮೆಗೊಳಿಸಿವೆ, ಇನ್ನೂ ಕೆಲವು ಕೆಲಸವನ್ನೇ ನಿಲ್ಲಿಸಿವೆ' ಎಂದು ಯುಎನ್‌ಎಐಡಿಎಸ್ ಗುರುವಾರ ಬಿಡುಗಡೆ ಮಾಡಿದ ವರದಿಯಲ್ಲಿ ಉಲ್ಲೇಖಿಸಿದೆ. 2025ರಲ್ಲಿ ಜಾಗತಿಕ ಎಚ್‌ಐವಿ ನಿಯಂತ್ರಣ ಕಾರ್ಯಕ್ರಮಕ್ಕೆ 4 ಬಿಲಿಯನ್ ಡಾಲರ್ ನೆರವು ನೀಡುವ ವಾಗ್ದಾನವನ್ನು ಅಮೆರಿಕ ಮಾಡಿತ್ತು. ಆದರೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಆದೇಶದ ಮೇರೆಗೆ ಜನವರಿಯಿಂದ ಈ ನೆರವು ಸ್ಥಗಿತಗೊಂಡಿದೆ ಎಂದು ಮೂಲಗಳು ತಿಳಿಸಿವೆ.




## ಲೈಬೀರಿಯನ್ ಹಡಗಿನ ಮೇಲೆ ಹೌತಿ ಬಂಡುಕೋರರ ದಾಳಿ

**ದುಬೈ:** ಲೈಬೀರಿಯನ್ ಧ್ವಜ ಹೊಂದಿದ್ದ ಎಟರ್ನಿಟಿ ಸರಕು ಹಡಗಿನ ಮೇಳೆ ಯೆಮೆನ್ ಹೌತಿ ಬಂಡುಕೋರರು ದಾಳಿ ಮಾಡಿದ್ದಾರೆ. ಈ ದಾಳಿಗೆ ಹಡಗಿನಲ್ಲಿದ್ದ 25 ಜನರಲ್ಲಿ ಕೇವಲ 6 ಜನರನ್ನು ಮಾತ್ರ ರಕ್ಷಿಸಲಾಗಿದೆ. ವಾರ್ಷಿಕವಾಗಿ 1 ಟ್ರಿಲಿಯನ್ ಡಾಲರ್ ಮೌಲ್ಯದ ಸರಕುಗಳು ಒಮ್ಮೆ ಹಾದುಹೋದ ನಿರ್ಣಾಯಕ ಸಮುದ್ರ ವ್ಯಾಪಾರ ಮಾರ್ಗದಲ್ಲಿ ಹೌತಿಗಳು ನಡೆಸಿದ ಅತ್ಯಂತ ಗಂಭೀರ ದಾಳಿ ಇದಾಗಿದೆ.

ನವೆಂಬರ್ 2023 ರಿಂದ ಡಿಸೆಂಬರ್ 2024 ರವರೆಗೆ, ಇಸ್ರೇಲ್-ಹಮಾಸ್ ಯುದ್ಧದ ಸಮಯದಲ್ಲಿ ಗಾಜಾ ಪಟ್ಟಿಯಲ್ಲಿ ಪ್ಯಾಲೆಸ್ಟೀನಿಯನ್ನರನ್ನು ಬೆಂಬಲಿಸುವುದಾಗಿ ಬಂಡುಕೋರರು ವಿವರಿಸುವ ಕಾರ್ಯಾಚರಣೆಯಲ್ಲಿ ಹೌತಿಗಳು ಕ್ಷಿಪಣಿಗಳು ಮತ್ತು ಡ್ರೋನ್‌ಗಳೊಂದಿಗೆ 100 ಕ್ಕೂ ಹೆಚ್ಚು ಹಡಗುಗಳನ್ನು ಗುರಿಯಾಗಿಸಿಕೊಂಡಿದ್ದರು. ಯುದ್ಧದಲ್ಲಿ ಸಂಕ್ಷಿಪ್ತ ಕದನ ವಿರಾಮದ ಸಮಯದಲ್ಲಿ ಇರಾನಿನ ಬೆಂಬಲಿತ ಬಂಡುಕೋರರು ತಮ್ಮ ದಾಳಿಯನ್ನು ನಿಲ್ಲಿಸಿದರು. ನಂತರ ಅವರು ಯುಎಸ್ ಅಧ್ಯಕ್ಷ ಟ್ರಂಪ್ ಆದೇಶಿಸಿದ ತೀವ್ರವಾದ ವಾರಗಳ ಕಾಲದ ವಾಯುದಾಳಿಯ ಗುರಿಯಾಗಿದ್ದರು.

ಎಟರ್ನಿಟಿ ಮೇಲಿನ ದಾಳಿ ಹಾಗೂ ಭಾನುವಾರ ನಡೆದ ಮತ್ತೊಂದು ದಾಳಿಯಲ್ಲಿ ಬೃಹತ್ ವಾಹಕ ನೌಕೆ ಮ್ಯಾಜಿಕ್ ಸೀಸ್ ಮುಳುಗಿದ್ದು, ಹಡಗುಗಳು ನಿಧಾನವಾಗಿ ತನ್ನ ನೀರಿಗೆ ಮರಳಲು ಪ್ರಾರಂಭಿಸಿದ್ದರಿಂದ ಕೆಂಪು ಸಮುದ್ರದ ಸುರಕ್ಷತೆಯ ಬಗ್ಗೆ ಹೊಸ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಏತನ್ಮಧ್ಯೆ, ಇಸ್ರೇಲ್-ಹಮಾಸ್ ಯುದ್ಧದಲ್ಲಿ ಹೊಸ



ಸಂಭಾವ್ಯ ಕದನ ವಿರಾಮ ಹಾಗೆಯೇ ಟೆಹ್ರಾನ್‌ನ ಜರ್ಜರಿತ ಪರಮಾಣು ಕಾರ್ಯಕ್ರಮದ ಕುರಿತು ಯುಎಸ್, ಇರಾನ್ ನಡುವಿನ ಮಾತುಕತೆಗಳ ಭವಿಷ್ಯ ಸಮತೋಲನದಲ್ಲಿದೆ.

ಈ ವಾರದ ಆರಂಭದಲ್ಲಿ ಅನ್ಸರ್ ಅಲ್ಲಾಹ್ ಎರಡು ವಾಣಿಜ್ಯ ಹಡಗುಗಳ ಮೇಲೆ ದಾಳಿ ಮಾಡುವುದರೊಂದಿಗೆ ಕೆಂಪು ಸಮುದ್ರದಲ್ಲಿ ಉಲ್ಬಣಗೊಳ್ಳುವುದನ್ನು ನಾವು ಈಗ ತೀವ್ರ ಕಳವಳ ವ್ಯಕ್ತಪಡಿಸಿದ್ದೇವೆ, ಇದರ ಪರಿಣಾಮವಾಗಿ ನಾಗರಿಕರ ಜೀವ ಮತ್ತು ಸಾವುನೋವುಗಳು ಮತ್ತು ಪರಿಸರ ಹಾನಿಯ ಸಾಧ್ಯತೆಯಿದೆ ಎಂದು ವಿಶ್ವಸಂಸ್ಥೆಯ ವಿಶೇಷ ರಾಯಭಾರಿ ಹ್ಯಾನ್ಸ್ ಗ್ರಂಡ್‌ಬರ್ಗ್ ಬಂಡುಕೋರರಿಗೆ ಮತ್ತೊಂದು ಹೆಸರನ್ನು ಬಳಸಿಕೊಂಡು ಎಚ್ಚರಿಸಿದ್ದಾರೆ.

ಸಶಸ್ತ್ರ ಬಂಡುಕೋರರು ರಾಕೆಟ್ ಚಾಲಿತ ಗ್ರೆನೇಡ್‌ಗಳು ಸಣ್ಣ ಶಸ್ತ್ರಾಸ್ತ್ರಗಳಿಂದ ಹಡಗಿನ ಮೇಲೆ ದಾಳಿ ಮಾಡಿದ್ದರು, ನಂತರ ಎರಡು ಡ್ರೋನ್‌ಗಳು, ಬಾಂಬ್‌ಗಳನ್ನು ಹೊತ್ತ ಎರಡು ಡ್ರೋನ್ ದೋಣಿಗಳನ್ನು ಬಳಸಿ ಹಡಗಿನ ಮೇಲೆ ದಾಳಿ ಮಾಡಿದ್ದರು ಎಂದು ಪಡೆ ತಿಳಿಸಿದೆ. ಎಟರ್ನಿಟಿ ಬೆಳಿಗ್ಗೆ 7.50 ಕ್ಕೆ ಮುಳುಗಿತು ಎಂದು ಅದು ಹೇಳಿದೆ. ಲೈಬೀರಿಯಾದಿಂದ ಹೊರಟು ಗ್ರೀಕ್ ಸಂಸ್ಥೆಯ ಒಡೆತನದಲ್ಲಿದ್ದ ಈ ಹಡಗನ್ನು, ಇಸ್ರೇಲ್‌ನೊಂದಿಗೆ ವ್ಯವಹಾರ ನಡೆಸುತ್ತಿರುವ ತನ್ನ ಸಂಸ್ಥೆಯ ಮೇಲೆ ಮ್ಯಾಜಿಕ್ ಸೀಸ್‌ನಂತೆ ಗುರಿಯಾಗಿರಿಸಿಕೊಳ್ಳಲಾಗಿದೆ. ಎರಡೂ ಹಡಗುಗಳು ಪಡೆಗಳಿಂದ ಬೆಂಗಾವಲು ಕೋರಿಲ್ಲ ಎಂದು ತೋರುತ್ತದೆ. ಯುಎಸ್‌ಎಸ್ ನಿಮಿಟ್ಜ್ ಮತ್ತು ಯುಎಸ್‌ಎಸ್ ಕಾರ್ಲ್ ವಿನ್ಸನ್ ಎಂಬ ಎರಡು ವಿಮಾನವಾಹಕ ನೌಕೆಗಳನ್ನು ಮಧ್ಯಪ್ರಾಚ್ಯದಲ್ಲಿ ಹೊಂದಿವೆ, ಆದರೆ ಎರಡೂ ಅರೇಬಿಯನ್ ಸಮುದ್ರದಲ್ಲಿವೆ, ದಾಳಿಯ ಸ್ಥಳದಿಂದ ಅವು ದೂರದಲ್ಲಿವೆ.

**ಒಂದು ಗಂಟೆ ಕಾಲ ದಾಳಿ**

**ಹಡಗಿನಲ್ಲಿದ್ದ 25 ಜನರಲ್ಲಿ ಆರು ಜನರನ್ನು ರಕ್ಷಿಸಲಾಗಿದೆ. ಕೆಂಪು ಸಮುದ್ರದಲ್ಲಿನ ಯುರೋಪಿಯನ್ ಒಕ್ಕೂಟದ ನೌಕಾ ಕಾರ್ಯಾಚರಣೆಯ ಹೇಳಿಕೆಯ ಪ್ರಕಾರ, ಹಡಗಿನ ಸಿಬ್ಬಂದಿಯಲ್ಲಿ 22 ನಾವಿಕರು ಸೇರಿದ್ದಾರೆ, ಅವರಲ್ಲಿ 21 ಫಿಲಿಪಿನೋಗಳು, ಒಬ್ಬ ರಷ್ಯನ್ನರು, ಹಾಗೆಯೇ ಮೂವರು ಸದಸ್ಯರ ಭದ್ರತಾ ತಂಡ ಸೇರಿದ್ದಾರೆ. ರಕ್ಷಿಸಲ್ಪಟ್ಟವರಲ್ಲಿ ಐದು ಫಿಲಿಪಿನೋಗಳು, ಒಬ್ಬ ಭಾರತೀಯರು ಸೇರಿದ್ದಾರೆ. ಹಡಗಿನ ಮೇಲೆ ಒಂದು ಗಂಟೆ ಕಾಲ ನಡೆದ ದಾಳಿಯಲ್ಲಿ ಮೂವರು ಸಾವನ್ನಪ್ಪಿದ್ದಾರೆ ಎಂದು ಪಡೆ ತಿಳಿಸಿದೆ, ಅವರ ರಾಷ್ಟ್ರೀಯತೆಗಳು ತಕ್ಷಣಕ್ಕೆ ತಿಳಿದಿಲ್ಲ.**

## ದಕ್ಷಿಣ ಭಾರತೀಯರು ಡ್ಯಾನ್ಸ್ ಬಾರ್ ನಡೆಸಲು ಮಾತ್ರ ಯೋಗ್ಯರು

**ಮುಂಬೈ:** ಊಟ ಸರಿ ಇಲ್ಲ ಎಂದು ಶಾಸಕರ ಕ್ಯಾಂಟೀನ್ ಗುತ್ತಿಗೆದಾರನಿಗೆ ಥಳಿಸಿದ್ದ ಶಿವಸೇನೆ ಶಾಸಕ ಸಂಜಯ್ ಗಾಯಕ್ವಾಡ್ ಇಂದು ದಕ್ಷಿಣ ಭಾರತೀಯರು ಬರೀ ಡ್ಯಾನ್ಸ್ ಬಾರ್, ಲೇಡೀಸ್ ಬಾರ್‌ಗಳನ್ನು ನಡೆಸಲು ಮಾತ್ರ ಯೋಗ್ಯರು ಅವರಿಗೆ ಮಹಾರಾಷ್ಟ್ರದಲ್ಲಿ ಆಹಾರ ಪೂರೈಕೆ ಒಪ್ಪಂದಗಳನ್ನು ನೀಡಬಾರದು ಎನ್ನುವ ಮೂಲಕ ಹೊಸ ವಿವಾದ ಮೈಮೇಲೆ ಎಳೆದುಕೊಂಡಿದ್ದಾರೆ.




ಶೆಟ್ಟಿ ಎಂಬ ಗುತ್ತಿಗೆದಾರನಿಗೆ ಗುತ್ತಿಗೆಯನ್ನು ಏಕೆ ನೀಡಲಾಯಿತು ಅದನ್ನು ಮರಾಠಿ ವ್ಯಕ್ತಿಗೆ ನೀಡಿ. ನಾವು ಏನು ತಿನ್ನುತ್ತೇವೆ ಎಂದು ಅವರಿಗೆ ತಿಳಿದಿದೆ, ನಮಗೆ ಉತ್ತಮ ಗುಣಮಟ್ಟದ ಆಹಾರವನ್ನು ನೀಡುತ್ತಾರೆ. ದಕ್ಷಿಣ ಭಾರತೀಯರು ಡ್ಯಾನ್ಸ್ ಬಾರ್, ಲೇಡೀಸ್ ಬಾರ್‌ಗಳನ್ನು ನಡೆಸುತ್ತಾರೆ, ಮಹಾರಾಷ್ಟ್ರದ ಸಂಸ್ಕೃತಿ ಹಾಳು ಮಾಡುತ್ತಾರೆ. ಅವರು ನಮ್ಮ ಮಕ್ಕಳನ್ನು ಭ್ರಷ್ಟ ಗೊಳಿಸಿದ್ದಾರೆ. ಅವರು ಉತ್ತಮ ಆಹಾರವನ್ನು ಹೇಗೆ ನೀಡುತ್ತಾರೆ ಎಂದು ಗಾಯಕ್ವಾಡ್ ಪ್ರಶ್ನಿಸಿದ್ದಾರೆ.

ಶಾಸಕರ ನಿವಾಸದಲ್ಲಿ ಹಳಸಿದ ಆಹಾರವನ್ನು ಬಡಿಸಿದ ಆರೋಪದ ಮೇಲೆ ಕ್ಯಾಂಟೀನ್ ಗುತ್ತಿಗೆದಾರನನ್ನು ಹೊಡೆದ ಒಂದು ದಿನದ ನಂತರ ಬುಲ್ದಾನದ ಎರಡು ಅವಧಿಯ ಶಾಸಕರು ಈ ಹೇಳಿಕೆ ನೀಡಿದ್ದಾರೆ.

ನಾನು ಮಾಣಿಗೆ ಹೊಡೆದಿಲ್ಲ, ನಾನು ಮ್ಯಾನೇಜರ್‌ಗೆ ಹೊಡೆದಿದ್ದೇನೆ. ನನ್ನ ವಿಧಾನವು ತಪ್ಪಾಗಿರಬಹುದು ಆದರೆ ಗುರಿ ಸರಿಯಾಗಿತ್ತು. ಯಾರಾದರೂ ಅಂತಹ ಕೃತ್ಯವನ್ನು ಪುನರಾವರ್ತಿಸಿದರೆ ನಾನು ಮತ್ತೆ ಹೊಡೆಯುತ್ತೇನೆ. ಆಡಳಿತವು ಕೊಡು-ಕೊಳ್ಳುವಿಕೆಯಲ್ಲಿ ತೊಡಗುತ್ತದೆ, ಇದು ಕ್ರಮದಲ್ಲಿ ವಿಳಂಬಕ್ಕೆ ಕಾರಣವಾಗುತ್ತದೆ.

ಶೆಟ್ಟಿ ಎಂಬ ಗುತ್ತಿಗೆದಾರನಿಗೆ ಒಪ್ಪಂದವನ್ನು ಏಕೆ ನೀಡಲಾಯಿತು? ಬದಲಿಗೆ ಮರಾಠಿ ವ್ಯಕ್ತಿಗೆ ನೀಡಿ, ಗಾಯಕವಾಡ್ ಪುನರುಚ್ಚರಿಸಿದ್ದಾರೆ. ಅವರ ಹಲ್ಲೆಯ ವೀಡಿಯೊ ವೈರಲ್ ಆಗಿ ವ್ಯಾಪಕ ಖಂಡನೆಗೆ ಗುರಿಯಾದ ಕೂಡಲೇ, ಮಹಾರಾಷ್ಟ್ರ ಸಿಎಂ ದೇವೇಂದ್ರ ಫಡ್ನವೀಸ್ ಈ ಕೃತ್ಯವನ್ನು ಖಂಡಿಸಿದರು ಅಂತಹ ನಡವಳಿಕೆಯು ಶಾಸಕರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಳ್ಳುತ್ತಾರೆ ಎಂಬ ತಪ್ಪು ಸಂದೇಶವನ್ನು ರವಾನಿಸುತ್ತದೆ ಎಂದು ಹೇಳಿದರು.

**ಇಂತಹ ನಡವಳಿಕೆ ಯಾರಿಗೂ ಯೋಗ್ಯವಲ್ಲ. ಇದು ರಾಜ್ಯ ವಿಧಾನಸಭೆಯ ವರ್ಚಸ್ಸಿನ ಮೇಲೆ ಪರಿಣಾಮ ಬೀರುತ್ತದೆ, ಶಾಸಕರಾಗಿ ಎಲ್ಲಾ ಶಾಸಕರ ಬಗ್ಗೆ ಜನರಲ್ಲಿ ಅಧಿಕಾರ ದುರುಪಯೋಗವಿದೆ ಎಂಬ ತಪ್ಪು ಸಂದೇಶ ಹೋಗುತ್ತದೆ ಎಂದು ಫಡ್ನವೀಸ್ ಹೇಳಿದರು.**

## ಅಮರನಾಥನ ದರ್ಶನಕ್ಕೆ ಹೊರಟ 7300 ಭಕ್ತರು

**ಜಮ್ಮು:** ದಕ್ಷಿಣ ಕಾಶ್ಮೀರ ಹಿಮಾಲಯದಲ್ಲಿರುವ ವಾರ್ಷಿಕ ಅಮರನಾಥ ಯಾತ್ರೆಯಲ್ಲಿ ಭಾಗವಹಿಸಲು ಇಂದು ಬೆಳಿಗ್ಗೆ 7,300 ಕ್ಕೂ ಹೆಚ್ಚು ಯಾತ್ರಿಕರ ಹೊಸ ತಂಡ ಇಲ್ಲಿನ ಭಗವತಿ ನಗರ ಮೂಲ ಶಿಬಿರದಿಂದ ಹೊರಟಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಜುಲೈ 3 ರಂದು ಅನಂತನಾಗ್ ಜಿಲ್ಲೆಯ ಪಹಲ್ಗಾಮ್ ಮತ್ತು ಗಂಡೇರ್ಬಾಲ್ ಜಿಲ್ಲೆಯ ಬಾಲ್ಟಾಲ್ ಜೋಡಿ ಹಳಿಗಳಿಂದ 38 ದಿನಗಳ ವಾರ್ಷಿಕ ಯಾತ್ರೆ ಪ್ರಾರಂಭವಾದಾಗಿನಿಂದ ಸುಮಾರು 1.28 ಲಕ್ಷ ಯಾತ್ರಿಕರು 3,880 ಮೀಟರ್ ಎತ್ತರದಲ್ಲಿರುವ ಪವಿತ್ರ ಗುಹಾ ದೇವಾಲಯಕ್ಕೆ ಪೂಜೆ ಸಲ್ಲಿಸಿದ್ದಾರೆ. ಅಧಿಕಾರಿಗಳ ಪ್ರಕಾರ, 5,534 ಪುರುಷರು, 1,586 ಮಹಿಳೆಯರು, 25 ಮಕ್ಕಳು ಮತ್ತು 162 ಸಾಧುಗಳು ಮತ್ತು ಸಾಧ್ವಿಗಳಿರುವ 7,307 ಯಾತ್ರಿಕರ ಒಂಬತ್ತನೇ ತಂಡವು ಬೆಳಗಿನ ಜಾವ 3:15 ರಿಂದ ಬೆಳಗಿನ ಜಾವ 3:58 ರ ನಡುವೆ ಬಿಗಿ ಭದ್ರತೆಯ ನಡುವೆ 284 ವಾಹನಗಳಲ್ಲಿ ಹೊರಟಿದೆ.

ಗಂಡೇರ್ಬಾಲ್ ಜಿಲ್ಲೆಯ 14 ಕಿಮೀ ಬಾಲ್ಟಾಲ್ ಮಾರ್ಗಕ್ಕೆ 137 ವಾಹನಗಳಲ್ಲಿ 3,081 ಯಾತ್ರಿಕರು ಹೊರಟರೆ, ಅನಂತ್‌ನಾಗ್ ಜಿಲ್ಲೆಯ 48 ಕಿಮೀ ಸಾಂಪ್ರದಾಯಿಕ ಪಹಲ್ಗಾಮ್ ಮಾರ್ಗದ ಮೂಲಕ 147 ವಾಹನಗಳಲ್ಲಿ 4,226 ಯಾತ್ರಿಕರು ಹೊರಟಿದ್ದಾರೆ. ಇದರೊಂದಿಗೆ, ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಜುಲೈ 2 ರಂದು ಮೊದಲ ಬ್ಯಾಚ್‌ಗೆ ಚಾಲನೆ ನೀಡಿದ ನಂತರ ಒಟ್ಟು 62,788 ಯಾತ್ರಿಕರು ಜಮ್ಮು ಮೂಲ ಶಿಬಿರದಿಂದ ಕಣಿವೆಗೆ ತೆರಳಿದ್ದಾರೆ. ಏಪ್ರಿಲ್ 22 ರಂದು ಪಹಲ್ಗಾಮ್ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ ನಂತರ ಭಗವತಿ ನಗರ ಮೂಲ ಶಿಬಿರವನ್ನು ಬಹು ಹಂತದ ಭದ್ರತಾ ವ್ಯಾಪ್ತಿಯಲ್ಲಿ ಇರಿಸಲಾಗಿದೆ. ಯಾತ್ರೆಗಾಗಿ ಇಲ್ಲಿಯವರೆಗೆ 4 ಲಕ್ಷಕ್ಕೂ ಹೆಚ್ಚು ಜನರು ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಂಡಿದ್ದಾರೆ. ಯಾತ್ರೆ ಆಗಸ್ಟ್ 9 ರಂದು ಕೊನೆಗೊಳ್ಳಲಿದೆ.ಕಳೆದ ವರ್ಷ, ನೈಸರ್ಗಿಕವಾಗಿ ರೂಪುಗೊಂಡ ಮಂಜುಗಡ್ಡೆಯ ಲಿಂಗವನ್ನು ಹೊಂದಿರುವ ಗುಹಾ ದೇವಾಲಯದಲ್ಲಿ 5.10 ಲಕ್ಷಕ್ಕೂ ಹೆಚ್ಚು ಯಾತ್ರಿಕರು ಪೂಜೆ ಸಲ್ಲಿಸಿದರು.

## ದೆಹಲಿ, ಹರಿಯಾಣ, ಯುಪಿಯಲ್ಲಿ 4.4 ತೀವ್ರತೆಯ ಭೂಕಂಪ

**ದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿ, ಹರ್ಯಾಣ, ಉತ್ತರ ಪ್ರದೇಶದಲ್ಲಿ ಇಂದು ಭೂಕಂಪ ಸಂಭವಿಸಿದೆ. ರಿಕ್ಟರ್ ಮಾಪಕದಲ್ಲಿ 4.4 ತೀವ್ರತೆ ದಾಖಲಾಗಿದೆ. ಸುಮಾರು 10 ಸೆಕೆಂಡುಗಳ ಕಾಲ ಭೂಮಿ ಕಂಪಿಸಿದ ಅನುಭವವಾಯಿತು ಎಂದು ಜನರು ಹೇಳಿದ್ದಾರೆ. ಈ ಸಮಯದಲ್ಲಿ ಜನರು ತಮ್ಮ ಮನೆಗಳು ಮತ್ತು ಕಚೇರಿಗಳಿಂದ ಹೊರಗೆ ಓಡಿ ಬಂದಿದ್ದಾರೆ ಗುರುವಾರ ಬೆಳಗ್ಗೆ 9.04ಕ್ಕೆ ಭೂಮಿ ತೀವ್ರವಾಗಿ ಕಂಪಿಸಿತು. ದೆಹಲಿ, ನೋಯ್ಡಾ, ಗಾಜಿಯಾಬಾದ್, ಗುರುಗ್ರಾಮ್, ಫರಿದಾಬಾದ್, ಜಿಂದ್, ರೋಹ್ಟಕ್, ಭಿವಾನಿ, ಝುಜ್ಜರ್, ಬಹದ್ದೂರ್ಗಢ ಸೇರಿದಂತೆ ಹಲವು ನಗರಗಳಲ್ಲಿ ಕಂಪನದ ಅನುಭವವಾಯಿತು. ಭೂಕಂಪದ ಕೇಂದ್ರ ಬಿಂದು ಹರಿಯಾಣವಾಗಿದೆ. 2 ನಿಮಿಷಗಳಲ್ಲಿ ಝುಜ್ಜರ್‌ನಲ್ಲಿ ಎರಡು ಬಾರಿ ಭೂಕಂಪ ಸಂಭವಿಸಿದೆ. ಬೆಳಗ್ಗೆ 9.07 ಕ್ಕೆ ಝುಜ್ಜರ್‌ನಲ್ಲಿ ಮೊದಲ ಭೂಕಂಪ ಸಂಭವಿಸಿದೆ. ನಂತರ ಬೆಳಗ್ಗೆ 9.10 ಕ್ಕೆ ಸೌಮ್ಯ ಭೂಕಂಪ ಸಂಭವಿಸಿದೆ. ಹಠಾತ್ ಕಂಪನದಿಂದಾಗಿ ಜನರು ಭಯಭೀತರಾಗಿದ್ದರು.



ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರದ ಪ್ರಕಾರ, ಭೂಕಂಪದ ಕೇಂದ್ರಬಿಂದು ಝುಜ್ಜರ್‌ನಿಂದ ಉತ್ತರಕ್ಕೆ 10 ಕಿಲೋಮೀಟರ್ ದೂರದಲ್ಲಿತ್ತು ಮತ್ತು ಅದರ ತೀವ್ರತೆಯು ರಿಕ್ಟರ್ ಮಾಪಕದಲ್ಲಿ 4.4 ಎಂದು ಅಳೆಯಲಾಗಿದೆ. ಝುಜ್ಜರ್ ಪಕ್ಕದಲ್ಲಿರುವ ಬಹದ್ದೂರ್ಗಢದಲ್ಲೂ ಭೂಕಂಪನದ ಅನುಭವವಾಗಿದೆ.

ಬೆಳಗ್ಗೆ 9 ಗಂಟೆ ಸುಮಾರಿಗೆ ಕಂಪನದ ಅನುಭವವಾದ ನಂತರ ಜನರು ಬೀದಿಗಿಳಿದಿದ್ದರು ಎಂದು ಸ್ಥಳೀಯರು ತಿಳಿಸಿದ್ದಾರೆ. ಜನರು ಜಾಗರೂಕರಾಗಿರಲು ಆಡಳಿತವು ಮನವಿ ಮಾಡಿದೆ. ಭಿವಾನಿಯಲ್ಲಿಯೂ ಸೌಮ್ಯ ಕಂಪನಗಳು ದಾಖಲಾಗಿವೆ ಎಂದು ಎನ್‌ಸಿಎಸ್ ದೃಢಪಡಿಸಿದೆ, ಆದರೆ ಅದರ ತೀವ್ರತೆ, ಕೇಂದ್ರಬಿಂದುವಿನ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ. ರಿಕ್ಟರ್ ಮಾಪಕವನ್ನು ಬಳಸಿಕೊಂಡು ಭೂಕಂಪಗಳನ್ನು ಅಳೆಯಲಾಗುತ್ತದೆ. ಇದನ್ನು ರಿಕ್ಟರ್ ಮ್ಯಾಗ್ನಿಟ್ಯೂಡ್ ಟೆಸ್ಟ್ ಮಾಪಕ ಎಂದು ಕರೆಯಲಾಗುತ್ತದೆ.

## ತುರ್ತು ಪರಿಸ್ಥಿತಿಯ ಕರಾಳ ದಿನ ನೆನಪಿಸಿದ ಶಶಿ ತರೂರ್

**ತಿರುವನಂತಪುರಂ:** ಕಾಂಗ್ರೆಸ್ ಹಿರಿಯ ನಾಯಕ ಶಶಿ ತರೂರ್ ಅವರು ತುರ್ತು ಪರಿಸ್ಥಿತಿಯನ್ನು ಭಾರತದ ಇತಿಹಾಸದಲ್ಲಿ ಕೇವಲ ಒಂದು ಕರಾಳ ಅಧ್ಯಾಯವೆಂದು ನೆನಪಿಸಿಕೊಳ್ಳಬಾರದು, ಆದರೆ ಅದರ ಪಾಠಗಳನ್ನು ಸಂಪೂರ್ಣವಾಗಿ ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದ್ದಾರೆ. ಮಲಯಾಳಂ ದಿನಪತ್ರಿಕೆ ದೀಪಿಕಾದಲ್ಲಿ ಇಂದು ಪ್ರಕಟವಾದ ತುರ್ತು ಪರಿಸ್ಥಿತಿಯ ಕುರಿತು ಬರೆದ ಲೇಖನದಲ್ಲಿ, ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸದಸ್ಯರು 1975 ರ ಜೂನ್ 25 ರಿಂದ 1977 ರ ಮಾರ್ಚ್ 21 ರ ನಡುವೆ ಪ್ರಧಾನಿ ಇಂದಿರಾ ಗಾಂಧಿ ಘೋಷಿಸಿದ ತುರ್ತು ಪರಿಸ್ಥಿತಿಯ ಕರಾಳ ಯುಗವನ್ನು ನೆನಪಿಸಿಕೊಂಡರು ಮತ್ತು ಶಿಸ್ತು ಮತ್ತು ಸುವ್ಯವಸ್ಥೆಗಾಗಿ ಕೈಗೊಂಡ ಪ್ರಯತ್ನಗಳು ಹೆಚ್ಚಾಗಿ ಸಮರ್ಥಿಸಲಾಗದ ಕ್ರೌರ್ಯದ ಕೃತ್ಯಗಳಾಗಿ ಮಾರ್ಪಟ್ಟವು ಎಂದು ಅವರು ಬರೆದಿದ್ದಾರೆ. ಇಂದಿರಾ ಗಾಂಧಿಯವರ ಮಗ ಸಂಜಯ್ ಗಾಂಧಿ ಬಲವಂತದ ಸಂತಾನಹರಣ ಅಭಿಯಾನಗಳನ್ನು ನಡೆಸಿದರು, ಇದು ಇದಕ್ಕೆ ಕುಖ್ಯಾತ ಉದಾಹರಣೆಯಾಗಿದೆ. ಬಡ ಗ್ರಾಮೀಣ ಪ್ರದೇಶಗಳಲ್ಲಿ, ಅನಿಯಂತ್ರಿತ ಗುರಿಗಳನ್ನು ಪೂರೈಸಲು ಹಿಂಸೆ ಮತ್ತು ಬಲವಂತವನ್ನು ಬಳಸಲಾಯಿತು. ಅವರ ಪ್ರಕಾರ, ಇಂದಿನ ಭಾರತವು 1975ರ ಭಾರತವಲ್ಲ.ನಾವು ಹೆಚ್ಚು ಆತ್ಮವಿಶ್ವಾಸ, ಹೆಚ್ಚು ಅಭಿವೃದ್ಧಿ ಹೊಂದಿದ, ಹಲವು ವಿಧಗಳಲ್ಲಿ ಬಲವಾದ ಪ್ರಜಾಪ್ರಭುತ್ವವನ್ನು ಹೊಂದಿದ್ದೇವೆ.



ತುರ್ತು ಪರಿಸ್ಥಿತಿಯ ಪಾಠಗಳು ತೊಂದರೆದಾಯಕ ರೀತಿಯಲ್ಲಿ ಪ್ರಸ್ತುತವಾಗಿವೆ ಎಂದು ಹೇಳಿದರು. ಅಧಿಕಾರವನ್ನು ಕೇಂದ್ರೀಕರಿಸುವ, ಭಿನ್ನಾಭಿಪ್ರಾಯವನ್ನು ಮೌನಗೊಳಿಸುವ, ಸಾಂವಿಧಾನಿಕ ಸುರಕ್ಷತೆಗಳನ್ನು ಬೈಪಾಸ್ ಮಾಡುವ ಪ್ರಲೋಭನೆಯು ವಿವಿಧ ರೂಪಗಳಲ್ಲಿ ಮತ್ತೆ ಕಾಣಿಸಿಕೊಳ್ಳಬಹುದು ಎಂದು ಎಚ್ಚರಿಸಿದ್ದಾರೆ.

**ನವದೆಹಲಿಯಂತಹ ನಗರಗಳಲ್ಲಿ, ಕೊಳೆಗೇರಿಗಳನ್ನು ನಿರ್ದಯವಾಗಿ ಕೆಡವಿ ತೆರವುಗೊಳಿಸಲಾಯಿತು. ಸಾವಿರಾರು ಜನರನ್ನು ನಿರಾಶ್ರಿತರನ್ನಾಗಿ ಮಾಡಲಾಯಿತು. ಅವರ ಕಲ್ಯಾಣವನ್ನು ಪರಿಗಣಿಸಲಾಗಿಲ್ಲ ಎಂದು ತಿರುವನಂತಪುರಂ ಸಂಸದರು ಬರೆದಿದ್ದಾರೆ. ಪ್ರಜಾಪ್ರಭುತ್ವವನ್ನು ಹಗುರವಾಗಿ ಪರಿಗಣಿಸುವ ವಿಷಯವಲ್ಲ ಇದು ನಿರಂತರವಾಗಿ ಪೋಷಿಸಬೇಕಾದ ಮತ್ತು ಸಂರಕ್ಷಿಸಬೇಕಾದ ಅಮೂಲ್ಯ ಪರಂಪರೆಯಾಗಿದೆ ಎಂದು ಅವರು ಹೇಳಿದರು.ಇದು ಎಲ್ಲೆಡೆ ಜನರಿಗೆ ಶಾಶ್ವತವಾದ ಜ್ಞಾಪನೆಯಾಗಿ ಕಾರ್ಯನಿರ್ವಹಿಸಲಿ -ಶಶಿ ತರೂರ್, ಕಾಂಗ್ರೆಸ್ ಹಿರಿಯ ನಾಯಕ**

# ಶೇಖ್ ಹಸೀನಾ ಅವರಿಗೆ ಶುರುವಾಯ್ತು ಸಂಕಷ್ಟ

### ವಿದ್ಯಾರ್ಥಿಗಳ ಮೇಲೆ ಗುಂಡು ಹಾರಿಸುವಂತೆ ಆದೇಶ ನೀಡಿದ್ದ ಆಡಿಯೋ ಲೀಕ್

**ಢಾಕಾ:** ಕಳೆದ ವರ್ಷ ನಡೆದ ಸಾಮೂಹಿಕ ಪ್ರತಿಭಟನೆಯ ಸಂದರ್ಭದಲ್ಲಿ ವಿದ್ಯಾರ್ಥಿಗಳ ಮೇಲೆ ಗುಂಡು ಹಾರಿಸಲು ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರು ಭದ್ರತಾ ಪಡೆಗಳಿಗೆ ಆದೇಶಿಸಿದ್ದರು ಎಂಬುದು, ಬಿಬಿಸಿ ದೃಢೀಕರಿಸಿದ ಸೋರಿಕೆಯಾದ ಫೋನ್ ಕರೆಯೊಂದರಿಂದ ಬಹಿರಂಗಗೊಂಡಿದೆ.

ಧ್ವನಿಮುದ್ರಣದಲ್ಲಿ ಶೇಖ್ ಹಸೀನಾ ಅವರು ಪ್ರತಿಭಟನಾಕಾರರ ವಿರುದ್ಧ ಮಾರಕ ಆಯುಧಗಳನ್ನು ಬಳಸಲು ಅಧಿಕಾರ ನೀಡುತ್ತಾ, ಅವರು ಎಲ್ಲಿ ಕಂಡರೂ ಗುಂಡು ಹಾರಿಸಿ ಎಂದು ಭದ್ರತಾ ಪಡೆಗಳ ಹಿರಿಯ ಅಧಿಕಾರಿಗಳಿಗೆ ನಿರ್ದೇಶನ ನೀಡಿರುವುದು ಸ್ಪಷ್ಟವಾಗಿ ಕೇಳಿಸುತ್ತದೆ. ಇದು ಶೇಖ್ ಹಸೀನಾ ಅವರ ವಿರುದ್ಧದ ಮಾನವೀಯತೆ ವಿರುದ್ಧದ ಅಪರಾಧಗಳ ತನಿಖೆಗೆ ಮತ್ತಷ್ಟು ಬಲ ನೀಡಿದೆ. ಜುಲೈ 18, 2024ರಂದು ಢಾಕಾದಲ್ಲಿರುವ ಅವರ ಅಧಿಕೃತ ನಿವಾಸದಿಂದ ಮಾಡಿದ ಫೋನ್ ಕರೆಯಲ್ಲಿ, ಹಸೀನಾ ಅವರು, ನಾನು ಅವರೆಲ್ಲರನ್ನೂ ಗುರುವರ ರಾತ್ರಿ ಬಂಧಿಸಲು ಆದೇಶಿಸಿದ್ದೇನೆ. ಎಲ್ಲರಿಗೂ ಮಾಹಿತಿ ನೀಡಲಾಗಿದೆ, ಪ್ರತಿಭಟನಾನಿರತ ವಿದ್ಯಾರ್ಥಿಗಳು ಎಲ್ಲಿ ಕಂಡರೂ ಅವರ ಮೇಲೆ ಗುಂಡಿಕ್ಕಿ ಎಂದು ಸ್ಪಷ್ಟವಾಗಿ ಹೇಳಿದ್ದಾರೆ. ಕಳೆದ ವರ್ಷ ನಡೆದ ಬಾಂಗ್ಲಾದೇಶ ಪ್ರತಿಭಟನೆ ಇಡೀ ವಿಶ್ವದ ಗಮನ ಸೆಳೆದಿತ್ತು. ನಾಗರಿಕ ಸೇವಾ ಉದ್ಯೋಗ ಮೀಸಲಾತಿಗಾಗಿ ಆರಂಭವಾದ ಪ್ರತಿಭಟನೆಗಳು, ಶೀಘ್ರವಾಗಿ ದೇಶಾದ್ಯಂತ ದಂಗೆಯಾಗಿ ಉಲ್ಬಣಗೊಂಡು, ಅಂತಿಮವಾಗಿ ಶೇಖ್ ಹಸೀನಾ ಅವರನ್ನು ಅಧಿಕಾರದಿಂದ ಕೆಳಗಿಳಿಸುವಲ್ಲಿ ಯಶಸ್ವಿಯಾಯಿತು. 1971ರ ಯುದ್ಧದ ನಂತರ ದೇಶದಲ್ಲಿ ಸಂಭವಿಸಿದ ಭೀಕರ ರಾಜಕೀಯ ಹಿಂಸಾಚಾರವನ್ನು ದಮನ ಮಾಡಲು, ಶೇಖ್ ಹಸೀನಾ ಸರ್ಕಾರ ಅತ್ಯಂತ ಕ್ರೂರ ನೀತಿಯನ್ನು ಅನುಸರಿಸಿತ್ತು. ಈ ಹಿಂಸಾತ್ಮಕ ಪ್ರತಿಭಟನೆಗಳಲ್ಲಿ ಸುಮಾರು 1,400 ಜನರು ಸಾವನ್ನಪ್ಪಿದ್ದಾರೆ ಎಂದು ವಿಶ್ವಸಂಸ್ಥೆಯ ತನಿಖಾಧಿಕಾರಿಗಳು ಹೇಳುತ್ತಾರೆ. ಶೇಖ್ ಹಸೀನಾ ಅವರ ಮೇಲೆ ಮಾನವೀಯತೆಯ ವಿರುದ್ಧದ ಅಪರಾಧಗಳ ಆರೋಪ ಹೊರಿಸಲಾಗಿದೆ. ಇದರಲ್ಲಿ ಪ್ರಚೋದನೆ, ಪಿತೂರಿ, ಸಾಮೂಹಿಕ ಹತ್ಯೆಗಳಿಗೆ ಕಾರಣವಾದ ಆದೇಶಗಳನ್ನು ನೀಡುವುದು ಸೇರಿವೆ. ಅವರ ಸರ್ಕಾರ ಪತನಗೊಳ್ಳುವ ಸ್ವಲ್ಪ ಮೊದಲು ಅವರು ಭಾರತಕ್ಕೆ ಪಲಾಯನ ಮಾಡಿದ್ದರು. ಶೇಖ್ ಹಸೀನಾ ಅವರ ಜೊತೆಗೆ ಮಾಜಿ ಹಿರಿಯ ಪೊಲೀಸ್, ಸರ್ಕಾರಿ ಅಧಿಕಾರಿಗಳು ಸೇರಿದಂತೆ, ಒಟ್ಟು 203 ವ್ಯಕ್ತಿಗಳ ವಿರುದ್ಧ ಅಂತಾರಾಷ್ಟ್ರೀಯ ಕ್ರಿಮಿನಲ್ ನ್ಯಾಯಮಂಡಳಿ ದೋಷಾರೋಪಣೆ ಮಾಡಿದೆ. ಈ ಪೈಕಿ 73 ಜನರನ್ನು ಈಗಾಗಲೇ ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ. ಶೇಖ್ ಹಸೀನಾ ಪದಚ್ಯುತಗೊಂಡ ನಂತರ, ಬಾಂಗ್ಲಾದೇಶವು ನೊಬೆಲ್ ಶಾಂತಿ ಪ್ರಶಸ್ತಿ ವಿಜೇತ ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಆಡಳಿತದಲ್ಲಿದೆ.

ಯೂನಸ್ ಈಗ ದೇಶವನ್ನು ರಾಷ್ಟ್ರೀಯ ಚುನಾವಣೆಗಳಿಗೆ ಸಿದ್ಧಪಡಿಸುತ್ತಿದ್ದಾರೆ. ಮೊಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾದೇಶ ಮಧ್ಯಂತರ ಸರ್ಕಾರವು, ಶೇಖ್ ಹಸೀನಾ ಹಸ್ತಾಂತರಕ್ಕೆ ಭಾರತ ಸರ್ಕಾರಕ್ಕೆ ಮನವಿ ಮಾಡಿದೆ.



**ಭಾರತ ಸರ್ಕಾರಕ್ಕೆ ಮನವಿ**

**ಆಡಿಯೋ ಸಾಕ್ಷಿ**

**ಬಾಂಗ್ಲಾದೇಶದ ಪ್ರಾಸಿಕ್ಯೂಟರ್‌ಗಳು ಸೋರಿಕೆಯಾದ ಆಡಿಯೊವನ್ನು ಮಾನವೀಯತೆಯ ವಿರುದ್ಧದ ಅಪರಾಧಗಳಿಗಾಗಿ ಹಸೀನಾ ಅವರ ಗೈರುಹಾಜರಿ ವಿಚಾರಣೆಯಲ್ಲಿ ಪ್ರಮುಖ ಸಾಕ್ಷಿಯಾಗಿ ಬಳಸಲು ಯೋಜಿಸಿದ್ದಾರೆ. ನಿರಾಯುಧ ಪ್ರತಿಭಟನಾಕಾರರ ಮೇಲೆ ಮಾರಕ ಬಲಪ್ರಯೋಗಕ್ಕೆ ಹಸೀನಾ ನೇರವಾಗಿ ಅಧಿಕಾರ ನೀಡಿದ್ದಾರೆ ಎಂಬುದಕ್ಕೆ ಈ ಆಡಿಯೋ ಸ್ಪಷ್ಟ ಸೂಚನೆ ಎಂದು ಪ್ರಾಸಿಕ್ಯೂಟರ್‌ಗಳು ವಾದಿಸಿದ್ದಾರೆ.**

## ಮಿನಿ ನ್ಯೂಸ್

### ನಿವೃತ್ತಿ ನಂತರ ವೇದಗಳು ಓದುತ್ತಾ ಸಾವಯವ ಕೃಷಿ ಮಾಡ್ತಾರಂತೆ ಶಾ

**ನವದೆಹಲಿ:** ರಾಜಕೀಯ ನಿವೃತ್ತಿ ಬಳಿಕ ವೇದ, ಉಪನಿಷತ್ ಮತ್ತು ಸಾವಯವ ಕೃಷಿಯಲ್ಲಿ ತೊಡಗಿಕೊಳ್ಳುತ್ತೇನೆ ಎಂದು ಕೇಂದ್ರ ಸಚಿವ ಅಮಿತ್ ಶಾ ಹೇಳಿದ್ದಾರೆ. ರಾಜಸ್ಥಾನದಲ್ಲಿ ಸಹಕಾರ್ ಸಂವಾದ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾನು ನನ್ನ ನಿವೃತ್ತಿ ಜೀವನದ ಬಗ್ಗೆ ಯೋಚಿಸಿದ್ದೇನೆ. ರಾಜಕೀಯದಿಂದ ನಿವೃತ್ತಿ ಪಡೆದ ಬಳಿಕ ಮುಂದಿನ ಜೀವನವನ್ನು ವೇದಗಳ ಪಠಣ, ಉಪನಿಷತ್ ಪಾರಾಯಣ ಮತ್ತು ಸಾವಯವ ಕೃಷಿಯಲ್ಲಿ ತೊಡಗಿಕೊಳ್ಳಲಿದ್ದೇನೆ ಎಂದು ತಿಳಿಸಿದ್ದಾರೆ. ನನ್ನ ಬಳಿ ಸುಮಾರು ಎಂಟು ಸಾವಿರ ಪುಸ್ತಕಗಳಿವೆ. ಅವುಗಳನ್ನು ಓದಲು ಸಹ ನನಗೆ ಸಮಯ ಇಲ್ಲ. ಹೀಗಾಗಿ ನಿವೃತ್ತಿ ನಂತರ ಓದಿನತ್ತ ಗಮನ ಹರಿಸುವುದಾಗಿಯೂ ಅವರು ಹೇಳಿದ್ದಾರೆ.

ಶಾಸ್ತ್ರೀಯ ಸಂಗೀತದ ಬಗ್ಗೆಯೂ ಒಲವಿದೆ. ರಾಸಾಯನಿಕ ಗೊಬ್ಬರಗಳಿಂದ ಬೆಳೆದ ಗೋಧಿ ವಿವಿಧ ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಇದರಿಂದ ಬಿಪಿ, ಮಧುಮೇಹ, ಥೈರಾಯ್ಡ್ ಮತ್ತು ಕ್ಯಾನ್ಸರ್‌ನಂತಹ ಮಾರಕ ಕಾಯಿಲೆಗಳು ಬರುತ್ತವೆ. ನೈಸರ್ಗಿಕ ಕೃಷಿ ದೇಹವನ್ನು ರೋಗ ಮುಕ್ತಗೊಳಿಸಲು ಸಹಾಯ ಮಾಡುತ್ತದೆ ಮಾತ್ರವಲ್ಲದೆ ಔಷಧಿಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುತ್ತದೆ ಎಂದಿದ್ದಾರೆ.

### ವಿಮಾನಗಳ ಡಿಕ್ಕಿ: ಭಾರತ ಮೂಲದ ತರಬೇತಿ ನಿರತ ಪೈಲಟ್ ಸಾವು

**ಒಟ್ಟಾವ:** ಕೆನಡಾದ ಮನಿಟೊಬಾ ಪ್ರದೇಶದಲ್ಲಿ ಸಂಭವಿಸಿದ ವಿಮಾನ ಅಪಘಾತದಲ್ಲಿ ಭಾರತ ಮೂಲದ ತರಬೇತಿ ನಿರತ ಪೈಲಟ್ ಸೇರಿ ಇಬ್ಬರು ಮೃತಪಟ್ಟಿದ್ದಾರೆ ಎಂದು ಟೊರೆಂಟೊದ ಭಾರತದ ರಾಯಭಾರ ಕಚೇರಿ ತಿಳಿಸಿದೆ. ಮೃತ ಪೈಲಟ್‌ಅನ್ನು ಶ್ರೀಹರಿ ಸುಕೇಶ್ ಎಂದು ಗುರುತಿಸಲಾಗಿದ್ದು ಶ್ರೀಹರಿ ಹಾರಿಸುತ್ತಿದ್ದ ಸಿಂಗಲ್ ಎಂಜಿನ್ ವಿಮಾನಕ್ಕೆ ಕೆನಡಾದ ಯುವಕನೊಬ್ಬ ಚಲಾಯಿಸುತ್ತಿದ್ದ ಅದೇ ಮಾದರಿಯ ಮತ್ತೊಂದು ವಿಮಾನವು ಆಕಾಶದಲ್ಲಿ ಡಿಕ್ಕಿ ಹೊಡೆದು ದುರಂತ ಸಂಭವಿಸಿದೆ.

ದುಃಖಿತ ಕುಟುಂಬ, ಪೈಲಟ್ ತರಬೇತಿ ಶಾಲೆ, ಸ್ಥಳೀಯ ಪೊಲೀಸರಿಗೆ ಸಂಪರ್ಕದಲ್ಲಿದ್ದು, ಅಗತ್ಯವಿರುವ ಎಲ್ಲಾ ಸಹಾಯವನ್ನು ಒದಗಿಸಲಾಗಿದೆ ಎಂದು ಭಾರತದ ಕಾನ್ಸುಲೇಟ್ ಜನರಲ್ ಹೇಳಿದ್ದಾರೆ. ಇಬ್ಬರೂ ತರಬೇತಿ ನಿರತ ಪೈಲಟ್‌ಗಳು ಟೇಕ್‌ಆಫ್, ಲ್ಯಾಂಡಿಂಗ್ ಅಭ್ಯಾಸ ಮಾಡುತ್ತಿದ್ದರು. ಲ್ಯಾಂಡಿಂಗ್ ಸ್ಟ್ರಿಪ್ ಸಮೀಪಿಸುತ್ತಿದ್ದಾಗ ವಿಮಾನಗಳು ಡಿಕ್ಕಿ ಆಗಿವೆ ಎಂದು ಸಿಬಿಸಿ ವರದಿ ತಿಳಿಸಿದೆ. ಈ ಭೀಕರ ದುರಂತದ ಸಂಬಂಧ ಮಾಹಿತಿ ಕಲೆ ಹಾಕುತ್ತಿದ್ದು, ತನಿಖೆ ನಡೆಸಲಾಗುವುದು ಎಂದು ಕೆನಡಾ ಅಧಿಕಾರಿಗಳು ತಿಳಿಸಿದ್ದಾರೆ.

### ಮೂರು ತಾಣಗಳನ್ನು ಅಪಾಯದ ಪಟ್ಟಿಯಿಂದ ತೆಗೆದುಹಾಕಿದ ಯುನೆಸ್ಕೊ

**ವಿಶ್ವಸಂಸ್ಥೆ:** ವಿಶ್ವ ಪರಂಪರೆ ಸಮಿತಿಯು ಆಫ್ರಿಕಾ ಖಂಡದ ಮಡಗಾಸ್ಕರ್, ಈಜಿಪ್ಟ್, ಲಿಬಿಯಾದಲ್ಲಿರುವ ಮೂರು ಪರಂಪರಾ ಸ್ಥಳಗಳನ್ನು ಅಪಾಯದಲ್ಲಿರುವ ತಾಣಗಳ ಪಟ್ಟಿಯಿಂದ ತೆಗೆದುಹಾಕಿದೆ. ವಿಶ್ವಸಂಸ್ಥೆಯ ಯುನೆಸ್ಕೊ ಈ ಬಗ್ಗೆ ಮಾಹಿತಿ ನೀಡಿದೆ. ಫ್ರಾನ್ಸ್ ದೇಶದ ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ವಿಶ್ವ ಪರಂಪರೆ ಸಮಿತಿಯ 47ನೇ ಅಧಿವೇಶನದಲ್ಲಿ ಬುಧವಾರ ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದೆ ಎಂದು ಯುನೆಸ್ಕೊ ಹೇಳಿದೆ. ಮಡಗಾಸ್ಕರ್‌ನ ಮಳೆಕಾಡುಗಳು, ಈಜಿಪ್ಟ್‌ನ ಅಬು ಮೆನಾ ನಗರ, ಲಿಬಿಯಾದ ಘಡಾಮಸ್‌ನ ಹಳೆಯ ಪಟ್ಟಣವನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ. ನಾವು ಆಫ್ರಿಕಾದಲ್ಲಿರುವ ಪರಂಪರಾ ಸ್ಥಳಗಳ ರಕ್ಷಣೆಗೆ ವಿಶೇಷ ಪ್ರಯತ್ನ ಮಾಡುತ್ತಿದ್ದೇವೆ. ಸ್ಥಳೀಯರಿಗೆ ತರಬೇತಿ ನೀಡಿ ಸಂರಕ್ಷಣೆಗೆ ಮುಂದಾಗಿದ್ದೇವೆ. ಕೆಲವು ತಾಣಗಳನ್ನು ಅಪಾಯದ ಪಟ್ಟಿಯಿಂದ ಹೊರತರಲು ನಾನಾ ಕಾರ್ಯತಂತ್ರಗಳನ್ನು ರೂಪಿಸುತ್ತಿದ್ದೇವೆ. ಈ ಪ್ರಯತ್ನಗಳು ಫಲ ನೀಡುತ್ತಿವೆ ಎಂದು ಯುನೆಸ್ಕೊ ನಿರ್ದೇಶಕಿ ಆ್ಯಡ್ರೆ ಅಚೌಲೆ ಹೇಳಿದ್ದಾರೆ.

### ಕೊಯಮತ್ತೂರು ಸ್ಫೋಟ ಪ್ರಕರಣದ ಆರೋಪಿ ಸಾದಿಕ್ ಬಂಧನ

**ಚೆನ್ನೈ:** 1998ರ ಕೊಯಮತ್ತೂರು ಸ್ಫೋಟ ಪ್ರಕರಣದ ಪ್ರಮುಖ ಆರೋಪಿ ಸಾದಿಕ್‌ನನ್ನು ಕರ್ನಾಟಕದ ವಿಜಯಪುರದಲ್ಲಿ ಬಂಧಿಸಿರುವುದಾಗಿ ತಮಿಳುನಾಡು ಪೊಲೀಸರ ಭಯೋತ್ಪಾದನಾ ನಿಗ್ರಹ ದಳ ಗುರುವಾರ ಹೇಳಿದೆ. ಕೊಯಮತ್ತೂರು ಸ್ಫೋಟದಲ್ಲಿ 58 ಜನ ಮೃತರಾಗಿ 250 ಜನ ಗಾಯಗೊಂಡಿದ್ದರು. ಸಾದಿಕ್, ತಮಿಳುನಾಡಿನಾದ್ಯಂತ ನಡೆದ ಹಲವು ಹತ್ಯೆ ಪ್ರಕರಣಗಳಲ್ಲೂ ಆರೋಪಿಯಾಗಿದ್ದು, 26 ವರ್ಷಗಳ ಹಿಂದೆ ಅಂದರೆ 1996ರಲ್ಲಿ ತಲೆಮರೆಸಿಕೊಂಡಿದ್ದ. ಸಾದಿಕ್ ಕೊಯಮತ್ತೂರು ಮೂಲದವನಾಗಿದ್ದು, ರಾಜಾ, ಟೇಲರ್ ರಾಜಾ, ವಲರಂತ ರಾಜಾ, ಶಹಜಹಾನ್ ಅಬ್ದುಲ್ ಮಜೀದ್ ಮಕಂದರ್, ಶಹಜಹಾನ್ ಶೇಖ್ ಹೀಗೆ ಹಲವು ಹೆಸರುಗಳನ್ನು ಇಟ್ಟುಕೊಂಡು ತಲೆಮರೆಸಿಕೊಂಡಿದ್ದ. ಗುಪ್ತಚರ ಮಾಹಿತಿಯ ಮೇರೆಗೆ ಕಾರ್ಯನಿರ್ವಹಿಸಿದ ಭಯೋತ್ಪಾದನಾ ನಿಗ್ರಹ ದಳ, ಕೊಯಮತ್ತೂರು ನಗರ ಪೊಲೀಸರ ವಿಶೇಷ ತಂಡವು ಕರ್ನಾಟಕದ ವಿಜಯಪುರ ಜಿಲ್ಲೆಯಲ್ಲಿ ಆರೋಪಿಯನ್ನು ಬಂಧಿಸಿದೆ. ವಿಜಯಪುರದಲ್ಲಿ ಟೇಲರ್ ರಾಜಾ ಎನ್ನುವ ಹೆಸರಿನಲ್ಲಿದ್ದ ಸಾದಿಕ್ ವಾಸಿಸುತ್ತಿದ್ದ ಎಂದು ಎಟಿಎಸ್ ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ. ಈತ 1996ರಲ್ಲಿ ನಡೆದ ಪೆಟ್ರೋಲ್ ಬಾಂಬ್ ಸ್ಫೋಟ, 1996ರಲ್ಲಿ ನಗೋರ್‌ನಲ್ಲಿ ನಡೆದ ಸಯೀತಾ ಹತ್ಯೆ ಪ್ರಕರಣ, 1997ರಲ್ಲಿ ಮಧುರೈನಲ್ಲಿ ನಡೆದ ಜೈಲರ್ ಜಯಪ್ರಕಾಶ್ ಹತ್ಯೆ ಪ್ರಕರಣದಲ್ಲೂ ಆರೋಪಿಯಾಗಿದ್ದಾನೆ.

### ಅರ್ಹ ಆಟೊಮೊಬೈಲ್ ಕಂಪನಿಗಳಿಗೆ ಪಿಎಲ್‌ಐ ಪಾವತಿ: ಸಚಿವ ಎಚ್‌ಡಿಕೆ

**ನವದೆಹಲಿ:** ಉತ್ಪಾದನೆ ಆಧಾರಿತ ಉತ್ತೇಜನ ಯೋಜನೆಯ ಅಡಿ ಅರ್ಹ ಆಟೊಮೊಬೈಲ್ ಕಂಪನಿಗಳಿಗೆ ನೀಡಬೇಕಿರುವ ಮೊತ್ತವನ್ನು ತ್ವರಿತವಾಗಿ ನೀಡಲಾಗುವುದು ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. 2025ರ ಮಾರ್ಚ್‌ವರೆಗೆ ಪಿಎಲ್‌ಐ ಆಟೊ ಯೋಜನೆಯು 29,576 ಕೋಟಿ ಹೂಡಿಕೆ ಆಕರ್ಷಿಸಿದ್ದು, 44,987ಕ್ಕೂ ಹೆಚ್ಚು ಉದ್ಯೋಗ ಸೃಷ್ಟಿಸಿದೆ ಎಂದು 'ಎಕ್ಸ್'ನಲ್ಲಿ ಗುರುವಾರ ಹೇಳಿದ್ದಾರೆ. 2022-23ರ ಆರ್ಥಿಕ ವರ್ಷದಿಂದ 2026-27ರ ಆರ್ಥಿಕ ವರ್ಷದವರೆಗೆ ಆಟೊಮೊಬೈಲ್ ಮತ್ತು ವಾಹನದ ಬಿಡಿಭಾಗಗಳ ಉದ್ಯಮಕ್ಕೆ ಪಿಎಲ್‌ಐ ಯೋಜನೆ ಅಡಿ 25,938 ಕೋಟಿ ನಿಗದಿಪಡಿಸಲಾಗಿದೆ. 2024-25ರ ಆರ್ಥಿಕ ವರ್ಷದಲ್ಲಿ ನಾಲ್ಕು ಕಂಪನಿಗಳು ಪಿಎಲ್‌ಐಗೆ ಅರ್ಜಿ ಸಲ್ಲಿಸಿದ್ದು, 322 ಕೋಟಿ ಪಾವತಿಸಲಾಗಿದೆ ಎಂದು ತಿಳಿಸಿದ್ದಾರೆ.



